17 April 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಬದುಕಿನಲ್ಲಿ ನೆಮ್ಮದಿ ಇರದಿದ್ದರೆ ನಿಧಿ ಸಿಕ್ಕರೂ ಸಮಾಧಾನ ಸಿಗದು! ಹೀಗಾಗಿ ನಿಧಿಗಿಂತಲೂ ನೆಮ್ಮದಿಯೇ ಜೀವನಕ್ಕೆ ಅತಿ ಮುಖ್ಯ!
-ಸ್ನೇಹಾ ಆನಂದ್


info.varthaman@gmail.com



ಅಕ್ರಮ ಕಟ್ಟಡ ಕಾಮಗಾರಿ ನಿಲ್ಲಿಸಿ: ಎಸಿ ಕಾವ್ಯರಾಣಿ ಎಚ್ಚರಿಕೆ ಪುಟ ಸಂ. 2



ಮಾಚಿದೇವರ ಚಿಂತನೆಗಳನ್ನು ಎಲ್ಲರಿಗೂ ತಿಳಿಸಬೇಕಿದೆ: ಶಾಸಕ ಪುಟ ಸಂ. 3



ನಿತ್ಯ ಧ್ಯಾನ ಮಾಡುವುದರಿಂದ ವಿಷಯಗಳ ಗ್ರಹಿಸುವ ರೀತಿಯಲ್ಲಿ ಸುಧಾರಣೆ ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು | ಗ್ರಾಮಾಂತರ ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 148 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ರಾಜ್ಯದಲ್ಲಿ ಮುಂಗಾರು ಕೊರತೆ ಸಾಧ್ಯತೆ

## ಕುಡಿಯುವ ನೀರಿಗೆ ಮುಂಜಾಗ್ರತೆ ವಹಿಸಲು ಸಿಎಂ ಸಿದ್ದರಾಮಯ್ಯ ಸೂಚನೆ

**ಬೆಂಗಳೂರು:** ರಾಜ್ಯದ ಐದು ಜಿಲ್ಲೆಗಳನ್ನು ಹೊರತುಪಡಿಸಿ ಬೇರೆ ಎಲ್ಲಾ ಜಿಲ್ಲೆಗಳಲ್ಲಿ ಮುಂಗಾರು ಕೊರತೆ ಆಗುವ ಸಾಧ್ಯತೆ ಇದೆ. ಕುಡಿಯುವ ನೀರಿಗೆ ತೊಂದರೆ ಆಗದಂತೆ ಮುಂಜಾಗ್ರತೆ ಕ್ರಮ ಕೈಗೊಳ್ಳಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.

ವಿಧಾನಸೌಧದಲ್ಲಿ ಗುರುವಾರ ನಡೆದ ಗ್ರಾಮೀಣ ಹಾಗೂ ಪಟ್ಟಣ ಪ್ರದೇಶಗಳಲ್ಲಿನ ಕುಡಿಯುವ ನೀರು ಪೂರೈಕೆ ಕುರಿತಾಗಿ ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆ ಜರುಗಿತು.

ಈ ವರ್ಷ ವಾಡಿಕೆಗಿಂತ ಕಡಿಮೆ ಮುಂಗಾರು ಮಳೆಯಾಗುವ ಸಾಧ್ಯತೆಯಿದೆ ಎಂದು ಕೇಂದ್ರ



ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಆಗಸ್ಟ್ ತಿಂಗಳಲ್ಲಿ ವಾಡಿಕೆ ಮಳೆಯಾಗುವ ಸಾಧ್ಯತೆ ಇದೆ. ಸೆಪ್ಟಂಬರ್ ತಿಂಗಳಲ್ಲಿ ಮಳೆ ಕಡಿಮೆ ನಿರೀಕ್ಷಿಸಲಾಗಿದೆ ಎಂದರು.

ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಕುಡಿಯುವ ನೀರು ಪೂರೈಕೆಯನ್ನು ಖಾತ್ರಿಪಡಿಸಲು ಅನುದಾನದ ಕೊರತೆಯಿಲ್ಲ. ಜಿಲ್ಲಾಧಿಕಾರಿ ವರದಿ ಆಧಾರದಲ್ಲಿ ಅನುದಾನ ಒದಗಿಸಲು ಹಣಕಾಸು ಇಲಾಖೆಗೆ ಈಗಾಗಲೇ ಸೂಚನೆ ನೀಡಲಾಗಿದೆ. ಕುಡಿಯುವ ನೀರಿಗೆ ತೊಂದರೆಯಾದರೆ ಆಯಾ ಜಿಲ್ಲಾಧಿಕಾರಿಗಳೇ ಹೊಣೆಯಾಗುತ್ತಾರೆ ಎಂದು ಎಚ್ಚರಿಕೆ ನೀಡಿದರು.

ರಾಜ್ಯದಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಿಸಬಹುದಾದ 213 ತಾಲೂಕುಗಳನ್ನು ಹಾಗೂ 2410 ಗ್ರಾಮ ಪಂಚಾಯತ್‌ಗಳನ್ನು ಗುರುತಿಸಲಾಗಿದೆ. 585 ಖಾಸಗಿ ಬೋರ್‌ವೆಲ್ ಗಳನ್ನು ಬಾಡಿಗೆಗೆ ಪಡೆಯಲಾಗಿದೆ ಎಂದು ಸಿಎಂ ಮಾಹಿತಿ ಪಡೆದರು.

ಅನಿವಾರ್ಯ ಸಂದರ್ಭಗಳಲ್ಲಿ ಟ್ಯಾಂಕರ್ ನೀರು ಪೂರೈಕೆ ಮಾಡಬೇಕು. ಖಾಸಗಿ ಬೋರ್‌ವೆಲ್ ಗಳನ್ನು ಬಾಡಿಗೆ ಪಡೆಯುವುದಕ್ಕೆ ಆದ್ಯತೆ ನೀಡಬೇಕು. ಅಗತ್ಯ ಸಂದರ್ಭದಲ್ಲಿ ಕೊಳವೆ ಬಾವಿ ಕೊರೆಯಬಹುದು ಎಂದು ಮುಖ್ಯಮಂತ್ರಿ ಸೂಚಿಸಿದರು.

ರಾಜ್ಯದ ಪ್ರಮುಖ 14 ಜಲಾಶಯಗಳಲ್ಲಿ ಪ್ರಸ್ತುತ 321.93 ಟಿ.ಎಂ.ಸಿ ನೀರು ಲಭ್ಯವಿದೆ. ಇದು ಒಟ್ಟು ಸಾಮರ್ಥ್ಯದ ಶೇ.36ರಷ್ಟಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 330.35 ಟಿ.ಎಂ.ಸಿ ನೀರು ಲಭ್ಯವಿತ್ತು. ಪ್ರಸುತ ಕುಡಿಯುವ ನೀರಿಗೆ ಸಾಕಷ್ಟು ನೀರು ಜಲಾಶಯಗಳಲ್ಲಿ ಲಭ್ಯವಿದೆ. ಕಳೆದ ಎರಡು ವರ್ಷಗಳಲ್ಲಿ ಉತ್ತಮ ಮಳೆ ಆಗಿರುವುದರಿಂದ ಮೇವಿನ ಕೊರತೆ ಸದ್ಯಕ್ಕೆ ಇರುವುದಿಲ್ಲ. ಆದರೆ ಈ ಕುರಿತು ನಿರ್ಲಕ್ಷ್ಯ ವಹಿಸದೆ ಮೇವಿನ ಲಭ್ಯತೆಯನ್ನು ಖಾತ್ರಿಪಡಿಸಬೇಕು ಎಂದು ಸಿಎಂ ಸೂಚಿಸಿದರು.



# ಭೀಕರ ಅಪಘಾತ: 8 ಮಂದಿ ಸಾವು

## ರಾಯರ ದರ್ಶನಕ್ಕೆ ಹೊರಟ್ಟಿದ್ದವರು ಮಸಣಕ್ಕೆ । 13 ಜನರಿಗೆ ತೀವ್ರ ಗಾಯ

**ರಾಯಚೂರು:** ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಮಂತ್ರಾಲಯ ಬಳಿ ಗುರುವಾರ ಮುಂಜಾನೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಚಿಕ್ಕಮಗಳೂರು ಜಿಲ್ಲೆಯ ಎಂಟು ಮಂದಿ ಭಕ್ತರು ದುರಂತ ಅಂತ್ಯಕಂಡಿದ್ದಾರೆ.

ಮಂತ್ರಾಲಯಕ್ಕೆ ರಾಯರ ದರ್ಶನಕ್ಕೆ ಬೊಲೆರೋ ವಾಹನದಲ್ಲಿ ತೆರಳುತ್ತಿದ್ದಾಗ ಸಿಮೆಂಟ್ ಟ್ಯಾಂಕರ್ ಡಿಕ್ಕಿ ಹೊಡೆದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ. ಹಾಸನ ಮತ್ತು ಚಿಕ್ಕಮಗಳೂರು ಜಿಲ್ಲೆಯ ಕುಮಾರ್ (50), ದೀಪಿಕಾ (42), ಸುನಿಲ್ (40) ಯಶೋಧಮ್ಮ (60), ಪುಟ್ಟಮ್ಮ (55), ಬೆಳ್ಳಿ (3), ಲೋಲಾಕ್ಷಿ ಹಾಗೂ ಮೀನಾಕ್ಷಿ ಮೃತಪಟ್ಟವರು.

ಬೆಳಗಿನ ಜಾವ 4 ಗಂಟೆ ಸುಮಾರಿಗೆ ಅಪಘಾತ ಸಂಭವಿಸಿದೆ. ಭೀಕರ

# ಸಂಸತ್‌ನಲ್ಲಿ ವಿಪಕ್ಷಗಳ ಕೋಲಾಹಲ

## ಕ್ಷೇತ್ರ ಪುನರ್ ವಿಂಗಡಣೆ ಮಸೂದೆಗೆ ಕಾಂಗ್ರೆಸ್ ತೀವ್ರ ವಿರೋಧ, ಪ್ರತಿಭಟನೆ

**ನವದೆಹಲಿ:** ಸಂಸತ್ತಿನಲ್ಲಿ ಗುರುವಾರ ವಿಶೇಷ ಅಧಿವೇಶನ ಆರಂಭದ ದಿನವೇ ತೀವ್ರ ರಾಜಕೀಯ ವಾಗ್ವಾದ, ಕೋಲಾಹಲ ಉಭಯ ಸದನಗಳಲ್ಲಿ ಕಂಡುಬಂತು.

ಕೇಂದ್ರ ಸಚಿವರಾದ ಅರ್ಜುನ್ ರಾಮ್ ಮೇಘಾವಲ್ ಮತ್ತು ಅಮಿತ್ ಶಾ ಅವರು ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ಕಾಯ್ದೆಗೆ ತಿದ್ದುಪಡಿ ತರಲು ಹಾಗೂ ಕ್ಷೇತ್ರ ಪುನರ್ ವಿಂಗಡಣೆ ಆಯೋಗ ರಚನೆಗೆ ಸಂಬಂಧಿಸಿದಂತೆ ಮೂರು ಮಸೂದೆಗಳನ್ನು ಮಂಡಿಸಿದರು. ವಿರೋಧ ಪಕ್ಷಗಳು ಬಿಜೆಪಿ ನಡೆಯನ್ನು ಸಂವಿಧಾನ ವಿರೋಧಿ ಎಂದು ಪ್ರತಿಭಟನೆ ನಡೆಸಿದವು.

ಕ್ಷೇತ್ರ ಮರುವಿಂಗಡಣೆಯಿಂದ ದಕ್ಷಿಣ ರಾಜ್ಯಗಳ ಪ್ರತಿನಿಧಿತ್ವ ಕಡಿಮೆಯಾಗಿ ಉತ್ತರ ರಾಜ್ಯಗಳಿಗೆ ಹೆಚ್ಚು ಲಾಭವಾಗುತ್ತದೆ ಎಂದು ವಿಪಕ್ಷಗಳು ಆತಂಕ ವ್ಯಕ್ತಪಡಿಸಿದವು. ಮಹಿಳಾ ಮೀಸಲಾತಿ ಜಾರಿಯೊಂದಿಗೆ ಡಿಲಿಮಿಟೇಶನ್ ಪ್ರಕ್ರಿಯೆಯನ್ನು ಸಂಬಂಧ ಹಾಕಬಾರದು ಎಂದು ಸರ್ಕಾರವನ್ನು ಒತ್ತಾಯಿಸಿ ಪ್ರತಿಭಟನೆ ನಡೆಸಿದರು.

ಕರಡು ಸಂವಿಧಾನ ತಿದ್ದುಪಡಿ ಮಸೂದೆ ಪ್ರಕಾರ, 2011ರ ಜನಗಣತಿ ಆಧಾರದ ಮೇಲೆ ಡಿಲಿಮಿಟೇಶನ್ ಪ್ರಕ್ರಿಯೆ ನಡೆಸಿ, 2029ರ ಲೋಕಸಭಾ ಚುನಾವಣೆಗೆ ಮುನ್ನ ಮಹಿಳಾ ಮೀಸಲಾತಿ ಕಾಯ್ದೆಯನ್ನು ಜಾರಿಗೆ ತರುವ ಉದ್ದೇಶದಿಂದ ಲೋಕಸಭೆ ಸ್ಥಾನಗಳನ್ನು ಪ್ರಸ್ತುತ 543ರಿಂದ ಗರಿಷ್ಠ 850ಕ್ಕೆ ಹೆಚ್ಚಿಸಲು ಯೋಜಿಸಲಾಗಿದೆ.

ಅಲ್ಲದೆ, ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ವಿಧಾನಸಭೆಗಳಲ್ಲಿಯೂ ಮಹಿಳೆಯರಿಗೆ 33 ಶೇಕಡಾ ಮೀಸಲಾತಿ ಕಲ್ಪಿಸಲು ಸ್ಥಾನಗಳನ್ನು ಹೆಚ್ಚಿಸಲಾಗುತ್ತದೆ. ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೀಸಲಾದ ಸ್ಥಾನಗಳನ್ನು ರಾಜ್ಯ ಅಥವಾ ಕೇಂದ್ರಾಡಳಿತ



### ರಾಜಕೀಯ ಬೇಡ: ಮೋದಿ

**ನವದೆಹಲಿ:** ಭಾರತದ ಪ್ರಜಾಪ್ರಭುತ್ವದ ಪಯಣದಲ್ಲಿ ಮಹಿಳಾ ಮೀಸಲಾತಿ ಜಾರಿ ಐತಿಹಾಸಿಕ ಕ್ಷಣವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಪ್ರಸ್ತಾಪಿತ ಮಹಿಳಾ ಮೀಸಲು ಕಾಯ್ದೆಗೆ ತಿದ್ದುಪಡಿ ಕುರಿತ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಈ ವಿಷಯದಲ್ಲಿ ರಾಜಕೀಯ ಮಾಡದಂತೆ ಎಲ್ಲ ಸಂಸದರಿಗೆ ಮನವಿ ಮಾಡಿದರು. ಮಹಿಳಾ ಪುಟ 2ಕ್ಕೆ

### ಮುಸ್ಲಿಮರಿಗೆ ಮೀಸಲಾತಿ ನೀಡಲ್ಲ: ಅಮಿತ್ ಶಾ

**ನವದೆಹಲಿ:** ಮುಸ್ಲಿಮರಿಗೆ ಮೀಸಲಾತಿ ನೀಡುವುದಿಲ್ಲ. ಒಂದು ವೇಳೆ ಮೀಸಲಾತಿ ನೀಡಿದರೆ ಅದು ಧರ್ಮಾಧರಿತ ಮೀಸಲಾತಿ ಎನಿಸಿಕೊಳ್ಳುತ್ತದೆ. ಧರ್ಮಾಧರಿತ ಮೀಸಲಾತಿ ನೀಡುವುದಕ್ಕೆ ಸಂವಿಧಾನದಲ್ಲಿ ಅವಕಾಶವೇ ಇಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಪುಟ 2ಕ್ಕೆ

### ಮೂರು ಮಸೂದೆ: ಇಂದು ಮತದಾನ

**ನವದೆಹಲಿ:** ಸಂಸತ್ ವಿಶೇಷ ಅಧಿವೇಶನದಲ್ಲಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಮಹಿಳಾ ಮೀಸಲಾತಿ ಸೇರಿ ಮೂರು ಮಸೂದೆಗಳನ್ನು ಮಂಡಿಸಿದೆ. ಮಸೂದೆ ಕುರಿತ ಚರ್ಚೆಗೆ 15 ಗಂಟೆ ಸಮಯ ನಿಗದಿ ಮಾಡಿದೆ. ಶುಕ್ರವಾರ ಸಂಜೆ 4 ಗಂಟೆಗೆ ಮತದಾನ ನಡೆಯಲಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದರು.

ಲೋಕಸಭೆಯಲ್ಲಿ ಮಾತನಾಡಿದ ಅವರು, ಪ್ರಮುಖ ಮಸೂದೆಗಳ ಕುರಿತು ಸದನವು 15 ಗಂಟೆಗಳ ಕಾಲ ಚರ್ಚೆ ಮಾಡಲು ಸಮಯದ ನಿಗದಿ ಮಾಡಲಾಗಿದೆ. ಸದಸ್ಯರು ಹೆಚ್ಚಿನ ಸಮಯಕ್ಕೆ ಬೇಡಿಕೆ ಇಟ್ಟರೆ ಅದನ್ನು 18 ಗಂಟೆಗಳವರೆಗೆ ಸ್ಪೀಕರ್ ವಿಸ್ತರಿಸುವ ಸಾಧ್ಯತೆಯಿದೆ. ಮಧ್ಯರಾತ್ರಿಯವರೆಗೂ ಸಂಸತ್ ನಡೆಯಲಿದೆ. ನಾಳೆ ಸಂಜೆ 4 ಗಂಟೆಗೆ ಮಸೂದೆಗಳ ಅಂಗೀಕಾರಕ್ಕೆ ಮತದಾನ ನಡೆಯಲಿದೆ ಎಂದು ಹೇಳಿದರು.

ಸಂಸತ್ ವಿಶೇಷ ಅಧಿವೇಶನದಲ್ಲಿ ಲೋಕಸಭೆ ಮತ್ತು ವಿಧಾನಸಭೆಯಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಜಾರಿಗೆ ತರುವ ಮಸೂದೆ, ಕ್ಷೇತ್ರ ಪುನರ್ವಿಂಗಡಣೆ ಪ್ರಕ್ರಿಯೆ ಕಾಯ್ದೆ ಸೇರಿ ಮೂರು ಮಸೂದೆಗಳನ್ನು ಮಂಡಿಸಿದೆ. 131ನೇ ಸಾಂವಿಧಾನಿಕ ತಿದ್ದುಪಡಿ ಮಾಡಲು ಕೇಂದ್ರ ಸರ್ಕಾರ ಮುಂದಾಗಿದೆ. ಲೋಕಸಭೆ ಸ್ಥಾನಗಳನ್ನು 543ರಿಂದ 850ಕ್ಕೆ ಹೆಚ್ಚಿಸುವ ಪುಟ 2ಕ್ಕೆ

### ಹೊಂಚು ಹಾಕಿ ಡಿಕೆಶಿ ಸಂಚು: ಜೆಡಿಎಸ್ ವ್ಯಂಗ್ಯ



**ಬೆಂಗಳೂರು:** ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಕುರ್ಚಿ ಆಸೆಗಾಗಿ ತಮ್ಮ ವಿರೋಧಿ ಬಣದ ನಾಯಕರನ್ನು ಹೊಂಚು ಹಾಕಿ, ಸಂಚು ರೂಪಿಸಿ ಮುಗಿಸುತ್ತಿದ್ದಾರೆಂದು ಜೆಡಿಎಸ್ ಕಿಡಿಕಾರಿದೆ.

ಕಾಂಗ್ರೆಸ್‌ನಿಂದ ಮುಸ್ಲಿಂ ನಾಯಕ ಅಬ್ದುಲ್ ಜಬ್ಬರ್ ಅಮಾನತು ವಿಚಾರವಾಗಿ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿದ್ದು, ಕಾಂಗ್ರೆಸ್ ಪಕ್ಷದಲ್ಲಿ ಸಾಮಾಜಿಕ ಅನ್ಯಾಯ ನಡೆಯುತ್ತಿದೆ. ಅಂದು ವಾಲ್ಮೀಕಿ ಜನಾಂಗದ ನಾಯಕ ಕೆ.ಎನ್.ರಾಜಣ್ಣ ಅವರನ್ನು ಸಚಿವ ಸ್ಥಾನದಿಂದ ಕಿತ್ತು ಹಾಕಿದ್ದರು. ಇಂದು ಅಲ್ಪಸಂಖ್ಯಾತ ಸಮುದಾಯದ ಅಬ್ದುಲ್ ಜಬ್ಬರ್ ಅವರನ್ನು ಪಕ್ಷದಿಂದ ಉಚ್ಚಾಟಿಸಲಾಗಿದೆ. ಕುರ್ಚಿ ಆಸೆಗಾಗಿ ಡಿಕೆ ಶಿವಕುಮಾರ್ ತಮ್ಮ ವಿರೋಧಿ ಬಣದ ನಾಯಕರನ್ನು ಒಬ್ಬೊಬ್ಬರನ್ನೇ ಮುಗಿಸುತ್ತಿದ್ದಾರೆ ಎಂದು ಆರೋಪಿಸಿದೆ.

### ವಿನಯ್ ಕುಲಕರ್ಣಿ ಇದ್ದ ಬಸ್‌ನಲ್ಲಿ ಬೆಂಕಿ, ಹೊಗೆ

**ಬೆಂಗಳೂರು:** ಯೋಗೀಶ್ ಗೌಡ ಕೊಲೆ ಪ್ರಕರಣದ ಅಪರಾಧಿಗಳಾದ ಮಾಜಿ ಸಚಿವ ವಿನಯ್ ಕುಲಕರ್ಣಿ ಮತ್ತಿತರರನ್ನು ಪರಪ್ಪನ ಅಗ್ರಹಾರ ಕಾರಾಗೃಹಕ್ಕೆ ಸ್ಥಳಾಂತರಿಸುವಾಗ ಬಸ್‌ನಲ್ಲಿ ತಾಂತ್ರಿಕ ದೋಷ ಉಂಟಾಗಿ ದಟ್ಟ ಹೊಗೆ ಆವರಿಸಿದ ಘಟನೆ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಪುಟ 2ಕ್ಕೆ

### ಹೃದಯಾಘಾತದಿಂದ ನ್ಯಾಯಾಧೀಶೆ ಸಾವು

**ತುಮಕೂರು:** ಮಧುಗಿರಿ ತಾಲ್ಲೂಕಿನ ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶರಾದ ಎ.ಎನ್.ಕಾಂತಮ್ಮ (43) ಹೃದಯಾಘಾತದಿಂದ ಗುರುವಾರ ಮುಂಜಾನೆ ಸಾವನ್ನಪ್ಪಿದ್ದಾರೆ.



ಪಟ್ಟಣದ ಲೋಕೋಪಯೋಗಿ ಇಲಾಖೆ ವಸತಿ ಗೃಹದಲ್ಲಿ ಅವರು ವಾಸವಿದ್ದರು. ಮಂಡ್ಯ ಜಿಲ್ಲೆ ಮಳವಳ್ಳಿ ತಾಲ್ಲೂಕಿನ ಅಂಚೆದೊಡ್ಡಿ ಗ್ರಾಮದವರು. ಅವಿವಾಹಿತರಾಗಿದ್ದ ಅವರು 2025 ಜೂನ್‌ನಿಂದ ಮಧುಗಿರಿಯಲ್ಲಿ ನ್ಯಾಯಾಧೀಶರಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಇಂದು ವಸತಿ ಗೃಹದಲ್ಲಿಯೇ ಹೃದಯಾಘಾತದಿಂದ ಮೃತಪಟ್ಟಿದ್ದಾರೆ.

### ಕೈ ವಿರುದ್ಧ ಮುಸ್ಲಿಮರ ಕಿಡಿ

**ಬೆಂಗಳೂರು:** ದಾವಣಗೆರೆ ದಕ್ಷಿಣ ವಿಧಾನಸಭೆ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು ಒಂದು ಕುಟುಂಬಕ್ಕಾಗಿ ಮುಸ್ಲಿಂ ಮುಖಂಡರ ಮೇಲೆ ಕ್ರಮ ಕೈಗೊಳ್ಳುತ್ತಿದೆ. ನಮಗೆ ಕಾಂಗ್ರೆಸ್ ಹೊರತುಪಡಿಸಿ ಬೇರೆ ಆಯ್ಕೆಗಳಿವೆ ಎಂದು ಮುಸ್ಲಿಂ ಧಾರ್ಮಿಕ ಮುಖಂಡರು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಜಮೀಯತ್ ಉಲಮಾ ಕರ್ನಾಟಕದ ಅಧ್ಯಕ್ಷ ಮುಫ್ತಿ ಇಫ್ತಿಖಾರ್ ಅಹ್ಮದ್ ಖಾಸ್ಮಿ, ಮುಸ್ಲಿಮರು ಕಾಂಗ್ರೆಸ್ ಪಕ್ಷದಿಂದ ದೂರವಾದರೆ ಕರ್ನಾಟಕದಲ್ಲಿಯೂ ಪಕ್ಷ ದುರ್ಬಲವಾಗುತ್ತದೆ. ಈಗಾಗಲೇ ಬೇರೆ ಬೇರೆ ರಾಜ್ಯಗಳಲ್ಲಿ ಪಕ್ಷದ ಪರಿಸ್ಥಿತಿ ನೋಡಬಹುದಾಗಿದೆ. ಮುಸ್ಲಿಂ ಸಮುದಾಯದವರಿಗೆ ತೊಂದರೆ ನೀಡುವುದನ್ನು ನಾವು ಸಹಿಸುವುದಿಲ್ಲ. ಸಮುದಾಯದ ಹಿತಾಸಕ್ತಿ, ಗೌರವ, ಘನತೆ ಕಾಪಾಡಲು ಹಾಗೂ ಮುಂದಿನ ನಡೆ ಬಗ್ಗೆ ಚರ್ಚಿಸಲು ಪುಟ 2ಕ್ಕೆ

# ಸಂಪುಟ ಪುನರ್ ರಚನೆ ಆಗಲಿ

## ಶಾಸಕರು ಸಚಿವ ಸ್ಥಾನ ಕೇಳೋದು ತಪ್ಪಲ್ಲ: ದಿನೇಶ್ ಗುಂಡೂರಾವ್

**ಬೆಂಗಳೂರು:** ಕಾಂಗ್ರೆಸ್ ನಲ್ಲಿ ಸಾಕಷ್ಟು ಹಿರಿಯ ಶಾಸಕರಿದ್ದಾರೆ. ಶಾಸಕರು ಸಚಿವ ಸ್ಥಾನ ಕೇಳುವುದು ತಪ್ಪಲ್ಲ. ಸಂಪುಟ ಪುನರ್ ರಚನೆ ಆಗಲಿ ಎಂದು ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ಶಾಸಕರು ದೆಹಲಿಗೆ ಹೋಗಿರುವ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಸಂಪುಟ ಪುನರ್ ರಚನೆ ಆಗಬೇಕು. ಆದರೆ, ಬೇರೆಯವರಿಗೆ ಸಚಿವ ಸ್ಥಾನ ಸಿಗಲಿದೆ. ಪಕ್ಷದ ಹಂತದಲ್ಲಿ ಅದು ಆಗುತ್ತದೆ ಎಂದರು.

ಈ ಸಮಯದಲ್ಲಿ ಶಾಸಕರು ದೆಹಲಿಗೆ ಹೋಗಿದ್ದು ಸರಿಯಲ್ಲ ಎಂಬ ಡಿಸಿಎಂ ಹೇಳಿಕೆ ಬಗ್ಗೆ ನಾನು ಮಾತನಾಡಲ್ಲ. ಶಾಸಕರ ಪ್ರಯತ್ನ ತಪ್ಪಲ್ಲ. ಮಂತ್ರಿ ಆಗೋಕೆ ಎಲ್ಲರಿಗೂ ಆಸೆ ಇರುತ್ತದೆ. ಯಾರು ಮಂತ್ರಿಯಾಗಿ ಇರಬೇಕು ಅಂತ ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದು ಹೇಳಿದರು.

ಸಂಸತ್‌ನಲ್ಲಿ ಕ್ಷೇತ್ರ ಮರುವಿಂಗಡಣೆ ವಿಧೇಯಕ ಮಂಡನೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ರಾಜ್ಯಗಳಲ್ಲಿ ಈಗ ಇರೋ ಲೋಕಸಭೆ ಕ್ಷೇತ್ರಗಳ ಪೈಕಿ ಶೇ.50ರಷ್ಟು ಸೀಟು ಹೆಚ್ಚಳ ಮಾಡಿದರೆ ಪುಟ 2ಕ್ಕೆ



### ಶಾಸಕರಿಂದ ಸುರ್ಜೇವಾಲ ಭೇಟಿ

**ನವದೆಹಲಿ:** ಸಚಿವ ಸಂಪುಟ ಪುನಾರಚನೆ ಮಾಡುವಂತೆ ಕರ್ನಾಟಕದ 12 ಶಾಸಕರು ದೆಹಲಿಯಲ್ಲಿ ರಣದೀಪ್ ಸಿಂಗ್ ಸುರ್ಜೇವಾಲ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದರು.

ನಮಗೂ ಸಚಿವ ಸ್ಥಾನ ಕೊಡಿ ಎಂದು ಕಾಂಗ್ರೆಸ್‌ನ ಹಲವು ಹಿರಿಯ ಶಾಸಕರು ದೆಹಲಿಯಲ್ಲಿ ಠಿಕಾಣಿ ಹೂಡಿದ್ದಾರೆ. ಹೈಕಮಾಂಡ್ ನಾಯಕರ ಭೇಟಿಯಾಗಿ ಮನವಿ ಸಲ್ಲಿಸಲು ಪ್ರಯತ್ನಿಸಿದ್ದರು. ಆದರೆ ಇದುವರೆಗೂ ಅವರಿಗೆ ಹೈಕಮಾಂಡ್ ನಾಯಕರ ಭೇಟಿ ಆಗಿಲ್ಲ.

ಶಾಸಕರಾದ ಟಿ.ಬಿ.ಜಯಚಂದ್ರ, ಅಶೋಕ್ ಪಟ್ಟಣ್, ಪುಟ 2ಕ್ಕೆ



# ಶಾಸಕ ವಿನಯ್ ಸೇರಿ 17 ಮಂದಿಗೆ ಇಂದು ಶಿಕ್ಷೆ ಪ್ರಕಟ

**ಬೆಂಗಳೂರು:** ಬಿಜೆಪಿ ನಾಯಕ ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಮತ್ತು ಇತರ 16 ಮಂದಿ ಅಪರಾಧಿಗಳು ಎಂದು ಘೋಷಿಸಿದ್ದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ನಾಳೆ ಶುಕ್ರವಾರ ಶಿಕ್ಷೆಯ ಪ್ರಮಾಣವನ್ನು ಪ್ರಕಟಿಸಲಿದೆ.

ನ್ಯಾಯಾಲಯ ಬುಧವಾರ ಶಿಕ್ಷೆಯ ಪ್ರಮಾಣಕ್ಕೆ ಸಂಬಂಧಿಸಿದಂತೆ ಪ್ರಾಸಿಕ್ಯೂಷನ್ ಮತ್ತು ಪ್ರತಿವಾದಿಯ ವಾದಗಳನ್ನು ಆಲಿಸಿತು. ನ್ಯಾಯಾಧೀಶ ಸಂತೋಷ್ ಗಜಾನನ್ ಭಟ್ ಅವರು ಯೋಗೇಶ್ ಗೌಡರ್ ಹತ್ಯೆಗೆ ಕ್ರಿಮಿನಲ್ ಪಿತೂರಿಯಲ್ಲಿ ಭಾಗಿಯಾಗಿದ್ದಾರೆಂದು ಆರೋಪಿಗಳನ್ನು ದೋಷಿಗಳೆಂದು ಘೋಷಿಸಿದ್ದರು.

ಆರೋಪಿಗಳನ್ನು ಕಾನೂನುಬಾಹಿರ ಸಭೆ, ಗಲಭೆ ಮತ್ತು ಕೊಲೆಗೆ ಸಂಬಂಧಿಸಿದ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿಯೂ ದೋಷಿಗಳೆಂದು ಘೋಷಿಸಲಾಗಿದೆ ಎಂದು ನ್ಯಾಯಾಲಯ ಹೇಳಿದೆ. ಇದರಲ್ಲಿ ಐಪಿಸಿ ಸೆಕ್ಷನ್ 302 ಜೊತೆಗೆ ಸೆಕ್ಷನ್ 120(ಬಿ) ಸೇರಿದೆ. ಅಪರಾಧಿಗಳಲ್ಲಿ ಹಲವರನ್ನು ಹೆಚ್ಚುವರಿಯಾಗಿ ಪುಟ 2ಕ್ಕೆ



### ನಿದ್ದೆ ಇಲ್ಲದೆ ಕಣ್ಣೀರಿಟ್ಟ ವಿನಯ್

**ಬೆಂಗಳೂರು:** ಯೋಗೇಶ್ ಗೌಡ ಕೊಲೆ ಪ್ರಕರಣದ ಅಪರಾಧಿ, ಶಾಸಕ ವಿನಯ್ ಕುಲಕರ್ಣಿ ಪರಪ್ಪನ ಅಗ್ರಹಾರ ಜೈಲು ಸೇರಿದ್ದಾರೆ. ಪರಪ್ಪನ ಅಗ್ರಹಾರ ಜೈಲಿನಲ್ಲಿ ನಿನ್ನೆ ಇಡೀ ರಾತ್ರಿ ನಿದ್ದೆ ಮಾಡಿಲ್ಲ ಎನ್ನಲಾಗಿದೆ. ತಡರಾತ್ರಿ ವೇಳೆಗೆ ಅಪರಾಧಿ ಕುಲಕರ್ಣಿ ಜೈಲುಪಾಲಾದರು. ಸೆಲ್ ಒಳಗೆ ಹೋಗುತ್ತಿದ್ದಂತೆ ಮತ್ತೆ ಕಣ್ಣೀರು ಪುಟ 2ಕ್ಕೆ

# ಪಕ್ಷಕ್ಕಿಂತ ಯಾರೂ ದೊಡ್ಡವರಲ್ಲ

## ಅಲ್ಪಸಂಖ್ಯಾತರನ್ನು ಟಾರ್ಗೆಟ್ ಮಾಡಿಲ್ಲ । ಸಚಿವ ಜಮೀರ್ ವಿರುದ್ಧ ಕ್ರಮಕ್ಕೆ ಬಾಲಕೃಷ್ಣ ಒತ್ತಾಯ

**ಬೆಂಗಳೂರು:** ಪಕ್ಷಕ್ಕಿಂತ ಯಾರೂ ದೊಡ್ಡವರಲ್ಲ. ಪಕ್ಷದ ವಿರುದ್ಧ ಯಾರೇ ನಡೆದುಕೊಂಡರೂ ಅದು ತಪ್ಪು. ಪಕ್ಷದ ವಿರುದ್ಧ ಯಾರೇ ನಡೆದರೂ ಕ್ರಮಕೈಗೊಳ್ಳಬೇಕು ಎಂದು ಶಾಸಕ ಬಾಲಕೃಷ್ಣ ಆಗ್ರಹಿಸಿದರು.

ಜಮೀರ್ ವಿರುದ್ಧ ಕ್ರಮಕ್ಕೆ ಮುಸ್ಲಿಂ ನಾಯಕರ ಒತ್ತಾಯ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಪಕ್ಷದ ವಿರುದ್ಧ ಯಾರೇ ನಡೆದರೂ ಕ್ರಮಕೈಗೊಳ್ಳಬೇಕು. ಅದು ಸಿದ್ದರಾಮಯ್ಯ ಆಗಲಿ, ಡಿಕೆ ಶಿವಕುಮಾರ್ ಆಗಲಿ, ಜಮೀರ್ ಆಗಲಿ, ಬಾಲಕೃಷ್ಣ ಆಗಲಿ ಯಾರೇ ಪಕ್ಷದ ವಿರುದ್ಧ ಕೆಲಸ ಮಾಡಿದರೆ ಅಗತ್ಯ ಎಂದರು. ಈ ಮೂಲಕ ಜಮೀರ್ ವಿರುದ್ಧ ಕ್ರಮಕ್ಕೆ ಆಗ್ರಹಿಸಿದರು.

ಅಲ್ಪಸಂಖ್ಯಾತರನ್ನು ಟಾರ್ಗೆಟ್ ಮಾಡ್ತಾ ಇದ್ದಾರೆ ಎಂಬ ಆರೋಪ ವಿಚಾರವಾಗಿ ಮಾತನಾಡಿ, ಅಲ್ಪಸಂಖ್ಯಾತರನ್ನು ಟಾರ್ಗೆಟ್ ಮಾಡಿಲ್ಲ. ಸಮಸ್ಯೆ ಬಂದಿದೆ ಅದಕ್ಕೆ ಪರಿಹಾರ ಹುಡುಕಬೇಕು ಅಷ್ಟೇ ಎಂದರು.



ದೊರೆ ಮೇಲೆ ಕ್ರಮ ಇಲ್ಲ ಎಂಬ ಮಾಜಿ ಸಚಿವ ಕೆ.ಎನ್.ರಾಜಣ್ಣ ಹೇಳಿಕೆ ವಿಚಾರವಾಗಿ ಮಾತನಾಡಿ, ಡಿ.ಕೆ.ಶಿವಕುಮಾರ್ ಸದ್ಗುರು ಜೊತೆ ವೇದಿಕೆ ಹಂಚಿಕೊಂಡಿರುವುದು ಧಾರ್ಮಿಕ ಕಾರ್ಯಕ್ರಮ. ಅಲ್ಲಿಗೆ ಹೋಗಿ ರಾಹುಲ್ ಗಾಂಧಿ ಯಾರು ಅಂತ ಡಿಕೆಶಿ ಸದ್ಗುರುಗೆ ಪಾಠ ಹೇಳಿ ಬಂದಿದ್ದಾರೆ. ನೀವು ಇಲ್ಲಿಗೆ ನಮ್ಮನ್ನ ಕರೆಯೋಕೆ ಶಕ್ತಿ ಕೊಟ್ಟವರು ರಾಹುಲ್ ಪುಟ 2ಕ್ಕೆ

### ನಾಯಕತ್ವ ಬದಲಾವಣೆ ಚರ್ಚೆ ಇನ್ನೂ ಮುಗಿದಿಲ್ಲ!

**ಬೆಂಗಳೂರು:** ನಾಯಕತ್ವ ಬದಲಾವಣೆ ಚರ್ಚೆ ಮುಗಿದ ಅಧ್ಯಾಯ ಅಲ್ಲ. ಹೈಕಮಾಂಡ್ ಗೊಂದಲ ಪರಿಹಾರ ಮಾಡದೇ ಹೋದರೆ ಪಕ್ಷಕ್ಕೆ ಸಮಸ್ಯೆ ಆಗಲಿದೆ ಎಂದು ಶಾಸಕ ಬಾಲಕೃಷ್ಣ ಎಚ್ಚರಿಕೆ ನೀಡಿದರು.

ಬೈ ಎಲೆಕ್ಷನ್ ಫಲಿತಾಂಶ ಬಂದ ಮೇಲೆ ಮತ್ತೆ ನಾಯಕತ್ವದ ಚರ್ಚೆ ಆಗುತ್ತದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಅವರು, ನಾಯಕತ್ವ ಚರ್ಚೆ ಮುಗಿದ ಅಧ್ಯಾಯ ಅಲ್ಲ. ಅದಕ್ಕೆ ಅಂತಿಮ ರೂಪ ಹೈಕಮಾಂಡ್ ಕೊಡಬೇಕು. ನಾವು ಯಾರು ಕೊಡೋಕೆ ಆಗಲ್ಲ ಎಂದರು. ಪುಟ 2ಕ್ಕೆ

# ದೇಶದ ಅಭಿವೃದ್ಧಿಗೆ ಯುದ್ಧ ಮಾರಕ:ರೇಣುಕಾರ್ಯ




ಮೈಸೂರು: ದೇಶದ ಅಭಿವೃದ್ಧಿಗೆ ಯುದ್ಧ ಮಾರಕ, ವಿವೇಚನೆ ಮತ್ತು ಬುದ್ಧಿವಂತಿಕೆಯ ಕೊರತೆಯಿಂದ ಜಗತ್ತು ದುರಂತದತ್ತ ಸಾಗುತ್ತಿದೆ ಎಂದು ಮಹಾಜನ ಸ್ನಾತಕೋತ್ತರ ಕೇಂದ್ರದ ನಿರ್ದೇಶಕ ಡಾ.ಸಿ.ಕೆ.ರೇಣುಕಾರ್ಯ ಅಭಿಪ್ರಾಯಪಟ್ಟರು.

ನಗರದ ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜಿನ (ಸ್ವಾಯತ್ತ) ನವಜ್ಯೋತಿ ಸಭಾಂಗಣದಲ್ಲಿ ಅರ್ಥಶಾಸ್ತ್ರ ವಿಭಾಗದಿಂದ ಒಂದು ದಿನದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದರು. ದೇಶಗಳ ಮೇಲೆ ಹಿಡಿತ ಸಾಧಿಸಲು ಪ್ರಯತ್ನಪಟ್ಟರೆ ಹಿಂದಿನ ವಸಹಾತು ಶಾಹಿಯತ್ತ ಹೋಗಬೇಕಾಗುತ್ತದೆ. ಆತ್ಮ ನಿರ್ಭರ ರಾಷ್ಟ್ರವಾಗಿ ಬೆಳೆಯಲು ಇಂದಿನ ಸ್ಥಿತಿಯು ಮಾರಕವಾಗಿದೆ. ತೈಲಕ್ಕಾಗಿ ಕೊಲ್ಲಿ ರಾಷ್ಟ್ರಗಳನ್ನು ಅವಲಂಬಿಸಿರುವುದರ ಪರಿಣಾಮ ಇಂದಿನ ಯುದ್ಧ ಭಾರತದ ಆರ್ಥಿಕತೆಯ ಮೇಲೆ ವ್ಯತಿರಿಕ್ತ ಪರಿಣಾಮವನ್ನುಂಟು ಮಾಡಿದೆ. ಸಾಮಾನ್ಯ ಜನರ ಮೇಲೆ, ಕೈಗಾರಿಕೆಗಳ ಮೇಲೆ, ರೈತರ ಮೇಲೆ, ಇಂದಿನ ಯುದ್ಧವು ದುಷ್ಪರಿಣಾಮವನ್ನುಂಟು ಮಾಡಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ ಮಾತನಾಡಿ, ಇಂದಿನ ಯುದ್ಧದ ಪರಿಸ್ಥಿತಿ ಕೇವಲ ಆರ್ಥಿಕತೆಗೆ ಮಾತ್ರ ಸೀಮಿತವಾಗಿಲ್ಲ. ದೇಶದ ಎಲ್ಲಾ ಕ್ಷೇತ್ರಗಳ ಮೇಲೆ ಪರಿಣಾಮವನ್ನು ಬೀರಿದೆ. ಜಾಗತಿಕ ನಾಯಕರು ವಿವೇಕದಿಂದ ವರ್ತಿಸಿದರೆ ಯುದ್ಧವನ್ನು ತಡೆಯಬಹುದು. ಜಗತ್ತಿನ ಸಂಪನ್ಮೂಲಗಳ ಮೇಲೆ ಹಕ್ಕು ಸ್ಥಾಪಿಸಬೇಕೆಂಬ ಅವಿವೇಕತನದಿಂದ ಪ್ರಸ್ತುತ ಸ್ಥಿತಿ ಬಂದಿದೆ. ಆದ್ದರಿಂದ ಸಕಾರಾತ್ಮಕ ಆಲೋಚನಾ ಶಕ್ತಿಯಿಂದ ಪರಿಹಾರವನ್ನು ಕಂಡುಕೊಳ್ಳಬಹುದು. ನನ್ನ ನಾಡು. ನನ್ನ ದೇಶ. ನನ್ನ ಪ್ರಪಂಚ ಎಂಬ ಭಾವನೆ ಇದ್ದರೆ ಜಗತ್ತಿನಲ್ಲಿ ಶಾಂತಿ ಸಾಧಿಸಲು ಸಾಧ್ಯ ವರ್ತಮಾನದ ಸಂದರ್ಭಕ್ಕೆ ಈ ವಿಚಾರ ಸಂಕಿರಣ ಸಮಂಜಸವಾಗಿದೆ ಎಂದು ಅಭಿಪ್ರಾಯಪಟ್ಟರು.

ವೇದಿಕೆಯಲ್ಲಿ ಪ್ರಾಚಾರ್ಯ ಡಾ.ರೇಚಣ್ಣ, ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ.ರೂಪ, ವಿದ್ಯಾರ್ಥಿಗಳಾದ ಚಂದನ, ರಕ್ಷಿತಾ ರಂಗನಾಥ, ಎಸ್. ಗೀತಾ ಇತರರು ಇದ್ದರು. ಗೋಷ್ಠಿಯಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕಿ ಡಾ.ನಮಿತ ತಿಮ್ಮಯ್ಯ "ಇಂಧನ ಆಘಾತದಿಂದ ರಫ್ತು ಆಘಾತದ ವರೆಗೆ: ಇರಾನ್ ಇಸ್ರೇಲ್ ಸಂಘರ್ಷಕ್ಕೆ ಭಾರತದ ವ್ಯಾಪಾರ ಪ್ರತಿಕ್ರಿಯೆ" ವಿಷಯ ಕುರಿತು, ಸಂಖ್ಯಾಶಾಸ್ತ್ರದ ಪ್ರಾಧ್ಯಾಪಕ ಟಿ.ಎನ್.ವೇಣುಗೋಪಾಲ್ "ಇರಾನ್ ವಿರುದ್ಧದ ಯುದ್ಧದ ಪರಿಣಾಮವನ್ನು ಅರ್ಥ ಮಾಡಿಕೊಳ್ಳುವುದು" ಎಂಬ ವಿಷಯ ಕುರಿತು ಮಾತನಾಡಿದರು.

# ತುಟಿಭತ್ಯೆ ತಡೆ ಖಂಡಿಸಿ ಪ್ರತಿಭಟನೆ



ಮೈಸೂರು: ಕೇಂದ್ರ ಸರ್ಕಾರ ಬಿಎಸ್‌ಎನ್‌ಎಲ್ ಪಿಂಚಣಿದಾರರಿಗೆ ಜ.1ರಿಂದ ಕೊಡಬೇಕಿರುವ ತುಟ್ಟಿ ಭತ್ಯೆ ತಡೆ ಹಿಡಿದಿರುವುದನ್ನು ಖಂಡಿಸಿ ಬಿಎಸ್‌ಎನ್‌ಎಲ್ ಪಿಂಚಣಿದಾರ ಜಂಟಿ ವೇದಿಕೆವತಿಯಿಂದ ಜಯಲಕ್ಷ್ಮಿಪುರಂನಲ್ಲಿರುವ ಬಿಎಸ್‌ಎನ್‌ಎಲ್ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ತುಟ್ಟಿ ಭತ್ಯೆ ತಡೆ ಹಿಡಿದಿರುವ ಕ್ರಮ ನಿರಾಧಾರ, ಅರ್ಥಹೀನ ಮತ್ತು ಅಸಂಬದ್ಧ. ಡಿಒಟಿ ಸೇವೆಯಿಂದ ಬಿಎಸ್‌ಎನ್‌ಎಲ್‌ಗೆ ಅಭಿಯುಕ್ತಿಗೊಂಡ ನೌಕರರನ್ನು ನಿವೃತ್ತಿಯ ನಂತರ ಕೇಂದ್ರ ಸರ್ಕಾರದ ಪಿಂಚಣಿದಾರರೆಂದು ಪರಿಗಣಿಸುವುದಾಗಿ ಬಿಎಸ್‌ಎನ್‌ಎಲ್ ಸ್ಥಾಪನೆಯಾದ ವರ್ಷದ(2000) ಕ್ಯಾಬಿನೆಟ್ ಸಭೆಯಲ್ಲಿ ತೀರ್ಮಾನವಾಗಿದೆ. ಅವರ ಪಿಂಚಣಿ ಮತ್ತು ತುಟ್ಟಿ ಭತ್ಯೆಯನ್ನು ನೌಕರರು ಸೇವೆಯಲ್ಲಿದ್ದಾಗ ವಂತಿಗೆ ರೂಪದಲ್ಲಿ ಕೊಟ್ಟಿರುವ ಸಂಚಿತ ನಿಧಿ ಯಿಂದ ಕೊಡಲ್ಪಡುತ್ತದೆಯೇ ವಿನಃ, ಯಾವುದೇ ಕೇಂದ್ರ ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಯಿಂದ ಪಿಂಚಣಿ ಕೊಡುವುದಿಲ್ಲ. ಹೀಗಾಗಿ ಬಿಎಸ್‌ಎನ್‌ಎಲ್ ಸಂಸ್ಥೆಯ ಲಾಭ-ನಷ್ಟದ ಆಧಾರದ ಮೇಲೆ ಪಿಂಚಣಿದಾರರ ತುಟ್ಟಿ ಭತ್ಯೆ ತಡೆಹಿಡಿಯುವುದು ಅನೈತಿಕ ಮತ್ತು ಅಸಂಬದ್ಧ. ಈ ಕೂಡಲೇ ಬಿಎಸ್‌ಎನ್‌ಎಲ್ ಪಿಂಚಣಿದಾರರಿಗೆ ಜ.1ರಿಂದ ಕೊಡಬೇಕಿರುವ ತುಟ್ಟಿ ಭತ್ಯೆ ನೀಡಬೇಕೆಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಜಿಲ್ಲಾ ಕಾರ್ಯದರ್ಶಿಗಳಾದ ಎಸ್.ವಿಷಕಂಠಮೂರ್ತಿ, ರಾಜಶೇಖರ್, ಬಸವರಾಜು ಸೇರಿದಂತೆ ಹಲವರು ಭಾಗವಹಿಸಿದ್ದರು.

## ಮೊದಲ ಪುಟದಿಂದ

### ಅಪಘಾತ: 8 ಮಂದಿ ಸಾವು

ಅಪಘಾತದ ರಭಸಕ್ಕೆ ಆರು ಭಕ್ತರು ಸ್ಥಳದಲ್ಲಿಯೇ ಸಾವನ್ನಪ್ಪಿದರು. ಇಬ್ಬರು ಎಮಿಗನೂರು ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಕಾರಿಯಾಗದೇ ಉಸಿರು ಚೆಲ್ಲಿದ್ದಾರೆ. ಇನ್ನುಳಿದ 13 ಜನರಿಗೆ ಎಮಿಗನೂರು ಹಾಗೂ ಕರ್ನೂಲ್ ಸರ್ಕಾರಿ ಚಿಕಿತ್ಸೆ ನೀಡಲಾಗಿದೆ.

ಚಿಕ್ಕಮಗಳೂರು, ಹಾಸನ ಮೂಲದ ಭಕ್ತರು ಬೊಲೆರೋ ವಾಹನದಲ್ಲಿ ರಾಯರ ದರ್ಶನಕ್ಕೆ ಆಗಮಿಸುತ್ತಿದ್ದರು. ಈ ವೇಳೆ ಸಿಮೆಂಟ್ ಮತ್ತು ಜಲ್ಲಿಕಲ್ಲು ಟ್ಯಾಂಕರ್ ಡಿಕ್ಕಿ ಹೊಡೆದಿದೆ. ಬೊಲೆರೋ ವಾಹನದಲ್ಲಿ ಒಟ್ಟು 21 ಜನರು ಪ್ರಯಾಣಿಸುತ್ತಿದ್ದರು. 13 ಮಂದಿ ತೀವ್ರ ಗಾಯಗೊಂಡಿದ್ದಾರೆ.

ಡಿಕ್ಕಿಯಾದ ರಭಸಕ್ಕೆ ಬೊಲೆರೊ ವಾಹನ ಅಪ್ಪಚ್ಚಿಯಾಗಿದೆ. ಮೃತದೇಹಗಳನ್ನು ಹೊರತೆಗೆಯಲು ಹರಸಾಹಸ ಪಡಬೇಕಾಯಿತು. ಅಪಘಾತದ ಮಾಹಿತಿ ತಿಳಿಯುತ್ತಿದ್ದಂತೆ ಸ್ಥಳೀಯ ಪೊಲೀಸರು ಧಾವಿಸಿ ಪರಿಶೀಲಿಸಿದರು. ಗಾಯಾಳುಗಳನ್ನು ಕರ್ನೂಲು ಆಸ್ಪತ್ರೆಗೆ ದಾಖಲಿಸಲಾಗಿದೆ. ಮಂತ್ರಾಲಯ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

### ಶಾಸಕ ವಿನಯ್ ಸೇರಿ 17 ಮಂದಿಗೆ ಇಂದು ಶಿಕ್ಷೆ ಪ್ರಕಟ

ಸಾಕ್ಷ್ಯಗಳ ನಾಶಕ್ಕೆ ಕಾರಣರಾದ ಆರೋಪದಲ್ಲಿ ತಪ್ಪಿತಸ್ಥರೆಂದು ಘೋಷಿಸಲಾಯಿತು. ಇನ್ನು 20ನೇ ಆರೋಪಿಯಾಗಿದ್ದ ವಾಸುದೇವ ರಾಮ ನಿಲೇಕಣಿ (ಧಾರವಾಡ ಉಪನಗರ ವಿಭಾಗದ ಎಸಿಪಿ) ಹಾಗೂ 21ನೇ ಆರೋಪಿಯಾಗಿದ್ದ ಸೋಮಶೇಖರ ಬಸಪ್ಪ ನ್ಯಾಮಗೌಡ (ವಿನಯ್ ಕುಲಕರ್ಣಿ ಆಪ್ತ ಸಹಾಯಕ) ಅವರನ್ನು ನಿರ್ದೋಷಿಗಳೆಂದು ಕೋರ್ಟ್ ತಿಳಿಸಿದೆ.

ಧಾರವಾಡದ ಜಿಮ್ನಾಷಿಯಂನಲ್ಲಿ 2016ರ ಜೂನ್ ನಲ್ಲಿ ಬಿಜೆಪಿ ನಾಯಕ ಯೋಗೇಶ್ ಗೌಡರ್ ಅವರನ್ನು ಬರ್ಬರವಾಗಿ ಹತ್ಯೆ ಮಾಡಲಾಗಿತ್ತು. ಆರಂಭದಲ್ಲಿ ಸ್ಥಳೀಯ ಪೊಲೀಸರು ತನಿಖೆ ನಡೆಸಿದ್ದರು. ನಂತರ ಪ್ರಕರಣದ ತನಿಖೆಯನ್ನು ಸಿಬಿಐಗೆ ಹಸ್ತಾಂತರಿಸಲಾಗಿತ್ತು.

### ರಾಜಕೀಯ ಬೇಡ: ಮೋದಿ

ಮೀಸಲಾತಿ ಮಸೂದೆ ವಿರೋಧಿಸುವವರು ದೀರ್ಘಕಾಲದವರೆಗೆ ಬೆಲೆ ತೆರಬೇಕಾಗುತ್ತದೆ. ನಮ್ಮ ಹಕ್ಕುಗಳ ವಿರುದ್ಧ ನಿಂತವರು ಯಾರು ಎಂಬುದನ್ನು ಮಹಿಳೆಯರು ಎಂದಿಗೂ ಮರೆಯುವುದಿಲ್ಲ ಎಂದು ಎಚ್ಚರಿಸಿದರು.

ಭಾರತದ ಅಭಿವೃದ್ಧಿಯನ್ನು ಕೇವಲ ಮೂಲಸೌಕರ್ಯದಿಂದ ಅಳೆಯಲಾಗುವುದಿಲ್ಲ. ಅದು ನೀತಿ ನಿರೂಪಣೆಯಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನೂ ಪ್ರತಿಬಿಂಬಿಸಬೇಕು. ಭಾರತದ ಅಭಿವೃದ್ಧಿ ಪಯಣದಲ್ಲಿ ಮಹಿಳೆಯರನ್ನು ನಿರ್ಣಯ ಕೈಗೊಳ್ಳುವುದರ ಭಾಗವಾಗಿಸುವ ಅವಕಾಶ ಸಂಸದರ ಬಳಿ ಇದೆ. ಆಡಳಿತದಲ್ಲಿ ಮಹಿಳೆಯರ ಒಳಗೊಳ್ಳುವಿಕೆ ಅಭಿವೃದ್ಧಿ ಹೊಂದಿದ ದೇಶ ನಿರ್ಮಾಣಕ್ಕೆ ಅತ್ಯವಶ್ಯಕವಾಗಿದೆ ಎಂದು ಹೇಳಿದರು.

ಮಹಿಳಾ ಮೀಸಲಾತಿ ತಿದ್ದುಪಡಿ ಮಸೂದೆಗೆ ರಾಜಕೀಯ ಬಣ್ಣ ನೀಡದಿರುವ ಬಗ್ಗೆ ಸಂಸದರನ್ನು ಎಚ್ಚರಿಸಿದ ಮೋದಿ, ಕಾಯ್ದೆ ಮೂಲಕ ಮಹಿಳಾ ಮೀಸಲಾತಿ ಜಾರಿಯನ್ನು ರಾಷ್ಟ್ರೀಯ ಆದ್ಯತೆಯಾಗಿ ಪರಿಗಣಿಸಬೇಕೆ ಹೊರತು ಇಬ್ಭಾಗಿಸುವ ಅರ್ಥದಲ್ಲಲ್ಲ. ಮಹಿಳಾ ಮೀಸಲಾತಿ ಮಸೂದೆಯನ್ನು ರಾಜಕೀಕರಣಗೊಳಿಸುವ ಯಾವುದೇ ಅಗತ್ಯ ಇಲ್ಲ ಎಂದು ತಿಳಿಸಿದರು.

### ನಾಯಕತ್ವ ಬದಲಾವಣೆ ಚರ್ಚೆ ಇನ್ನೂ ಮುಗಿದಿಲ್ಲ!

ನಾಯಕತ್ವ ಗೊಂದಲವನ್ನ ಹೈಕಮಾಂಡ್ ಬಗೆಹರಿಸಬೇಕು. ನಾನು ಕೂಡಾ ಮಾತಾಡಿದ್ದೇನೆ. ಗೊಂದಲ ಬಗೆಹರಿಸದೇ ಹೋದರೆ ಪಕ್ಷದ ಬೆಳವಣಿಗೆಗೆ ತೊಂದರೆ ಆಗುತ್ತದೆ ಎಂದು ತಿಳಿಸಿದರು.

### ಸಂಪುಟ ಪುನರ್ ರಚನೆ ಆಗಲಿ

ಯಾವುದೇ ಅನ್ಯಾಯ ಆಗಲ್ಲ. ಮಹಿಳಾ ಮೀಸಲಾತಿ ಕೊಡಲು ಕ್ಷೇತ್ರ ಹೆಚ್ಚು ಮಾಡುವ ಅವಶ್ಯಕತೆ ಇಲ್ಲ. ಎಷ್ಟೇ ಸ್ಥಾನ ಇದ್ದರು ಶೇ.33 ಮೀಸಲು ಕೊಡಬೇಕು. ಡಿಲಿಮಿಟೇಷನ್ ಬೇರೆ, ಮಹಿಳಾ ಮೀಸಲಾತಿ ಬೇರೆ ಎಂದು ತಿಳಿಸಿದರು. ಮರು ವಿಂಗಡಣೆಯಲ್ಲಿ ರಾಜ್ಯಗಳಲ್ಲಿರುವ ಲೋಕಸಭೆ ಕ್ಷೇತ್ರದ ಸ್ಥಾನದ ಶೇ.50 ಕೊಡುತ್ತೇವೆ ಎಂದು ಹೇಳುತ್ತಿದ್ದಾರೆ. ಅದಕ್ಕೆ ಜನಸಂಖ್ಯೆ ಸೇರಿ ಬೇರೆ ಮಾನದಂಡ ಇಲ್ಲ ಎಂದರು.

# ಅಕ್ರಮ ಕಟ್ಟಡ ಕಾಮಗಾರಿ ನಿಲ್ಲಿಸಿ

## ಹುಣಸೂರು ಉಪವಿಭಾಗಧಿಕಾರಿ ಕಾವ್ಯರಾಣಿ ಎಚ್ಚರಿಕೆ । ಸ್ಥಳ ಪರಿಶೀಲನೆ

ಎಚ್.ಡಿ.ಕೋಟೆ: ತಾಲೂಕು ಅಂತರಸಂತೆ ಹೋಬಳಿ, ಮೈಸೂರು-ಮಾನಂದವಾಡಿ ಮುಖ್ಯರಸ್ತೆಯ ಮಗ್ಗೆ, ಮಳಲಿ ಗ್ರಾಮಗಳ ಮಧ್ಯದ ಸೂಕ್ಷ್ಮ ವಲಯ ವ್ಯಾಪ್ತಿಯಲ್ಲಿ ನಿರ್ಮಿಸುತ್ತಿರುವ ಅಕ್ರಮ ಕಟ್ಟಡ ಕಾಮಗಾರಿಯನ್ನು ಈ ಕೂಡಲೇ ನಿಲ್ಲಿಸುವಂತೆ ಹುಣಸೂರು ಉಪವಿಭಾಗಧಿಕಾರಿ ಕಾವ್ಯರಾಣಿ ಎಚ್ಚರಿಕೆ ನೀಡಿದ್ದಾರೆ.

ಸ್ಥಳ ಪರಿಶೀಲನೆಗೂ ಮುನ್ನ ತಹಸೀಲ್ದಾರ್ ಕಚೇರಿಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ರೆಸಾರ್ಟ್ಸ್ ಗಳಲ್ಲಿ ಅಕ್ರಮವಾಗಿ ಒತ್ತುವರಿಯಾಗಿರುವ ಜಾಗವನ್ನ ತೆರವುಗೊಳಿಸಿರುವುದರ ಬಗ್ಗೆ ವರದಿ ಕೇಳಲಾಯಿತು. ಕಬಿನಿ ಜಲಾಶಯದ ಸಹಾಯಕ ಕಾರ್ಯಪಾಲಕ ಅಭಿಯಂತರ ಗಣೇಶ್ ಉತ್ತರಿಸಿ, ನಮ್ಮ ವ್ಯಾಪ್ತಿ ಸದ್ಯ ಆರು ರೆಸಾರ್ಟ್ಸ್‌ಗಳ ಒತ್ತುವರಿ ತೆರವು ಕಾರ್ಯ ಮುಗಿದಿದೆ. ಈ ಜಾಗದಲ್ಲಿ ಎಲ್ಲಿಯೂ ಶಾಶ್ವತ ಕಟ್ಟಡಗಳನ್ನು ಕಟ್ಟಿಲ್ಲ, ಒತ್ತುವರಿ ಜಾಗಗಳಲ್ಲಿ ಪಾರ್ಕ್, ಗಿಡಗಳು, ಕೆಲವೊಂದು ಅಲಂಕಾರಿಕ ಗಿಡಗಂಟಿಗಳನ್ನ ಬೆಳೆಸಿಕೊಂಡಿದ್ದರು, ಹಾಗಾಗಿ ನಮ್ಮ ಕಬಿನಿ ಹಿನ್ನೀರಿನ ಜಾಗವನ್ನ ಒತ್ತುವರಿ ಮಾಡಿಕೊಂಡಿದ್ದ ಮಾಲೀಕರಿಗೆ ಸೂಚನೆ ನೀಡಿ ಸುಮಾರು ಐದು ರೆಸಾರ್ಟ್ ಜಾಗವನ್ನ ತೆರವುಗೊಳಿಸಿ ಆ ಜಾಗಕ್ಕೆ ಟ್ರಂಚ್ ಹೊಡೆಸಿ ಆ ಪ್ರದೇಶಕ್ಕೆ ಮುಳ್ಳುತಂತಿ ಬೇಲಿ ಹಾಕಿಸಿದ್ದೇವೆ ಎಂದರು.

ವಾಟರ್ ಹುಡ್ ರೆಸಾರ್ಟ್ ನವರು ಹೈಕೋರ್ಟ್ ನಿಂದ ಆದೇಶ ತಂದು ಯಥಾಸ್ಥಿತಿ ಕಾಪಾಡಿ ಎಂದು ಹೇಳಲಾಗಿದ್ದು, ಈ ಜಾಗವು ಮೂಲ ಮಾಲೀಕನ 1. 5ಗುಂಟೆ ಜಮೀನನ್ನು ಮಾರಾಟ ಮಾಡಿದ್ದು, ಇದರಲ್ಲಿ 30 ಗುಂಟೆ ಜಾಗವು ಕಬಿನಿ ಹಿನ್ನೀರಿನಲ್ಲಿ ಮುಳುಗಡೆ ಆಗಿದೆ. ಆ ಸಮಯದಲ್ಲಿ ಇಲಾಖೆಯ ಕೈತಪ್ಪಿನಿಂದ ದಾಖಲೆಯಲ್ಲಿ ಸರಿಯಾಗಿ ನಮೂದು ಆಗದೆ ಮತ್ತು ಜಮೀನು ಇಂಡೀಕರಣ ಆಗದೇ ಇರುವುದರಿಂದ ಮಾಲೀಕ ತನ್ನದೆ ಆಸ್ತಿ ಎಂದು ರೆಸಾರ್ಟ್ ನವರಿಗೆ ಮಾರಿದ್ದು, ಇದನ್ನ ಪರಿಶೀಲಿಸಿ ತ್ವರಿತವಾಗಿ ತಹಸೀಲ್ದಾರ್ ಮೂಲಕ ಇಂಡಿಕರಣ ಮಾಡಿಸಿ, ಹೈಕೋರ್ಟ್ ಗೆ ಅರ್ಜಿ ಸಲ್ಲಿಸಿ ಆ ಜಾಗವನ್ನು ತೆರವುಗೊಳಿಸುತ್ತೆವೆ ಎಂದು ತಿಳಿಸಿದರು. ಜಾಗವನ್ನ ಆಗ್ಗಿಂದಾಗೆ ವೀಕ್ಷಣೆ ಮಾಡುತ್ತಿರಿ, ಈ ಸಂಬಂಧ ರೆಸಾರ್ಟ್ ಗಳು ಟೌನ್ ಪ್ಲಾನ್, ಅಗ್ನಿಶಾಮಕ ಇಲಾಖೆ, ಅರಣ್ಯ ಇಲಾಖೆ, ವಾಯು ನಿಯಂತ್ರಣ ಮಂಡಳಿ, ಗ್ರಾ.ಪಂ ನಿಂದ ಪಡೆದಿರುವ ಪ್ರಮಾಣ ಪತ್ರಗಳ ಸಮೇತ ಶನಿವಾರದೊಳಗೆ ವರದಿ ಸಲ್ಲಿಸಿ ಎಂದು ಎ.ಸಿ. ಕಾವ್ಯರಾಣಿ ಅಧಿಕಾರಿಗಳಿಗೆ ಸೂಚಿಸಿದರು. ತಹಸೀಲ್ದಾರ್ ಶ್ರೀನಿವಾಸ್, ಇಒ ಧರಣೇಶ್, ಮುಖ್ಯಾಧಿಕಾರಿ ಸುರೇಶ್, ಎಸಿಎಫ್ ಮಧು ದೇವಯ್ಯ, ಂಖಖ ಶಶಿಕುಮಾರ್, ಟೌನ್ ಪ್ಲಾನಿಂಗ್ ಆಫೀಸರ್ ದೀಪಕ್, ಮಾಲಿನ್ಯ ನಿಯಂತ್ರಣ ಮಂಡಳಿ ಸುನಿಲ್, ಆರ್.ಐ ಯೋಗೀಶ್, ವಿ.ಎ ನಾಗರಾಜ್, ಪರಶಿವ, ಪಿಡಿಒ ಚಿದಾನಂದ ಸೇರಿದಂತೆ ಅಧಿಕಾರಿಗಳ ದಂಡೇ ನೆರೆದಿತ್ತು.



> ಸಾರ್ವಜನಿಕರ ದೂರಿನನ್ವಯ ನಾವು ಈ ದಿನ ಇಲ್ಲಿಗೆ ಬಂದು ಪರಿಶೀಲನೆ ನಡೆಸಿದಾಗ, ಯಾವುದೇ ಅನುಮತಿ ಪಡೆಯದೆ ಎಕೋಸೆನ್ಸಿಟೀವ್ ಮತ್ತು ಬಫರ್ ಜೋನ್ ವ್ಯಾಪ್ತಿಯಲ್ಲಿ ಹೋಟೆಲ್ ಉದ್ದೇಶಕ್ಕೆ ಕಟ್ಟಡ ಒಂದು ನಿರ್ಮಾಣವಾಗುತ್ತಿತ್ತು, ಇದು ಕಾನೂನು ಬಾಹಿರ ಎಂದು ಮಾಲೀಕರಿಗೆ ತಹಸಿಲ್ದಾರ್ ಮತ್ತು ನನ್ನ ಹಂತದಲ್ಲಿ ಎರಡು ನೋಟಿಸ್ ನೀಡಲಾಗಿದ್ದು, ಇದಕ್ಕೆ ಯಾವುದೆ ಉತ್ತರ ನೀಡದೆ ಕೆಲಸ ಮುಂದುವರೆಸಿದ್ದಾರೆ, ಹಾಗಾಗಿ ಅಂತಿಮವಾಗಿ ತಿಳುವಳಿಕೆ ಮತ್ತು ನೋಟಿಸ್ ಜಾರಿಮಾಡಿ ಎಚ್ಚರಿಕೆ ನೀಡಿದ್ದೇನೆ.
>
> ▸▸ **ಕಾವ್ಯರಾಣಿ** ಉಪವಿಭಾಗಾಧಿಕಾರಿ, ಹುಣಸೂರು

### ಕಟ್ಟಡ ಕಾಮಗಾರಿ ನಿಲ್ಲಿಸುವಂತೆ ಸೂಚನೆ

ಸಾರ್ವಜನಿಕರ ದೂರಿನನ್ವಯ ಬಂದ ಮಾಹಿತಿ ಪ್ರಕಾರ ಮಗ್ಗೆ, ಮಳಲಿ ಗ್ರಾಮದ ಮಧ್ಯ ಇರುವ ಮೈಸೂರು ಮಾನಂದವಾಡಿ ಮುಖ್ಯರಸ್ತೆಗೆ ಹೊಂದಿಕೊಂಡಂತೆ ಇರುವ ಜಾಗದಲ್ಲಿ ನಿರ್ಮಾಣವಾಗುತ್ತಿರುವ ಹೋಟೆಲ್ ಒಂದರ ಬೃಹತ್ ಕಟ್ಟಡ ಕಾಮಗಾರಿ ನಡೆಯುತ್ತಿರುವ ಸ್ಥಳಕ್ಕೆ ಅಧಿಕಾರಿಗಳ ತಂಡ ದೌಡಾಯಿಸಿ ಕಟ್ಟಡ ಕಾಮಗಾರಿ ನಿಲ್ಲಿಸುವಂತೆ ಎ.ಸಿ.ಕಾವ್ಯರಾಣಿ ಆದೇಶ ಮಾಡಿದರು. ಎಸಿ ಮತ್ತು ಅಧಿಕಾರಿಗಳ ತಂಡ ಭೇಟಿ ಕೊಟ್ಟು ನೋಡಿದಾಗ, ಬೃಹತ್ ಗಾತ್ರದ ಭವ್ಯ ಕಟ್ಟಡದ ಕಾಮಗಾರಿ ನೋಡಿ ಒಂದು ಕ್ಷಣ ಬೆರಗಾದ ಅಧಿಕಾರಿಗಳು ಸ್ಥಳದಲ್ಲಿ ಮಾಲೀಕ ಲಕ್ಷ್ಮಿಪ್ರಸಾದ್ ಎಂಬುವರಿಗೆ ಕರೆಮಾಡಿ ಈ ಕ್ಷಣದಿಂದಲೇ ಕಾಮಗಾರಿ ನಿಲ್ಲಿಸಿ ಇಲ್ಲದಿದ್ದರೆ ಮುಂದಿನ ಕ್ರಮ ಜರುಗಿಸಬೇಕಾಗುತ್ತದೆ. ಈಗಾಗಲೇ ನಿಮಗೆ ಎರಡು ನೋಟಿಸ್ ಜಾರಿಮಾಡಿ ಕಟ್ಟಡ ನಿರ್ಮಾಣವಾಗುತ್ತಿರುವ ಜಾಗ ಸೂಕ್ಷ್ಮವಲಯ ವ್ಯಾಪ್ತಿಗೆ ಒಳಪಟ್ಟಿದೆ. ಆದ್ದರಿಂದ, ಯಾವುದೇ ಕಟ್ಟಡ ಕಾಮಗಾರಿ ನಡೆಸಬೇಡಿ ಎಂದು ತಿಳಿಸಿದ್ದರೂ ನೀವು ಮುಂದುವರೆಸಿದ್ದೀರಿ, ಇದು ಕಾನೂನು ಬಾಹಿರವಾಗುತ್ತದೆ. ಈ ಕೂಡಲೆ ಕಾಮಗಾರಿ ನಿಲ್ಲಿಸಿ ಎಂದು ತಿಳಿಸಿದರು. ಹಾಗೊಂದು ವೇಳೆ ನಿಮಗೆ ಅವಶ್ಯಕತೆ ಇದ್ದರೆ ಪ್ರಾದೇಶಿಕ ಆಯುಕ್ತರ ಕಚೇರಿಯಿಂದ ಅನುಮತಿ ಪಡೆದು ಮುಂದುವರಿಸಿ ಎಂದು ತಿಳಿಸಿ ಅಲ್ಲಿ ಕೆಲಸ ಮಾಡುತ್ತಿದ್ದ ಕೂಲಿಕಾರ್ಮಿಕರನ್ನ ಹೊರಗೆ ಕಳುಹಿಸಿದರು.



## ಮೊದಲ ಪುಟದಿಂದ

### ವಿನಯ್ ಕುಲಕರ್ಣಿ ಇದ್ದ ಬಸ್‌ನಲ್ಲಿ ಬೆಂಕಿ, ಹೊಗೆ

ಸಮೀಪದಲ್ಲಿ ಸಂಭವಿಸಿದೆ. ಬಸ್‌ನಲ್ಲಿ ಅಕಸ್ಮಿಕವಾಗಿ ತಾಂತ್ರಿಕ ದೋಷ ಉಂಟಾಗಿ ಬೆಂಕಿ ಕಾಣಿಸಿಕೊಂಡಿದೆ. ಇದರಿಂದ ಬಸ್‌ನೊಳಗಿದ್ದ ಆರೋಪಿಗಳು ಹಾಗೂ ಸಿಬಿಐ ಭದ್ರತಾ ಸಿಬ್ಬಂದಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಯಿತು. ಆದರೆ ತಕ್ಷಣವೇ ಎಚ್ಚೆತ್ತುಕೊಂಡ ಸಿಬಿಐ ತಂಡ ಪರಿಸ್ಥಿತಿಯನ್ನು ನಿಯಂತ್ರಿಸಿ ಎಲ್ಲರನ್ನು ಸುರಕ್ಷಿತವಾಗಿ ಹೊರಗೆ ಕರೆದುಕೊಂಡು ಬಂದಿದೆ. ನಂತರ ಬೇರೆ ವಾಹನಗಳ ಮೂಲಕ ಕಾರಾಗೃಹಕ್ಕೆ ಕರೆದೊಯ್ಯಲಾಯಿತು.

### ಕಣ್ಣೀರಿಟ್ಟ ವಿನಯ್

**ಹಾಕಿದರು. ಇಲ್ಲಿವರೆಗೂ ಕುಲಕರ್ಣಿ ಊಟ ಮಾಡಿಲ್ಲ ಎನ್ನಲಾಗಿದೆ. ಜೈಲಾಧಿಕಾರಿಗಳು ಎಲ್ಲರಿಗೂ ಸಿಟಿಪಿ ನಂಬರ್ ಅನ್ನು ನೀಡಿದ್ದಾರೆ. ಎಲ್ಲರನ್ನೂ ಕ್ವಾರಂಟೈನ್ ಸೆಲ್‌ನಲ್ಲಿರಿಸಿದ್ದಾರೆ.**

### ಕೈ ವಿರುದ್ಧ ಮುಸ್ಲಿಮರ ಕಿಡಿ

ಸಮುದಾಯದ ಸಭೆ ಕರೆಯುತ್ತೇವೆ ಎಂದು ಹೇಳಿದರು.

### ಶಾಸಕರಿಂದ ಸುರ್ಜೇವಾಲ ಭೇಟಿ

ರಾಘವೇಂದ್ರ ಹಿಟ್ನಾಳ್, ಡಿಜಿ ಶಾಂತನಗೌಡ, ಹಂಪನಗೌಡ ಬಲ್ಲಿ, ಬಸವರಾಜ್ ಶಿವಣ್ಣನವರ್, ಮಹಾಂತೇಶ್ ಕೌಜಲಗಿ, ಷಡಕ್ಷರಿ, ಯಶವಂತರಾಯಗೌಡ ಪಾಟೀಲ್, ಜಿಟಿ ಪಾಟೀಲ್ ಅವರು ದೆಹಲಿಯಲ್ಲಿ ಉಳಿದಿದ್ದಾರೆ. ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರನ್ನು ಅವರ ನಿವಾಸದಲ್ಲಿ ಭೇಟಿಯಾಗಿ ಸಂಪುಟ ಪುನಾರಚನೆಗೆ ಮನವಿ ಮಾಡಿದ್ದಾರೆ.

### ಮುಸ್ಲಿಮರಿಗೆ ಮೀಸಲಾತಿ ನೀಡಲ್ಲ:

ಶಾ ಹೇಳಿದರು. ಲೋಕಸಭೆಯಲ್ಲಿ ಗುರುವಾರ ಮಹಿಳಾ ಮೀಸಲಾತಿ ಹಾಗೂ ಕ್ಷೇತ್ರ ಪುನರ್ ವಿಂಗಡಣೆ ಮಸೂದೆಗಳ ಮೇಲಿನ ಚರ್ಚೆಯಲ್ಲಿ ಮಾತನಾಡಿದ ಅವರು, ಮಹಿಳೆಯರಿಗೆ ಶೇ.33 ಮೀಸಲಾತಿ ನೀಡುತ್ತಿದ್ದೇವೆ ಎಂದರೆ ಮುಸ್ಲಿಮರಿಗೂ ಮೀಸಲಾತಿ ನೀಡುತ್ತಿದ್ದೇವೆ ಎಂದು ಅರ್ಥವಲ್ಲ ಎಂದು ಹೇಳಿದರು.

ಸಂಸದರಾದ ಅಖಿಲೇಶ್ ಯಾದವ್ ಹಾಗೂ ಧರ್ಮೆಂದ್ರ ಯಾದವ್ ಅವರು ಮುಸ್ಲಿಮರಿಗೆ ಮೀಸಲಾತಿ ಬೇಕು ಎಂದು ಹೇಳಿದರು. ಇದಕ್ಕೆ ವಿರೋಧ ವ್ಯಕ್ತಪಡಿಸಿ ಸುಮಾರು 40 ನಿಮಿಷ ಮಾತನಾಡಿದ ಅಮಿತ್ ಶಾ, ಸಮಾಜವಾದಿ ಸೇರಿದಂತೆ ವಿರೋಧ ಪಕ್ಷದ ನಾಯಕರ ಕಾಲೆಳೆದರು. ಮಹಿಳಾ ಮೀಸಲಾತಿ ಕಾಯ್ದೆ ಜಾರಿಗೊಳಿಸಲು ನಾವು ಸಿದ್ಧವಾಗಿದ್ದೇವೆ. ಸಮಾಜವಾದಿ ಪಕ್ಷ ಬೇಕಿದ್ದರೆ ತನ್ನ ಎಲ್ಲ ಕ್ಷೇತ್ರಗಳಲ್ಲಿ ಮುಸ್ಲಿಂ ಮಹಿಳೆಯರಿಗೇ ಟಿಕೆಟ್ ನೀಡಲಿ ಎಂದು ಕಿಚಾಯಿಸಿದರು.

# ಜ್ಞಾನದೀಪ ಕಾಲೇಜಿನಿಂದ ಶುಲ್ಕ ವಿನಾಯಿತಿ

ಮೈಸೂರು: ಇಲ್ಲಿನ ಗಂಗೋತ್ರಿ ಬಡಾವಣೆಯ ಜ್ಞಾನದೀಪ ಪ್ರಥಮ ದರ್ಜೆ ಕಾಲೇಜಿನಲ್ಲಿ ಬಿ.ಕಾಂ ಕೋರ್ಸ್‌ಗಳಿಗೆ ಪ್ರವೇಶಾತಿ ನಡೆಯುತ್ತಿದ್ದು, ಪಿಯುನಲ್ಲಿ ಶೇ.80ಕ್ಕೂ ಹೆಚ್ಚು ಅಂಕ ಪಡೆದ ಮಕ್ಕಳಿಗೆ ಪ್ರಥಮ ವರ್ಷ ಶುಲ್ಕ ವಿನಾಯಿತಿ ನೀಡಲಾಗುವುದು ಎಂದು ಪ್ರಾಂಶುಪಾಲೆ ಮೇರಿ ಫ್ಲೋರೆನ್ಸ್ ತಿಳಿಸಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 'ಅಧ್ಯಾಪನ್ ಎಜುಕೇಷನ್ ಎಂಪೈರ್ ನೇತೃತ್ವದಲ್ಲಿ ಈ ಯೋಜನೆ ಹಮ್ಮಿಕೊಳ್ಳಲಾಗಿದೆ. ಏಕ ಪೋಷಕರು, ರೈತರು, ಪೌರ ಕಾರ್ಮಿಕರು ಹಾಗೂ ದಿನಗೂಲಿ ನೌಕರರ ಮಕ್ಕಳಿಗೂ ಸಹ ವಾರ್ಷಿಕ ಶುಲ್ಕದಲ್ಲಿ ಶೇ 50 ರಿಯಾಯಿತಿ ನೀಡಲಾಗುವುದು. ಮಾಹಿತಿಗೆ ಮೊ.ಸಂ. 97405 00533 ಸಂಪರ್ಕಿಸಬಹುದು' ಎಂದರು. ಸುದ್ದಿಗೋಷ್ಠಿಯಲ್ಲಿ ಪಿಯು ವಿಭಾಗದ ಪ್ರಾಂಶುಪಾಲ ಪ್ರವೀಣ್, ಅಧ್ಯಾಪನ್ ಸಲಹೆಗಾರ ಸಂಧಾನಕೃಷ್ಣ ಇದ್ದರು.



### ಪಕ್ಷಕ್ಕಿಂತ ಯಾರೂ ದೊಡ್ಡವರಲ್ಲ

ಗಾಂಧಿ ಅಂತ ಹೇಳಿ ಬಂದಿದ್ದಾರೆ. ದೊರೆಗೆ ದಂಡವಿಲ್ಲ ಅಂದರೆ ಎಲ್ಲಾ ಪಕ್ಷದಲ್ಲೂ ಅದೇ ಹಣೆಬರಹ ಅಂತ ಡಿ.ಕೆ ಶಿವಕುಮಾರ್ ಅವರನ್ನು ಸಮರ್ಥನೆ ಮಾಡಿಕೊಂಡರು.

### ಮೂರು ಮಸೂದೆ: ಇಂದು ಮತದಾನ

ಸಂವಿಧಾನದ 131ನೇ ತಿದ್ದುಪಡಿ ಮಸೂದೆ-2026 ಅನ್ನು ಮಂಡಿಸಲು ಲೋಕಸಭೆ ಅನುಮತಿ ನೀಡಿತು.

### ಸಂಸತ್‌ನಲ್ಲಿ ವಿಪಕ್ಷಗಳ ಕೋಲಾಹಲ

ಪ್ರದೇಶದ ವಿವಿಧ ಕ್ಷೇತ್ರಗಳಿಗೆ ರೋಟೇಶನ್ ಆಧಾರದ ಮೇಲೆ ಹಂಚಲಾಗುತ್ತದೆ ಎಂದು ಮಸೂದೆಯಲ್ಲಿ ಹೇಳಲಾಗಿದೆ.

ರಾಜ್ಯಸಭೆಯ ಹೊಸದಾಗಿ ಆಯ್ಕೆಯಾದ ಸದಸ್ಯರ ಪ್ರಮಾಣ ವಚನ ಸ್ವೀಕಾರ ಮತ್ತು ಸಂತಾಪ ಸೂಚನೆ ನಂತರ ಶುಕ್ರವಾರಕ್ಕೆ ಸದನ ಮುಂದೂಡಲಾಯಿತು.

## ಪ್ರೊ.ರಹಮತ್ ತರೀಕೆರೆ ಹೇಳಿಕೆ

# ದೇಶದ ಎಲ್ಲಾ ಸಮಸ್ಯೆಗೆ ಸಂವಿಧಾನವೇ ಪರಿಹಾರ

ಮೈಸೂರು: ಒಳಗೊಳ್ಳುವುದು ಪ್ರಬುದ್ಧತೆ. ಹೊರಗಿಡುವುದು ಅಪ್ರಬುದ್ಧತೆ. ಅನೇಕ ಸಮಸ್ಯೆಗಳಿಂದ ಬಳಲುತ್ತಿರುವ ಭಾರತಕ್ಕೆ ಡಾ.ಬಿ.ಆರ್. ಅಂಬೇಡ್ಕರ್ ಒಳಗೊಳ್ಳುವ ಬದುಕು, ಜ್ಞಾನ, ತತ್ವ ಮತ್ತು ಸಂವಿಧಾನದಲ್ಲಿ ಪರಿಹಾರ ಇದೆ ಎಂದು ಚಿಂತಕ ಪ್ರೊ.ರಹಮತ್ ತರೀಕೆರೆ ಅಭಿಪ್ರಾಯಪಟ್ಟರು.

ಮೈಸೂರು ವಿವಿ ಸಂಶೋಧಕರ ಸಂಘ, ದಲಿತ ವಿದ್ಯಾರ್ಥಿ ಒಕ್ಕೂಟ, ಉಳುಮೆ ಪ್ರತಿಷ್ಠಾನದ ಸಹಯೋಗದಲ್ಲಿ ಗುರುವಾರ ಮಾನಸಗಂಗೋತ್ರಿಯ ಮಾನವಿಕ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಡಾ. ಅಂಬೇಡ್ಕರ್ 135ನೇ ಜಯಂತಿಯಲ್ಲಿ ಒಳಗೊಳ್ಳುವ ಪ್ರಬುದ್ಧ ಭಾರತ: ಡಾ.ಬಿ.ಆರ್.ಅಂಬೇಡ್ಕರ್ ಪರಿಕಲ್ಪನೆ ವಿಷಯ ಕುರಿತು ಮಾತನಾಡಿದರು. ಪ್ರಬುದ್ಧತೆ ಬೌದ್ಧದ ಧಮ್ಮದ ಸಾರ. ಅಲ್ಲಿ ತತ್ವ, ಕರುಣೆ, ಮೈತ್ರಿ ಇದೆ. ಅತ್ಯಂತ ಶ್ರೇಷ್ಠ ಮೌಲ್ಯಗಳು ಭಾರತದ ಆತ್ಮವಾಗಬೇಕು. ದಾರಿ ದೀಪಕವಾಗಬೇಕು. ಜಾತಿ, ಧರ್ಮದ ಸಮಸ್ಯೆಗಳಿಂದ ಭಾರತದ ಅಪ್ರಬುದ್ಧವಾಗಿದೆ. ಪ್ರಬುದ್ಧತೆ ಬೆಳೆಸಿಕೊಂಡು ವಿವೇಕ ಮತ್ತು ಮಾನವೀಯತೆ ಕಡೆ ಸಾಗಬೇಕು ಎಂದರು.



ಭಾರತದ ಚರಿತ್ರೆ ಬಹುಜನರನ್ನು ಹೊರಗಿಟ್ಟ ಚರಿತ್ರೆಯಾಗಿದೆ. ಸಮಾಜವನ್ನು ಜಾತಿ, ಧರ್ಮ, ಲಿಂಗ, ಭಾಷೆಯ ಆಧಾರದಲ್ಲಿ ವಿಭಜನೆ ಮಾಡುವುದು. ಸಂಪತ್ತಿನ ಹಂಚಿಕೆ, ಅಧಿಕಾರ ಕೆಲವರ ಬಳಿಯೇ ಇರಬೇಕೆಂದು ಆದೇಶಿಸುವುದು ಹೊರಗಿಡುವ ಗುಣವಾಗಿದೆ. ಭಾರತದ ಅಭಿವೃದ್ಧಿಯ ಬಲಿಪಶುಗಳು ಆದಿವಾಸಿಗಳು. ಶಿಕ್ಷಣ, ಅಭಿವೃದ್ಧಿ, ರಾಜಕಿಯ ಹೊರಗಿಟ್ಟಾಗ ಪ್ರಬುದ್ಧವಾಗಿಲ್ಲ. ಅರಸು ಉಳುವವನಿಗೆ ಭೂಮಿ ಕೊಟ್ಟಾಗ, ನಾಲ್ವಡಿ ಮಿಲ್ಲರ್ ಆಯೋಗ ರಚಿಸಿದಾಗ ಒಳಗೊಳ್ಳುವ ಗುಣಗಳನ್ನು ಕಾಣಬಹುದು. ಇದು ಅಂಬೇಡ್ಕರ್‌ರ ಮೇಲೆ ಪ್ರಭಾವ ಬೀರಿದೆ ಎಂದರು.

ಸ್ವಚ್ಛತಾಕರ್ಮಿ ಶಾಂತಮ್ಮ ಬಾಬಾ ಸಾಹೇಬರ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿ ಸಮಾರಂಭ ಉದ್ಘಾಟಿಸಿದರು. ಉಳುಮೆ ಪ್ರತಿಷ್ಠಾನದ ಅಧ್ಯಕ್ಷ ಅವಿನಾಶ್ ಟಿಜೆಎಸ್ ಪರಿಸರ ಮತ್ತು ಪ್ರಕೃತಿ ಡಾ.ಬಿ.ಆರ್. ಅಂಬೇಡ್ಕರ್ ದಾರ್ಶನಿಕತೆ ವಿಷಯ ಮಂಡಿಸಿದರು. ಚರಿತ್ರಾ ಸಂವಿಧಾನ ಪೀಠಿಕೆ ಓದಿದರು. ಮೈಸೂರು ವಿವಿ ಕಲಾ ನಿಕಾಯದ ಡೀನ್ ಪ್ರೊ.ಎಂ.ಎಸ್ ಶೇಖರ್, ಸಾಮಾಜಿಕ ಹೋರಾಟಗಾರ ಅಹಿಂದ ಜವರಪ್ಪ, ಕವಿ ಶಂಕನಪುರ ಮಹಾದೇವ, ಮುಕ್ತವಿವಿ ಸಿಂಡಿಕೇಟ್ ಸದಸ್ಯ ಮಹೇಶ್ ಸೊಸ್ಲೆ, ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ನಟರಾಜ್ ಶಿವಣ್ಣ, ಮೈಸೂರು ವಿವಿ ಗ್ರಂಥಪಾಲಕಿ ಸರಸ್ವತಿ, ಪ್ರಾಧ್ಯಾಪಕರಾದ ಪ್ರೊ.ಮಮತಾ, ಪ್ರೊ.ವಿಜಯಲಕ್ಷ್ಮೀ ಮನಾಪುರ, ಪ್ರೊ.ಪುಷ್ಪಾ ಮುಂತಾದವರಿದ್ದರು. ದಲಿತ ವಿದ್ಯಾರ್ಥಿ ಒಕ್ಕೂಟದ ಅಧ್ಯಕ್ಷ ಎಂ.ಗಜೇಂದ್ರ ಸ್ವಾಗತಿಸಿದರು. ಸಂಶೋಧಕರ ಸಂಘದ ಅಧ್ಯಕ್ಷ ವರಹಳ್ಳಿ ಆನಂದ್ ವಂದಿಸಿದರು. ದೇವಾನಂದ ವರಪ್ರಸಾದ್, ಅಮ್ಮರಾಮಚಂದ್ರ, ಶೇಷಣ್ಣ ಮತ್ತು ತಂಡದವರು ಭೀಮಗೀತೆ ಹಾಡಿದರು.

# ಮಾಚಿದೇವರ ಚಿಂತನೆಗಳನ್ನು ಎಲ್ಲರಿಗೂ ತಿಳಿಸಬೇಕಿದೆ



ಸರಗೂರು: ಕಾಯಕ ಮತ್ತು ವಿಶಿಷ್ಟ ವಚನಗಳ ಮೂಲಕ ಸಮಾಜ ತಿದ್ದುವ ಕಾರ್ಯ ಮಾಡಿದ ಮಡಿವಾಳ ಮಾಚಿದೇವರು ಕಾಯಕ ಯೋಗಿ ಎನಿಸಿಕೊಂಡಿದ್ದಾರೆ. ಅವರ ಬದುಕಿನ ಚಿಂತನೆಗಳನ್ನು ನಾವು ತಿಳಿದುಕೊಂಡು ಇತರರಿಗೂ ತಿಳಿಸಬೇಕು ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು.

ಸರಗೂರು ತಾಲೂಕಿನ ಹೊಸ ಬೀರ್ವಾಳು ಗ್ರಾಮದಲ್ಲಿ ನಡೆದ ಮಡಿವಾಳ ಮಾಚಿದೇವರ ಚಿತ್ರಪಟ ಪ್ರತಿಷ್ಠಾಪನೆ ಹಾಗೂ ಮಾಚಿದೇವರ ಜಯಂತಿ ಕಾರ್ಯಕ್ರಮದಲ್ಲಿ ಮಡಿವಾಳ ಮಾಚಿದೇವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು. ಸಮಾಜದಲ್ಲಿ ಮಡಿವಾಳ ಸಮುದಯ ಚಿಕ್ಕ ಸಮಾಜವಾಗಿದ್ದು, ತಮ್ಮ ಹಕ್ಕುಗಳನ್ನು ಪಡೆಯಲು ಮತ್ತಷ್ಟು ಸಂಘಟನೆಯಾಗಬೇಕಿದೆ. ಆ ಮೂಲಕ ಶಿಕ್ಷಣ ಪಡೆದು ಉನ್ನತ ಹುದ್ದೆ ಅಲಂಕರಿಸಬೇಕಿದೆ. ಆರ್ಥಿಕವಾಗಿ ಬೆಳವಣಿಗೆ ಹೊಂದಬೇಕಿದೆ. ಎಚ್.ಡಿ.ಕೋಟೆ ಪಟ್ಟಣದಲ್ಲಿ ಮಡಿವಾಳ ಸಮಾಜದ ಭವನ ನಿರ್ಮಾಣಕ್ಕೆ ನೀಡಿರುವ ನಿವೇಶನ ಗೊಂದಲದಲ್ಲಿದ್ದು, ಮುಂದಿನ ದಿನಗಳಲ್ಲಿ ಕೋಟೆ ಪುರಸಭೆ ವ್ಯಾಪ್ತಿಯಲ್ಲಿ ಸಮಾಜದ ಮುಖಂಡರೊಂದಿಗೆ ಸಭೆ ನಡೆಸಿ, ಸಮಸ್ಯೆ ಬಗೆಹರಿಸಲು ಕ್ರಮವಹಿಸಲಾಗುವುದು. ಸರಗೂರು ಪಟ್ಟಣದಲ್ಲಿ ಭವನ ನಿರ್ಮಾಣಕ್ಕೆ ಅನುದಾನಕ್ಕೆ ಬೇಡಿಕೆ ಇಟ್ಟಿದ್ದೀರಿ. ನಿವೇಶನ ಇದ್ದರೆ ಖಂಡಿತ ಅನುದಾನ ನೀಡಲಾಗುವುದು ಎಂದರು.

ಸರಗೂರು ತಾಲೂಕು ಮಡಿವಾಳ ಸಮಾಜದ ಅಧ್ಯಕ್ಷ ಎಸ್.ಬಿ. ಧರಣೇಶ್ ಮಾತನಾಡಿ, ಸರಗೂರು ತಾಲೂಕಿನ ಸುತ್ತಮುತ್ತ ಗ್ರಾಮದಲ್ಲಿ ಮಡಿವಾಳ ಸಮುದಾಯದ ಜನರು ಇಂದಿಗೂ ಸಹ ಕುಲ ಕಸಬುಗಳನ್ನು ನಂಬಿಕೊಂಡು ಜೀವನ ಮಾಡುತ್ತಿದ್ದಾರೆ. ಅವರಿಗೆ ಸರ್ಕಾರದಿಂದ ಬರುವ ಸವಲತ್ತುಗಳು ಸಿಗುತ್ತಿಲ್ಲ. ಹಾಗೂ ಅನೇಕ ಗ್ರಾಮಗಳಲ್ಲಿ ನಮ್ಮ ಸಮುದಾಯದ ಸಾಕಷ್ಟು ಕುಟುಂಬಗಳಿವೆ ಅಂತ ಗ್ರಾಮಗಳಲ್ಲಿ ಸಮುದಾಯ ಭವನ ಗಳು ನಿರ್ಮಾಣ ಮಾಡಿಕೊಟ್ಟರೆ ಶುಭ ಸಮಾರಂಭಗಳಿಗೆ ಅನುಕೂಲವಾಗುತ್ತದೆ ಎಂದರು.

ಮಡಿವಾಳ ಸಮಾಜದ ಜಿಲ್ಲಾಧ್ಯಕ್ಷ ರವಿನಂದನ್ ಮಾತನಾಡಿ, ಸಮಾಜದಲ್ಲಿ ಸಣ್ಣ ಸಮುದಾಯವಾದ ಮಡಿವಾಳ ಸಮಾಜವು ಆಧುನಿಕತೆಯಿಂದ ಮೂಲ ವೃತ್ತಿ ಮರೆಯಾಗುತ್ತಿದೆ. ಹೀಗಾಗಿ ಸರ್ಕಾರ ನಮ್ಮ ಸಮುದಾಯವನ್ನು ಪರಿಶಿಷ್ಟ ಜಾತಿಗೆ ಸೇರಿಸಬೇಕು. ಈ ನಿಟ್ಟಿನಲ್ಲಿ ಹೋರಾಟ ನಡೆಸಲು ಸಮಾಜದ ಬಂಧುಗಳು ಒಗ್ಗೂಡಬೇಕು ಎಂದು ಮನವಿ ಮಾಡಿದರು.

ಗ್ರಾಮದ ಮುಖಂಡ ಗ್ರಾಮೀಣ ಮಹೇಶ್ ಮಾತನಾಡಿ, ಸಮಾಜದ ಸುಧಾರಣೆಗಾಗಿ ಶ್ರಮಿಸಿದ ಪ್ರತಿಯೊಬ್ಬ ಮಹನೀಯರನ್ನು ಸ್ಮರಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಶಿಕ್ಷಣ ಎಲ್ಲರ ಹಕ್ಕಾಗಿದ್ದು, ಉನ್ನತ ಮಟ್ಟದ ಶೈಕ್ಷಣಿಕ ತರಬೇತಿಗೆ ಮಕ್ಕಳನ್ನು ಸೇರಿಸಬೇಕು. ಸರ್ಕಾರದಿಂದ ನೀಡಲಾಗುವ ಸೌಲಭ್ಯ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ಎಚ್.ಡಿ.ಕೋಟೆ ತಾಲೂಕು ಅಧ್ಯಕ್ಷ ಎಲೆಹುಂಡಿ ಚಂದ್ರ ಶೆಟ್ಟಿ, ಗ್ರಾಮದ ಯಜಮಾನರಾದ ಶ್ಯಾಮಸುಂದರ್, ಹೇಮಂತ್, ಮಹದೇವ ಶೆಟ್ಟಿ ಸಿದ್ದರಾಜು, ಶಿವಣ್ಣಾಚಾರಿ, ಸಿದ್ದನಾಯಕ, ಸೋಮಾಚಾರಿ,ರೇವಣ್ಣ, ನಾಗರಾಜಶೆಟ್ಟಿ, ಪ್ರಸನ್ನ, ಸಿದ್ದಶೆಟ್ಟಿ, ಚಲುವಶೆಟ್ಟಿ, ಪದ್ಮ, ಚಿಕ್ಕಶೆಟ್ಟಿ, ತಿಮ್ಮಶೆಟ್ಟಿ, ವಸಂತ್ ಕುಮಾರ್, ಹಾಗೂ ಗ್ರಾಮದ ಮುಖಂಡರು ಮತ್ತು ಗ್ರಾಮಸ್ಥರು ಇದ್ದರು.

# ಡಾ.ಬಿ.ಆರ್.ಅಂಬೇಡ್ಕರ್ 135ನೇ ಜಯಂತಿ ಆಚರಣೆ



ಕೆ.ಆರ್.ಪೇಟೆ,ಇಡೀ ವಿಶ್ವದಲ್ಲಿಯೇ 32ಡಿಗ್ರಿಗಳನ್ನು ಪಡೆದುಕೊಂಡು ಪ್ರಪಂಚಲ್ಲಿಯೇ ಅತಿ ಹೆಚ್ಚು ಓದಿದ ಮಹಾಜ್ಞಾನಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿಯನ್ನು ವಿಶ್ವಸಂಸ್ಥೆಯು ಪ್ರಪ್ರಥಮ ಭಾರಿಗೆ ವಿಶ್ವಜ್ಞಾನಿಗಳ ದಿನವನ್ನಾಗಿ ಆಚರಿಸಿದೆ ಇದು ಭಾರತಕ್ಕೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರಿಂದ ಭಾರತಕ್ಕೆ ವಿಶೇಷ ಗೌರವವು ಅಂತಾರಾಷ್ಟ್ರೀಯ ಮಟ್ಟದಲ್ಲಿ ಲಭಿಸಿದೆ ಎಂದು ಕೆ.ಆರ್.ಪೇಟೆ ಪಟ್ಟಣದ ಕದಂಬ ಪದವಿ ಪೂರ್ವ ಕಾಲೇಜು ಉಪನ್ಯಾಸಕ ಕರುಣಾನಿಧಿ ಹೇಳಿದರು.

ಅವರು ಪಟ್ಟಣದ ಕೆ.ಪಿ.ಎಸ್ ಶಾಲಾ ಸಭಾಂಗಣದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ಪುರಸಭೆ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್‌ರವರ 135ನೇ ಜನ್ಮ ದಿನಾಚರಣೆ ಸಮಾರಂಭದಲ್ಲಿ ಪ್ರಧಾನ ಉಪನ್ಯಾಸ ನೀಡಿ ಮಾತನಾಡಿದರು.

ಅಂಬೇಡ್ಕರ್ ಅವರು ದಲಿತ ಬಂಧುಗಳಿಗೆ ಕೇವಲ ಶೇ.18ರಷ್ಟು ಮೀಸಲಾತಿಯನ್ನು ನೀಡಿದ್ದಾರೆ. ಶೇ.32ರಷ್ಟು ಓಬಿಸಿ ವರ್ಗಗಳಿಗೆ ನೀಡಿದ್ದಾರೆ. ಉಳಿದ 50ರಷ್ಟು ಮೀಸಲಾತಿಯನ್ನು ಸಾಮಾನ್ಯ ವರ್ಗಕ್ಕೆ ನೀಡಿರುತ್ತಾರೆ. ಆದರೆ ಶೇ.18ರಷ್ಟು ಮೀಸಲಾತಿ ಪಡೆಯುತ್ತಿರುವ ಅಸ್ಪೃಷ್ಯ ಸಮುದಾಯ ಮಾತ್ರ ಅಂಬೇಡ್ಕರ್ ಅವರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದೆ. ಅಂಬೇಡ್ಕರ್ ಅವರನ್ನು ಒಂದೇ ಜಾತಿ-ಧರ್ಮಕ್ಕೆ ಸೀಮಿತಗೊಳಿಸಬಾರದು ಎಲ್ಲರಿಗೂ ಸಾಮಾಜಿಕ ನ್ಯಾಯವನ್ನು ನೀಡಿರುವ ಅಂಬೇಡ್ಕರ್ ಅವರನ್ನು ಸ್ಮರಿಸಬೇಕು ಎಂದು ಹೇಳಿದರು. ಅಂಬೇಡ್ಕರ್ ಅವರು ಕಾರ್ಮಿಕರಿಗೆ 12ಗಂಟೆಯಿಂದ 8ಗಂಟೆ ದುಡಿಮೆಯ ಅವಧಿಯನ್ನು ಜಾರಿಗೆಬ ತಂದರು. ಇ.ಎಸ್.ಐ ಮತ್ತು ಪಿ.ಎಫ್. ಅನ್ನು ಜಾರಿಗೆ ತಂದರು. ಅಂಬೇಡ್ಕರ್ ಅವರು ಸುಮಾರು 2ವರ್ಷ 11ತಿಂಗಳು, 18ದಿನಗಳ ಕಾಲ ಒಬ್ಬರೆ ಸಂವಿಧಾನವನ್ನು ಬರೆದುಕೊಡುವ ಮೂಲಕ ಭಾರತ ದೇಶದ ಎಲ್ಲಾ ಸಮುದಾಯಕ್ಕೆ ಸಾಮಾಜಿಕ ನ್ಯಾಯ ಒದಗಿಸಿಕೊಟ್ಟಿದ್ದಾರೆ. ಇಡೀ ವಿಶ್ವದಲ್ಲಿಯೇ ಅತಿ ಹೆಚ್ಚು ಓದಿದವರು ಎಂಬ ಸಮೀಕ್ಷೆಯಲ್ಲಿ ಅಂಬೇಡ್ಕರ್ ಅವರನ್ನು ಮೀರಿಸುವವರು ಯಾರು ಇಲ್ಲದಂತಾಗಿದೆ. ಇದು ಭಾರತ ದೇಶಕ್ಕೆ ಹೆಮ್ಮೆ ತರುವ ದಿನವಾಗಿದೆ. ಏ.14ಅನ್ನು ಇಡೀ ಪ್ರಪಂಚದಲ್ಲಿ ವಿಶ್ವಜ್ಞಾನಿ ದಿನವನ್ನು ಆಚರಿಸುವ ಮೂಲಕ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸಲಾಗುತ್ತಿದೆ ಇದು ಭಾರತ ದೇಶಕ್ಕೆ ಸಂದ ಗೌರವವಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಹೆಚ್.ಟಿ.ಮಂಜು ಮಾತನಾಡಿದರು. ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದ ಪ್ರವಾಸಿ ಮಂದಿರದ ವೇದಿಕೆಯ ವರೆಗೆ ಆವರಣದಿಂದ ಅಂಬೇಡ್ಕರ್ ಅವರ ಭಾವಚಿತ್ರವನ್ನು ಬೆಳ್ಳಿ ಸಾರೋಟಿನಲ್ಲಿ ಮೆರವಣಿಗೆ ಮಾಡಲಾಯಿತು. ಮೆರವಣಿಗೆಯಲ್ಲಿ ಜಾನಪದ ಕಲಾ ತಂಡಗಳು ಮೇಳೈಸಿದ್ದವು. ಶಾಸಕ ಹೆಚ್.ಟಿ.ಮಂಜು, ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ನಾಗೇಂದ್ರಕುಮಾರ್, ಸಮಾಜ ಸೇವಕ ಆರ್.ಟಿ.ಓ ಮಲ್ಲಿಕಾರ್ಜುನ್, ಪುರಸಭೆ ಸದಸ್ಯ ಡಿ.ಪ್ರೇಮಕುಮಾರ್ ನೇತೃತ್ವದಲ್ಲಿ ತಮಟೆಯ ಸದ್ದಿಗೆ ನೂರಾರು ಜನರು ಹೆಜ್ಜೆ ಹಾಕಿದರು. ವೇದಿಕೆಯಲ್ಲಿ ಸಂವಿಧಾನ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು.

ಕಾರ್ಯಕ್ರಮವನ್ನು ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ನಾಗೇಂದ್ರಕುಮಾರ್ ಗಿಡಕ್ಕೆ ನೀರುಣಿಸುವ ಮೂಲಕ ಉದ್ಘಾಟನೆ ಮಾಡಿದರು. ಅಂಬೇಡ್ಕರ್ ಭಾಚಿತ್ರಕ್ಕೆ ಸಮಾಜ ಸೇವಕ ಆರ್.ಟಿ.ಓ ಮಲ್ಲಿಕಾರ್ಜುನ್ ಪುಷ್ಪ ನಮನವನ್ನು ಸಲ್ಲಿಸಿದರು.

ಪುರಸಭಾ ಸದಸ್ಯ ಡಿ.ಪ್ರೇಮಕುಮಾರ್ ನೇತೃತ್ವದಲ್ಲಿ ದಲಿತ ಮುಖಂಡರು ಶಾಸಕರು ಮತ್ತು ಗಣ್ಯರಿಗೆ ಅಹವಾಲುಗಳನ್ನು ನೀಡಿ ಹಳೆ ಕಿಕ್ಕೇರಿ ರಸ್ತೆಗೆ ಬಾಬಾ ಸಾಹೇಬ್ ಅಂಬೇಡ್ಕರ್ ರಸ್ತೆ ಎಂದು ನಾಮಕರಣವನ್ನು ಮಾಡಬೇಕು. ಪಟ್ಟಣದ ಪ್ರವಾಸಿ ಮಂದಿರ ವೃತ್ತದಲ್ಲಿರುವ ಲೋಕೋಪಯೋಗಿ ಇಲಾಖೆಯ ಜಾಗದಲ್ಲಿ ಅಂಬೇಡ್ಕರ್ ಪುತ್ಥಳಿಯನ್ನು ನಿರ್ಮಿಸಬೇಕು. ಅಂಬೇಡ್ಕರ್ ಭವನವನ್ನು ಉದ್ಘಾಟಿಸಿಕೊಡಬೇಕು ಎಂದು ಮನವಿ ಸಲ್ಲಿಸಿದರು ಈ ಎಲ್ಲಾ ಬೇಡಿಕೆಯನ್ನು ಪುರಸಭೆಯೊಂದಿಗೆ ಹಾಗೂ ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ಈಡೇರಿಸಲಾಗುವುದು ಎಂದು ಶಾಸಕರು ಭರವಸೆ ನೀಡಿದರು.

ವೇದಿಕೆಯಲ್ಲಿ ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ನಾಗೇಂದ್ರಕುಮಾರ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಹಾಗೂ ಸಾಧಕರನ್ನು ಗೌರವಿಸಲಾಯಿತು. ಸಮಾಜ ಸೇವಕ ಆರ್.ಟಿ.ಓ ಮಲ್ಲಿಕಾರ್ಜುನ್, ಜಿ.ಪಂ.ಮಾಜಿ ಸದಸ್ಯ ಡಾ.ಕೃಷ್ಣಮೂರ್ತಿ, ಟಿಎಪಿಸಿಎಂಎಸ್ ಅಧ್ಯಕ್ಷ ಟಿ.ಬಲದೇವ್, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎ.ಬಿ.ಕುಮಾರ್, ಪಿ.ಎಲ್.ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಅಕ್ಕಿಹೆಬ್ಬಾಳು ರಘು, ಗ್ರೇಡ್-2 ತಹಸೀಲ್ದಾರ್ ಲೋಕೇಶ್, ತಾಲ್ಲೂಕು ಭೂದಾಖಲೆಗಳ ಸಹಾಯಕ ನಿರ್ದೇಶಕ ಸಿದ್ದಯ್ಯ, ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿ ಕೆ.ದಿವಾಕರ್, ತಾಲ್ಲೂಕು ಟಿಎಪಿಸಿಎಂಎಸ್ ನಿರ್ದೇಶಕ ಮಲ್ಲೇನಹಳ್ಳಿ ಮೋಹನ್, ತಾಪಂ.ಮಾಜಿ ಅಧ್ಯಕ್ಷೆ ಮೆಣಸ ಮಹಾದೇವೇಗೌಡ, ದಿಶಾ ಸಮಿತಿ ಸದಸ್ಯ ನರಸನಾಯಕ್, ತಾ.ಪಂ. ಕೆ.ಸುಷ್ಮ, ಬಿಇಓ ವೈ.ಕೆ.ತಿಮ್ಮೇಗೌಡ, ಪುರಸಭೆ ಮುಖ್ಯಾಧಿಕಾರಿ ಅಶೋಕ್, ಪುರಸಭಾ ಸದಸ್ಯರಾದ ಡಿ.ಪ್ರೇಮಕುಮಾರ್, ಬಿ.ಜಿ.ಗಿರೀಶ್, ತಾಲ್ಲೂಕು ದಲಿತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ರಾಜಯ್ಯ, ಬಸ್ತಿರಂಗಪ್ಪ, ಛಲವಾದಿ ಮಹಾಸಭಾ ಅಧ್ಯಕ್ಷ ಊಚನಹಳ್ಳಿ ನಟರಾಜ್, ಲಕ್ಷ್ಮಿ ಪುರದ ರಂಗಸ್ವಾಮಿ, ಸಂತೋಷ್‌ಕುಮಾರ್, ಚೌಡೇನಹಳ್ಳಿ ದೇವರಾಜು, ಮಾಂಬಹಳ್ಳಿ ಜಯರಾಂ, ಎನ್.ಜೆ.ಮಂಜು, ಚನ್ನಕೃಷ್ಣಯ್ಯ, ಬಂಡಿಹೊಳೆ ರಮೇಶ್, ಜಿ.ಡಿ.ಎಸ್.ಗಂಗಾಧರ್, ದೊಡ್ಡ ಸೋಮನಹಳ್ಳಿ ಮಂಜಣ್ಣ, ಜೈನಹಳ್ಳಿ ಹರೀಶ್,ಸೇರಿದಂತೆ ಹಲವರು ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.*

# ನಿವೇಶನ ಹಂಚಿಕೆ ವಿಳಂಬಕ್ಕೆ ಆಕ್ರೋಶ



ಮೈಸೂರು: ಮುಡಾದಿಂದ ಸಾಧಕರ ಕೋಟಾದಲ್ಲಿ ಅರ್ಜಿ ಕರೆದು ದೇವನೂರು 3ನೇ ಹಂತದಲ್ಲಿ ಅಭಿವೃದ್ಧಿ ಪಡಿಸಿದ ನಿವೇಶನಗಳ ಹಂಚಿಕೆಯಲ್ಲಿ ವಿಳಂಬವಾಗುತ್ತಿದ್ದು, ಸೂಕ್ತ ಕ್ರಮವಹಿಸುವಂತೆ ಹೈಕೋರ್ಟ್ ಆದೇಶ ನೀಡಿ 40 ದಿನಗಳು ಕಳೆದರೂ ಯಾವುದೇ ಪ್ರಗತಿ ಕಾಣುತ್ತಿಲ್ಲ ಎಂದು ನಿವೇಶನ ಆಕಾಂಕ್ಷಿ, ಅಂತರರಾಷ್ಟ್ರೀಯ ಚೆಸ್ ಆಟಗಾರ ಎಂ.ಪಿ.ಅಜಿತ್ ದೂರಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನಿವೇಶನಗಳಿಗಾಗಿ ಫೆಬ್ರವರಿ 2023 ರಲ್ಲಿ ಅರ್ಜಿಗಳನ್ನು ಕರೆಯಲಾಗಿತ್ತು. ಸುಮಾರು 480 ಜನರು ಅರ್ಜಿ ಹಾಕಿದ್ದು, ಹಲವರು ಪ್ರಾಥಮಿಕ ಕಂತನ್ನು ಕಟ್ಟಿದ್ದೇವೆ. ಬಳಿ 5 ಬಾರಿ ಅರ್ಜಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಮಾ.11ರಂದು ಹೈಕೋರ್ಟ್ ಕೂಡ 6 ತಿಂಗಳೊಳಗೆ ಕ್ರಮವಹಿಸುವಂತೆ ಆದೇಶ ನೀಡಿದ್ದು, ಆ ಬಳಿಕವೂ ಯಾವುದೇ ಸ್ಪಂದನೆ ದೊರೆಯುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದರು. 'ಸಂಬಂಧಿಸಿದ ಅಧಿಕಾರಿಗಳು ಕೂಡಲೇ ಎಚ್ಚೆತ್ತು ನಿವೇಶನಗಳ ಹಂಚಿಕೆಗೆ ಅಗತ್ಯ ಕಾರ್ಯಗಳನ್ನು ನಿರ್ವಹಿಸಲು ಮುಂದಾಗಬೇಕು. ಅರ್ಜಿದಾರರಿಗೆ ಸೂಕ್ತ ಮಾಹಿತಿಗಳನ್ನು ನೀಡಿ ವಿಶ್ವಾಸ ಮೂಡಿಸಬೇಕು' ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ನಿವೃತ್ತ ಯೋಧ ಬಿ. ಆರ್.ನಿಂಗರಾಜು ಇದ್ದರು.

# ಗ್ರಾಮಗಳಿಗೆ ಡಿಸಿ ಭೇಟಿ

## ಮ.ಬೆಟ್ಟ ವ್ಯಾಪ್ತಿಯಲ್ಲಿ ಅಹವಾಲು ಆಲಿಕೆ, ಮೂಲ ಸೌಲಭ್ಯಗಳ ಪರಿಶೀಲನೆ



ಚಾಮರಾಜನಗರ,ಜಿಲ್ಲಾಧಿಕಾರಿ ಶ್ರೀರೂಪ ಅವರು ಮಲೆ ಮಹದೇಶ್ವರ ಬೆಟ್ಟ ವ್ಯಾಪ್ತಿಯ ಗ್ರಾಮಗಳಿಗೆ ಇಂದು ಭೇಟಿ ನೀಡಿ ಸ್ಥಳೀಯರ ಅಹವಾಲುಗಳನ್ನು ಆಲಿಸಿ, ಮೂಲಸೌಲಭ್ಯಗಳನ್ನು ಪರಿಶೀಲಿಸಿದರು.

ತೊಕ್ಕರೆ ಗ್ರಾಮಕ್ಕೆ ಭೇಟಿ ನೀಡಿ ಗ್ರಾಮಸ್ಥರೊಂದಿಗೆ ಕುಡಿಯುವ ನೀರು ಹಾಗೂ ಇನ್ನಿತರ ಮೂಲ ಸೌಲಭ್ಯಗಳ ಕುರಿತು ಚರ್ಚಿಸಿದರು. ಅಂಗನವಾಡಿ ಕೇಂದ್ರವನ್ನು ಪರಿಶೀಲಿಸಿದರು. ದೊಡ್ಡಾಣೆ ಗ್ರಾಮದ ಶಾಲೆಯಲ್ಲಿ ಅಧಿಕಾರಿಗಳ ಸಮ್ಮುಖದಲ್ಲಿ ಸಭೆ ನಡೆಸಿ ಕುಡಿಯುವ ನೀರು, ರಸ್ತೆ, ವಿದ್ಯುತ್, ಇನ್ನಿತರ ಮೂಲ ಸೌಕರ್ಯಗಳ ಬಗ್ಗೆ ವಿವರವಾಗಿ ಚರ್ಚಿಸಿದರು. ಆರ್.ಟಿ.ಸಿ, ಆಧಾರ್, ಇನ್ನಿತರ ಸೌಲಭ್ಯಗಳನ್ನು ಒದಗಿಸಿ ಕೊಡಲು ಸೂಚನೆ ನೀಡಿದರು. ಸ್ಥಳೀಯ ಸಮಸ್ಯೆಗಳನ್ನು ಶೀಘ್ರ ಪರಿಹರಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಇದೇ ವೇಳೆ ವಿದ್ಯಾರ್ಥಿಗಳು ಶಾಲೆ ತೊರೆಯಬಾರದು. ಶಿಕ್ಷಣದ ಮಹತ್ವವನ್ನ ಅರಿತು ವಿದ್ಯಾಭ್ಯಾಸದ ಕಡೆ ಹೆಚ್ಚು ಗಮನಹರಿಸಬೇಕು ಎಂದು ಜಿಲ್ಲಾಧಿಕಾರಿಗಳು ಸಲಹೆ ಮಾಡಿದರು.

ಮಲೆ ಮಹದೇಶ್ವರಬೆಟ್ಟ ಪ್ರದೇಶದಲ್ಲಿರುವ ಅಕ್ಕಕೆಫೆಗೆ ಭೇಟಿ ನೀಡಿ ಎನ್.ಆರ್.ಎಲ್.ಎಂ ಯೋಜನೆಯಡಿಯಲ್ಲಿ ನಡೆದಿರುವ ಕಾಮಗಾರಿ ಪರಿಶೀಲಿಸಿದರು. ಮಲೆ ಮಹದೇಶ್ವರ ಬೆಟ್ಟದಲ್ಲಿ ಮೈರಾಡಾ ವತಿಯಿಂದ ಸ್ಥಾಪಿಸಲಾಗಿರುವ ಒಣ ಕಸ ಘಟಕವನ್ನು ಉದ್ಘಾಟಿಸಿ, ಎಸ್.ವಿ.ವೈ.ಎಂ ಸಂಸ್ಥೆಗಳು, ಗ್ರಾಮಸ್ಥರು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಸ್ಥಳೀಯ ಸಮಸ್ಯೆಗಳು ಮತ್ತು ಅಭಿವೃದ್ಧಿ ಕಾರ್ಯಗಳ ಕುರಿತು ಚರ್ಚಿಸಿದರು. ಕೀರನಹೊಳೆ ಗ್ರಾಮದಲ್ಲಿರುವ ಲಾಂಟಾನಾ ಕೈಗಾರಿಕಾ ಘಟಕಕ್ಕೆ ಭೇಟಿ ನೀಡಿ ಅಲ್ಲಿ ತಯಾರು ಮಾಡಲಾಗಿರುವ ಕರಕುಶಲ ವಸ್ತುಗಳು, ಪೀಠೋಪಕರಣಗಳನ್ನು ವೀಕ್ಷಿಸಿದರು. ಕರಕುಶಲಗಾರರೊಂದಿಗೆ ಕಚ್ಚಾ ವಸ್ತುಗಳ ಲಭ್ಯತೆ ಹಾಗೂ ಮಾರುಕಟ್ಟೆ ವ್ಯವಸ್ಥೆ ಕುರಿತು ಸಮಾಲೋಚಿಸಿದರು. ಉತ್ಪನ್ನಗಳ ತಯಾರಿ ಸಂಬಂಧ ಪೊ?ರೀತ್ಸಾಹ ನೀಡಿದರು.

ಮಲೈ ಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ರಘು, ಇನ್ನಿತರ ಅಧಿಕಾರಿಗಳು ಹಾಜರಿದ್ದರು.

# ಯಂತ್ರೋಪಕರಣಗಳಿಗೆ ಚಾಲನೆ



ಚಾಮರಾಜನಗರ, ಮಹದೇಶ್ವರ ಬೆಟ್ಟ 'ಹಸಿರು ನಾಳೆ-ಎಂ.ಎಂ. ಹಿಲ್ಸ್' ಅಭಿಯಾನದ ಅಂಗವಾಗಿ ಜಿಲ್ಲಾಧಿಕಾರಿ ಶ್ರೀರೂಪ ಅವರು ಬುಧವಾರ (ಏ.15) ಮಲೆ ಮಹದೇಶ್ವರ ಬೆಟ್ಟದಲ್ಲಿ ಘನ ತ್ಯಾಜ್ಯ ನಿರ್ವಹಣೆಯ ನೂತನ ಯಂತ್ರೋಪಕರಣಗಳನ್ನು ಅಧಿಕೃತವಾಗಿ ಉದ್ಘಾಟಿಸಿದರು.

ಪವಿತ್ರ ಯಾತ್ರಾ ಸ್ಥಳದಲ್ಲಿ ಹೆಚ್ಚುತ್ತಿರುವ ಪರಿಸರ ಸವಾಲುಗಳನ್ನು ಎದುರಿಸಲು ಮತ್ತು ವೈಜ್ಞಾನಿಕ ಮಾದರಿಯಲ್ಲಿ ತ್ಯಾಜ್ಯ ಸಂಸ್ಕರಣೆ ಮಾಡಲು ಅಭಿಯಾನ ಹಮ್ಮಿಕೊಳ್ಳಲಾಗಿದೆ. ನೂತನವಾಗಿ ಅಳವಡಿಸಲಾದ ಯಂತ್ರಗಳು ಕಸವನ್ನು ಸಮರ್ಪಕವಾಗಿ ವಿಂಗಡಿಸಲು ಮತ್ತು ವಿಲೇವಾರಿ ಮಾಡಲು ಸಹಕಾರಿಯಾ ಗಲಿದ್ದು, ಬೆಟ್ಟವನ್ನು ಪ್ಲಾಸ್ಟಿಕ್ ಮುಕ್ತ ಹಾಗೂ ಪರಿಸರ ಸ್ನೇಹಿ ತಾಣವನ್ನಾಗಿ ಮಾಡುವ ಗುರಿಯನ್ನು ಹೊಂದಿವೆ. ಮಲೆ ಮಹದೇಶ್ವರ ಬೆಟ್ಟ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಗಳಾದ ಎ.ಇ. ರಘು, ಉಪ ಕಾರ್ಯದರ್ಶಿ ಚಂದ್ರಶೇಖರ್, ಮೈಕಾಪ್ಸ್ ಸಂಸ್ಥೆಯ ಕಾರ್ಯ ನಿರ್ವಾಹಕ ನಿರ್ದೇಶಕರಾದ ಅಶ್ರಫುಲ್ ಹಸನ್, ಗ್ರಾಮ ಪಂಚಾಯಿತಿ ಪಿಡಿಓ ಕಿರಣ್, ಜಾಗೃತ್ ಟೆಕ್ ಪ್ರೈವೇಟ್ ಲಿಮಿಟೆಡ್ ನ ನಿರ್ದೇಶಕರು, ಮಂಗಳೂರಿನ ಮಿನಿ ಟೆಕ್ ಸಂಸ್ಥೆಯ ಪ್ರತಿನಿಧಿಗಳು, ಇತರರು ಉಪಸ್ಥಿತ ರಿದ್ದರು. ಯೋಜನೆಯ ಯಶಸ್ಸಿನ ಹಿಂದಿರುವ ಪೌರಕಾರ್ಮಿಕರು ಹಾಗೂ ಸ್ತ್ರೀ ಶಕ್ತಿ ಸಂಘದ ಸದಸ್ಯರು ಈ ಸಮಾರಂಭಕ್ಕೆ ಸಾಕ್ಷಿಯಾದರು. ಈ ಸಾಮೂಹಿಕ ಪ್ರಯತ್ನವು ಬೆಟ್ಟದ ನೈಸರ್ಗಿಕ ಸೌಂದರ್ಯವನ್ನು ಕಾಪಾಡುವಲ್ಲಿ ಪ್ರಮುಖ ಹೆಜ್ಜೆಯಾಗಿದೆ.

# ದಕ್ಷಯಜ್ಞ ಪೌರಾಣಿಕ ನಾಟಕ ಪ್ರದರ್ಶನ



ಚಾಮರಾಜನಗರ, ನಶಿಸಿ ಹೋಗುತ್ತಿರುವ ಹಿಂದಿನ ತಲೆಮಾರಿನ ಕಲೆ, ಸಂಸ್ಕೃತಿ ರಂಗಭೂಮಿ ಉಳಿಸಿ-ಬೆಳೆಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯ ಮಾಡುತ್ತಿದೆ ಎಂದು ಇಲಾಖೆಯ ಸಹಾಯಕ ನಿರ್ದೇಶಕ ಬಿ.ಎಸ್.ರಾಜು ಹೇಳಿದರು.

ನಗರದ ವರನಟ ಡಾ.ರಾಜ್ ಕುಮಾರ್ ರಂಗಮಂದಿರದಲ್ಲಿ ಚೇತನ ಕಲಾವಾಹಿನಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಹಯೋಗದಲ್ಲಿ ನಡೆದ ಹೊಂಡರಬಾಳು ದಿವಗಂತ ಎನ್.ಲಿಂಗರಾಜೇ ಅರಸ್ ಅವರಿಂದ ವಿರಚಿತವಾದ ದಕ್ಷಯಜ್ಞ ಅಥವಾ ಭೃಗುಮುನಿ ಗರ್ವಭಂಗ ಎಂಬ ಸುಂದರ ಶಿವಭಕ್ತಿಯುತವಾದ ಪೌರಾಣಿಕ ನಾಟಕವನ್ನು ಉದ್ಘಾಟಿಸಿ ಮಾತನಾಡಿದರು.

**ರಂಗಸನ್ಮಾನ:** ಕಾವುದವಾಡಿ ಗೌಡಿಕೆ ಬೀರೇಗೌಡ್ರು, ಉಪನ್ಯಾಸಕ ಆರ್.ಮೂರ್ತಿ, ರಂಗಭೂಮಿ ಕಲಾವಿದ ಕುಮಾರ್ ಗೋಣಳ್ಳಿ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಚೇತನ ಕಲಾವಾಹಿನಿ ಸಂಸ್ಥೆಯ ಅಧ್ಯಕ್ಷ ಜಿ.ರಾಜಪ್ಪ, ಯಜಮಾನ ಬಿ.ನಾಗರಾಜು, ಡಿ.ಪಿ.ರಾಜು, ಡಾ.ಪಂಡಿತ್ ರಾಜಶೇಖರ್, ವಕೀಲ ಮಂಜು, ಡ್ರಾಮಾ ಮಾಸ್ಟರ್ ಆರ್.ಶಿವಣ್ಣ, ಸಿದ್ದಪ್ಪ ಭೋಗಯ್ಯನ ಹುಂಡಿ, ಗೋವಿಂದರಾಜು, ಸುರೇಶ್ ಅರಳೀಪುರ, ಮಹದೇವಸ್ವಾಮಿ, ಪಿ.ನಿಂಗಯ್ಯ, ದೊರೆಸ್ವಾಮಿ, ರಾಮಣ್ಣ, ರಾಜೇಶ್, ದುಂಡಮಾದಯ್ಯ, ಸಿದ್ದರಾಜು ವಿ.ದಶಪಾಲ್ ತಬಲ, ವಿಶ್ವ ಕ್ಯಾಷಿಯೋ, ಅರ್ಜುನ್ ತಾಳವಾದ್ಯ ಇತರರು ಭಾಗವಹಿಸಿದ್ದರು.

# ಮೊಬೈಲ್ ಗೀಳು ತಪ್ಪಿಸಲು ಬೇಸಿಗೆ ಶಿಬಿರ



ಚಾಮರಾಜನಗರ, ಮಕ್ಕಳಲ್ಲಿ ಹೆಚ್ಚುತ್ತಿರುವ ಮೊಬೈಲ್ ಗೀಳು ತಪ್ಪಿಸಲು ಬೇಸಿಗೆ ಶಿಬಿರಗಳು ಸಹಕಾರಿ ಎಂದು ಸಂತೆಮರಹಳ್ಳಿ ಇನ್ಸ್ ಪೆಕ್ಟರ್ ಮೋಹನ್ ಕುಮಾರ್ ಹೇಳಿದರು.

ತಾಲೂಕಿನ ಸಂತೇಮರಹಳ್ಳಿಯಲ್ಲಿ ಡಿ. ಎಂ. ಚಾರಿಟಬಲ್ ಟ್ರಸ್ಟ್ ಮಕ್ಕಳಿಗಾಗಿ ಏರ್ಪಡಿಸಿದ್ದ ವಿವಿಧ ಕೌಶಲ್ಯ ಕಲಿಸುವ ಉಚಿತ ಬೇಸಿಗೆ ಶಿಬಿರ ಉದ್ಘಾಟಿಸಿ ಮಾತನಾಡಿದರು. ಉರಗ ತಜ್ಞ ಮಹೇಶ್ ಮಾತನಾಡಿ, ಹಾವುಗಳ ಬಗ್ಗೆ ಭಯ ಪಡುವುದಕ್ಕಿಂತ ಅರಿವು ಪಡೆಯುವುದು ಅನಿವಾರ್ಯ ಎಂದರು. ನಮ್ಮ ಮನೆಯ ಸುತ್ತಮುತ್ತ ಅಶುಚಿತ್ವ ಇರುವುದರಿಂದ ಅನೇಕ ವಿಷ ಜಂತುಗಳು ಹೆಚ್ಚುತ್ತವೆ .ಇದನ್ನು ತಡೆಯಬೇಕಾದರೆ ಸ್ವಚ್ಛತೆ ಕಾಪಾಡಬೇಕು. ಜೊತೆಗೆ ಅವುಗಳ ಅಪಾಯದ ಬಗ್ಗೆ ಹಾಗೆಯೇ ಅವುಗಳ ಸಂರಕ್ಷಣೆ ಬಗ್ಗೆ ನಮ್ಮಲ್ಲಿ ಅರಿವು ಇರಬೇಕು. ಈ ನಿಟ್ಟಿನಲ್ಲಿ ಡಿಎಂ ಚಾರಿಟಬಲ್ ಟ್ರಸ್ಟ್ ನಡೆಸುತ್ತಿರುವ ಬೇಸಿಗೆ ಶಿಬಿರ ಇದಕ್ಕೂ ಉಪಯುಕ್ತವಾಗಿದೆ ಎಂದರು.

ಉದ್ಯಮಿ ನಾಗೇಶ್ ಮಾತನಾಡಿ, ಡಿ. ಎಂ.ಚಾರಿಟಬಲ್ ಟ್ರಸ್ಟ್ ಕಳೆದ 8 ವರ್ಷಗಳಿಂದ ನಡೆಸುತ್ತಿರುವ ಕೌಶಲ್ಯ ತರಬೇತಿ ಚಟುವಟಿಕೆಗಳಿಂದ ನೂರಾರು ಜನರಿಗೆ ಉದ್ಯೋಗ ಸಿಗುವಂತಾಗುತ್ತಿದೆ. ಇಂಥ ಸಂಸ್ಥೆಗಳು ಜಿಲ್ಲೆಯಲ್ಲಿ ಇನ್ನೂ ಹೆಚ್ಚಾಗಬೇಕು ಎಂದರು. ಮುಖಂಡರಾದ ಎಂ. ರಾಜು ಮಾತನಾಡಿ, ಡಿ. ಎಮ್. ಚಾರಿಟಬಲ್ ಟ್ರಸ್ಟ್ ಭವಿಷ್ಯದಲ್ಲಿ ಕೈಗೊಳ್ಳುವ ಅನೇಕ ಕಾರ್ಯಕ್ರಮಗಳನ್ನು ವಿವರಿಸಿದರು. ಟ್ರಸ್ಟ್ ನ ನಿರ್ವಾಹಕರಾದ ಪರಮೇಶ್, ಮಧುಶ್ರೀ, ನೇತ್ರಾವತಿ, ಕುಮಾರಿ, ಸುಮತಿ, ಸಿದ್ದರಾಜು, ಪ್ರೀತಮ್ ಇತರರು ಭಾಗವಹಿಸಿದ್ದರು.

# ನಾಳೆ ಆರೋಗ್ಯ ತಪಾಸಣಾ ಶಿಬಿರ

ಚಾಮರಾಜನಗರ, ಸ್ಪರ್ಶ್ ಫೌಂಡೇಶನ್, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹುಂಡಿಪುರ ಗ್ರಾಮ ಪಂಚಾಯತ್ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ (ಪಿಹೆಚ್.ಸಿ) ಸಹಯೋಗದೊಂದಿಗೆ ಉಚಿತ ಆರೋಗ್ಯ ಶಿಬಿರವನ್ನು ಏಪ್ರಿಲ್ 18ರಂದು ಗುಂಡ್ಲುಪೇಟೆ ತಾಲೂಕಿನ ಹುಂಡಿಪುರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಕಣ್ಣು, ದಂತ ಸಮಸ್ಯೆಗಳು, ಸಾಮಾನ್ಯ ಸೋಂಕುಗಳು, ಮಧುಮೇಹ ಮತ್ತು ಅಧಿಕ ರಕ್ತದೊತ್ತಡ, ಮಕ್ಕಳ ಆರೋಗ್ಯ ಮತ್ತು ಪೊ?ಷಣೆ, ಸಾಮಾನ್ಯ ಆರೋಗ್ಯ ಸಮಸ್ಯೆಗಳ ಪರಿಹಾರಕ್ಕೆ ಶಿಬಿರವು ಉಪಯುಕ್ತವಾಗಲಿದೆ. ಉಚಿತವಾಗಿ ವೈದ್ಯರ ಸಮಾಲೋಚನೆ, ಔಷಧ, ಹೆಚ್ಚಿನ ಚಿಕಿತ್ಸೆ ಅಗತ್ಯವಿದ್ದಲ್ಲಿ ಶಿಫಾರಸ್ಸು ಮಾಡಲಾಗುತ್ತದೆ.

ವಿಶೇಷವಾಗಿ ಗ್ರಾಮೀಣ ಮತ್ತು ಹಿಂದುಳಿದ ಜನರಿಗೆ ಆರಂಭದಲ್ಲಿಯೇ ರೋಗ ಪತ್ತೆ ಮಾಡಿ ಆರೋಗ್ಯ ಸೇವೆಯನ್ನು ನೀಡುವ ಗುರಿ ಹೊಂದಲಾಗಿದೆ. ತಪಾಸಣಾ ಶಿಬಿರದಲ್ಲಿ ನೇತ್ರವಿಜ್ಞಾನ, ದಂತ ಆರೈಕೆ, ಮಕ್ಕಳ ಚಿಕಿತ್ಸೆ ಮತ್ತು ಸಾಮಾನ್ಯ ಆರೋಗ್ಯ ಸಮಸ್ಯೆಗಳಿಗೆ ಔಷಧ ಹಾಗೂ ವಿಶೇಷ ಸಮಾಲೋಚನೆ ಸೇವೆಗಳನ್ನು ತಜ್ಞರು ನೀಡಲಿದ್ದಾರೆ. ಮಧುಮೇಹ ಪರೀಕ್ಷೆ, ರಕ್ತದೊತ್ತಡ ಪರೀಕ್ಷೆ, ಬಿಎಂಐ ಮೌಲ್ಯಮಾಪನ ಅಗತ್ಯ ತಪಾಸಣೆ ಸೇವೆಗಳು ಉಚಿತವಾಗಿ ಶಿಬಿರದಲ್ಲಿ ಲಭ್ಯವಾಗಲಿದೆ. ವೈದ್ಯಕೀಯ ಶಿಫಾರಸಿನ ಆಧಾರದ ಮೇಲೆ ಇಸಿಜಿ ಸೇವೆಗಳನ್ನು ಸಹ ಒದಗಿಸಲಾಗುತ್ತದೆ.

ಸ್ಪರ್ಶ್ ಗ್ರೂಪ್ ಆಫ್ ಹಾಸ್ಪಿಟಲ್ಸ್‌ನ ಸ್ಪರ್ಶ್ ಫೌಂಡೇಶನ್, ಸಾಮಾಜಿಕ, ಆರ್ಥಿಕ ಹಿನ್ನೆಲೆಯನ್ನು ಲೆಕ್ಕಿಸದೆ ಎಲ್ಲರಿಗೂ ಗುಣಮಟ್ಟದ ಆರೋಗ್ಯ ಸೇವೆಯನ್ನು ಒದಗಿಸಲು ಬದ್ಧವಾಗಿದೆ.

## ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧದ ಬಿಸಿ

# ಶೇ.30ರಷ್ಟು ಬೆಲೆ ಏರಿಕೆ ಮಾಡಲು ಛಾಯಾಗ್ರಾಹಕರ ನಿರ್ಧಾರ




ಮೈಸೂರು: ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧದ ಬಿಸಿ ಮೈಸೂರಿನ ಫೋಟೋಗ್ರಾಫರ್ಸ್ ಮತ್ತು ವೀಡಿಯೋಗ್ರಾಫರ್ಸ್‌ಗಳಿಗೂ ತಟ್ಟಿದ್ದು, ಶೇ.30ರಷ್ಟು ಬೆಲೆ ಏರಿಕೆ ಮಾಡಲು ಮೈಸೂರು ಜಿಲ್ಲಾ ಛಾಯಾಗ್ರಾಹಕರು ಮತ್ತು ವೀಡಿಯೋಗ್ರಾಫರ್ಸ್ ಅಸೋಸಿಯೇಷನ್ ನಿರ್ಧರಿಸಿದೆ.

ಈ ಕುರಿತು ನಗರದ ಎಂಜಿನಿಯರುಗಳ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅಸೋಸಿಯೇಷನ್ ಅಧ್ಯಕ್ಷ ಬಿ.ವಿಜಯ್ ಮಾತನಾಡಿ, ಅಮೆರಿಕಾ-ಇರಾನ್ ಯುದ್ಧದಿಂದಾಗಿ ಪ್ರಿಂಟ್, ರೋಲ್ ಸೇರಿ ಅಗತ್ಯವಸ್ತುಗಳ ಪೂರೈಕೆ ಅಸಮರ್ಪಕವಾಗಿದೆ. ಜತೆಗೆ ಲ್ಯಾಬ್, ಸ್ಟುಡಿಯೋ ಫೋಟೋ ಲ್ಯಾಮಿನೇಷನ್, ಆಲ್ಬಂ ಬೆಲೆಗಳು ಏರಿಕೆಯಾಗಿವೆ. ಇದರಿಂದಾಗಿ ಛಾಯಾಗ್ರಾಕರು ನಷ್ಟ ಅನುಭವಿಸುವಂತಾಗಿದೆ. ನಷ್ಟ ಸರಿದೂಗಿಸಲು ಬೆಲೆ ಏರಿಕೆ ಅನಿವಾರ್ಯವಾಗಿದೆ. ಕಳೆದ 10 ವರ್ಷಗಳಿಂದ ಯಾವುದೇ ದರ ಏರಿಕೆ ಮಾಡಿಲ್ಲ. ಹೀಗಾಗಿ ಶೇ.30ರಷ್ಟು ಬೆಲೆ ಏರಿಕೆ ಮಾಡುತ್ತಿದ್ದು, ಏ.15ರಿಂದಲೇ ಪರಿಷ್ಕೃತ ದರ ಜಾರಿಗೆ ಬಂದಿದೆ ಎಂದರು.

ನಮ್ಮ ಸಂಘದಲ್ಲಿ 1500 ಮಂದಿ ಸದಸ್ಯರಿದ್ದಾರೆ. 3500ಕ್ಕೂ ಹೆಚ್ಚು ಮಂದಿ ಸದಸ್ಯರಲ್ಲದವರೂ ಈ ವೃತ್ತಿಯಿಂದ ಜೀವನ ನಡೆಸುತ್ತಿದ್ದಾರೆ. ಸ್ಟುಡಿಯೋ ಬಾಡಿಗೆ ವರ್ಷದಿಂದ ವರ್ಷಕ್ಕೆ ಏರಿಕೆಯಾಗುತ್ತಲೇ ಇರುತ್ತದೆ. ಇಎಂಐ ಸಾಲದ ಹೊರೆಯೂ ಇರುವುದರಿಂದ ಬೆಲೆ ಏರಿಕೆ ಮಾಡದೆ ಬೇರೆ ದಾರಿಯಿಲ್ಲ. ಸಧ್ಯಕ್ಕೆ ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆಗಳಲ್ಲಿ ಬೆಲೆ ಏರಿಕೆಯಾಗಲಿದ್ದು, ಮುಂದಿನ ದಿನಗಳಲ್ಲಿ ಉಳಿದ ಜಿಲ್ಲೆಗಳಲ್ಲೂ ಜಾರಿಯಾಗಲಿದೆ. ಸಾರ್ವಜನಿಕರು ನಮಗೆ ಮೊದಲಿನಂತೆಯೇ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಕಾರ್ಯದರ್ಶಿ ಧನಂಜಯ ಮಾತನಾಡಿ, ನಾನು ಕಳೆದ 40 ವರ್ಷಗಳಿಂದ ಈ ವೃತ್ತಿಯಲ್ಲಿದ್ದೇನೆ. ಇತ್ತೀಚೆಗೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದಾಗಿ ನಷ್ಟ ಅನುಭವಿಸುವಂತಾಗಿದೆ. ಬೇರೆ ಕ್ಷೇತ್ರಗಳಲ್ಲಿ ಬೆಲೆ ಏರಿಕೆ ಆಗಿದ್ದಾಂಗೆ ಆಗುತ್ತಲೇ ಇರುತ್ತದೆ. ಆದರೆ, ಕಳೆದ 10 ವರ್ಷಗಳಿಂದ ನಮ್ಮ ಬೆಲೆ ಏರಿಕೆಯಾಗಿಲ್ಲ. ಮೈಸೂರಿನಲ್ಲಿ 7 ಲ್ಯಾಬ್, 12-13 ಆಲ್ಬಂ ಸ್ಟುಡಿಯೋಗಳಿದ್ದು, ಸಾವಿರಾರು ಮಂದಿ ಈ ವೃತ್ತಿಯನ್ನೇ ನಂಬಿ ಜೀವನ ನಡೆಸುತ್ತಿದ್ದಾರೆ. ಹೀಗಾಗಿ ದರ ಪರಿಷ್ಕರಣೆ ಅನಿವಾರ್ಯವಾಗಿದೆ ಎಂದು ಹೇಳಿದರು. ಗೋಷ್ಠಿಯಲ್ಲಿ ಉಪಾಧ್ಯಕ್ಷ ಹೆಚ್.ರಾಜಗೋಪಾಲ್, ಖಜಾಂಚಿ ಕೆ.ಉಮೇಶ್, ನಿರ್ದೇಶಕರಾದ ಎ.ಮೋಹನ್, ಎಂ.ಲೋಕೇಶ್, ಎಂ.ಎನ್.ಮಂಜುನಾಥ್ ಸೇರಿ ಹಲವರು ಇದ್ದರು.

# ಅರಣ್ಯ ವಿಚಾರದಲ್ಲಿ ಕಾಂಗ್ರೆಸ್ ನಾಯಕರ ಹೇಳಿಕೆ ಖಂಡನೆ




ಮೈಸೂರು: ಮಾನವ– ವನ್ಯಜೀವಿ ಸಂಘರ್ಷ ತಡೆಗೆ ಕಾಡು ಪ್ರಾಣಿಗಳಿಗೆ ಸಂತಾನ ಹರಣ ಶಸ್ತ್ರಚಿಕಿತ್ಸೆ ಅಗತ್ಯವೆಂಬ ಅರಣ್ಯ ಸಚಿವರ ಹೇಳಿಕೆ, ಕಾಂಗ್ರೆಸ್ ನಾಯಕಿ ಪ್ರಿಯಾಂಕ ವಾದ್ರ ಸಹಾ ಬಂಡೀಪುರ ರಾತ್ರಿ ಸಂಚಾರ ಮುಕ್ತ ಗೊಳಿಸಲಾಗುವುದು, ನಂಜನಗೂಡುವಿನಿಂದ ನೀಲಂಬೂರು ರೈಲು ಯೋಜನೆ ಜಾರಿ ಪ್ರಸ್ತಾಪ ಮಾಡಿರುವುದನ್ನು ವಿರೋಧಿಸಿ ಎ.18ರ ಬೆಳಗ್ಗೆ 11.30ಕ್ಕೆ ಜಿಲ್ಲಾಧಿಕಾರಿ ಕಚೇರಿ ಬಳಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ಪ್ರತಿಭಟನೆ ನಡೆಸಲಿದೆ ಎಂದು ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ರಾಜ್ಯದ ಅರಣ್ಯ ಸಚಿವ ಈಶ್ವರ್ ಖಂಡ್ರೆ ಪ್ರಾಣಿಗಳು ಮತ್ತು ಮಾನವ ಸಂಘರ್ಷವನ್ನು ತಡೆಯುವುದಕ್ಕಾಗಿ ಅವೈಜ್ಞಾನಿಕ ವಾದಂತಹ ಪ್ರಕೃತಿಗೆ ವಿರುದ್ಧವಾದ ಪ್ರಾಣಿಗಳ ಸಂತಾನ ಹರಣ ಚುಚ್ಚುಮದ್ದು ಹಾಗೂ ಚಿಕಿತ್ಸೆ ನೀಡಲಾಗುವುದು ಎಂಬ ಪ್ರಸ್ತಾಪವನ್ನು ಇಟ್ಟಿದ್ದಾರೆ. ಇದು ಸಾರ್ವಜನಿಕ ವಲಯದಲ್ಲಿ ಅರಣ್ಯ ಇಲಾಖೆಯ ಕೀಳುಮಟ್ಟತನವನ್ನು ತೋರುತ್ತದೆ ಅರಣ್ಯ ಇಲಾಖೆ ನಿರ್ವಹಣೆಯಲ್ಲಿ ಸರ್ಕಾರ ವಿಫಲವಾಗಿದ್ದು ಬೇಜವಾಬ್ದಾರಿತನ ಹಾಗೂ ನಿರ್ಲಕ್ಷತನದ ಇಂತಹ ಹೇಳಿಕೆಯನ್ನು ನೀಡಿ ಜನರನ್ನು ದಿಕ್ಕು ತಪ್ಪಿಸುವ ಕೆಲಸಕ್ಕೆ ಕೈ ಹಾಕುತ್ತಿದ್ದಾರೆ ಆದ್ದರಿಂದ ಇಂತಹ ಅವೈಜ್ಞಾನಿಕ ಪ್ರಸ್ತಾಪವನ್ನು ಕೈಬಿಡಬೇಕು ಎಂದು ಆಗ್ರಹಿಸಿದರು.

ಕೇರಳ ಚುನಾವಣೆಯ ಸಂದರ್ಭದಲ್ಲಿ ರಾಜ್ಯದ ಪ್ರಕೃತಿ ಮತ್ತು ಕಾಡಿನನಾಶಕ್ಕಾಗಿ ಮೂಲವಾಗಿರುವಂತಹ ಬಂಡಿಪುರ ರಾತ್ರಿ ಸಂಚಾರ ಮುಕ್ತಗೊಳಿಸಿ, ನೀಲಂಬೂರು ರೈಲ್ವೆ ಹಳಿ ಹಾಕಿಸುವ ಪ್ರಸ್ತಾಪವನ್ನು ಕೇಂದ್ರ ಸಚಿವರ ಜೊತೆ ಚರ್ಚೆ ಮಾಡಿದ್ದೇವೆ ನಿಮ್ಮ ಈ ಸಮಸ್ಯೆಯನ್ನು ಬಗೆಹರಿಸಲು ನಾವು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಕರ್ನಾಟಕದ ಹಿತವನ್ನು ಬಲಿಕೊಟ್ಟು ಮತ ಬಿಕ್ಷೆಗಾಗಿ ಪ್ರಿಯಾಂಕ ವಾಧ್ರಾ ಹೇಳಿರುವುದು ಖಂಡನೀಯ. ಕೂಡಲೇ ಇವರು ಈ ಹೇಳಿಕೆ ವಾಪಸು ಪಡೆಯಬೇಕೆಂದು ಒತ್ತಾಯಿಸಿದರು.

ಇದೇ ವೇಳೆ, ರಾಜ್ಯ ಸರ್ಕಾರದ ಆದೇಶದ ಕಳೆದ ಎರಡು ವರ್ಷದ ಕಬ್ಬಿನ ಬಾಕಿ 950 ಕೋಟಿ ರೂಪಾಯಿಯನ್ನು ತಕ್ಷಣ ಬಿಡುಗಡೆ ಮಾಡಲಿ, ಕಳೆದ ವರ್ಷ ಕಬ್ಬಿನ ಉಪ ಉತ್ಪನ್ನಗಳ ಲಾಭವನ್ನು ರಾಜ್ಯ ಸರ್ಕಾರ ರೈತರಿಗೆ ಕೊಡಲು ಸಕ್ಕರೆ ಕಾರ್ಖಾನೆಗಳಿಂದ ಪ್ರತಿ ಟನ್ ಕಬ್ಬಿಗೆ 50. ರಾಜ್ಯ ಸರ್ಕಾರದಿಂದ 50 ರೂ. ನೀಡುವ ಆದೇಶ ಮಾಡಿದ್ದರೂ, ಮೈಸೂರು ಮತ್ತು ಚಾಮರಾಜನಗರ ಜಿಲ್ಲಾಧಿಕಾರಿಗಳು ಸಭೆ ಮಾಡಿ ಒಂದು ವಾರ ಕಾಲಾವಕಾಶ ನೀಡಿ ಅದೇಶ ಮಾಡಿದ್ದರೂ ಸಹ ಜಿಲ್ಲೆಯ ಕಬ್ಬು ಬೆಳೆಗಾರರಿಗೆ ಬಣ್ಣಾರಿ ಸಕ್ಕರೆ ಕಾರ್ಖಾನೆ ಈ ಹಣ ನೀಡುವಲ್ಲಿ ವಿಳಂಬ ನೀತಿಯನ್ನು ಅನುಸರಿಸುತ್ತಿದೆ. ಆದ್ದರಿಂದ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಜಿಲ್ಲಾಡಳಿತ ಸಜ್ಜಾಗಬೇಕು ಈ ಬಣ್ಣಾರಿ ಕಾರ್ಖಾನೆ 18 ಕೋಟಿಗೂ ಹೆಚ್ಚು ಹಣ ರೈತರಿಗೆ ನೀಡಬೇಕು, ಅದನ್ನು ತಕ್ಷಣ ರೈತರಿಗೆ ಅಕೌಂಟ್ಗೆ ಜಮಾ ಮಾಡಬೇಕು ಎಂದು ಒತ್ತಾಯಿಸಿದರು. ಇನ್ನಿತರ ಮುಖಂಡರಾದ ಅಂಡುವಿನಹಳ್ಳಿ ರಾಜು, ಕೆರೆಹುಂಡಿ ರಾಜಣ್ಣ, ಕಬಿನಿ ಶಿವನಾಗಪ್ಪ, ಒಳಗೆರೆ ಗಣೇಶ್, ದೇವನೂರು ನಾಗೇಂದ್ರ ಮೊದಲಾದವರು ಇದ್ದರು.

# ಏ.24 ರಿಂದ ವಧು–ವರರ ಸಮಾವೇಶ




ಚಾಮರಾಜನಗರ: ಬೆಂಗಳೂರು ಅಖಿಲ ಕರ್ನಾಟಕ ವಿಶ್ವಕರ್ಮಮಹಾಸಭಾದ ವತಿಯಿಂದ ಏ.24 ರಿಂದ 26ರವರೆಗೆ 3 ದಿನಗಳ ಕಾಲ ವಿಶ್ವಕರ್ಮ ವಧು–ವರರ ಅನ್ವೇಷಣಾ ಸಮಾವೇಶ ಹಾಗೂ 3 ನೇ ರಾಜ್ಯ ಮಟ್ಟದ ವಧುವರರ ಸಮಾವೇಶವನ್ನು ಆಯೋಜಿಸಲಾಗಿದೆ ಎಂದು ಅಖಿಲ ಕರ್ನಾಟಕ ವಿಶ್ವಕರ್ಮಮಹಾ ಸಭಾದ ಚಾಮರಾಜನಗರ ಜಿಲ್ಲಾಧ್ಯಕ್ಷ ಮಂಜುನಾಥಚಾರಿ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ರಾಜ್ಯಾಧ್ಯಕ್ಷ ರಾದ ಕೆ.ಪಿ. ನಂಜುಂಡಿ ವಿಶ್ವಕರ್ಮ ರವರ ಅಧ್ಯಕ್ಷತೆಯಲ್ಲಿ ಪರಮ ಪೂಜ್ಯ ಸ್ವಾಮೀಜಿಗಳ ದಿವ್ಯ ಸಾನಿಧ್ಯದಲ್ಲಿ ರಾಜ್ಯ ಉಪಾಧ್ಯಕ್ಷರಾದ ಬಸವರಾಜು ಕದಲೂರು, ಅಶೋಕ್ ಪುತ್ತರ್ ಹಾಗೂ ಸಮಾಜದ ಮುಖಂಡರ ಉಪಸ್ಥಿತಿಯಲ್ಲಿ ಬೆಂಗಳೂರಿನ ರೇಸ್ ಕೋರ್ಸ್ ರಸ್ತೆಯಲ್ಲಿ ರುವ ಚಲನಚಿತ್ರ ವಾಣಿಜ್ಯ ಮಂಡಳಿ ಪಕ್ಕದಲ್ಲಿರುವ ಗುರುರಾಜ ಕಲ್ಯಾಣ ಮಂಟಪದಲ್ಲಿ ಬೆಳಿಗ್ಗೆ 11 ಗಂಟೆ ಸಂಜೆ 7ಗಂಟೆಗೆ ಕಾರ್ಯಕ್ರಮ ನಡೆಯಲಿದೆ ಎಂದರು.

ವಿಧವೆಯರು, ವಿಧುರರು ಮತ್ತು ವಿಚ್ಛೇದಿತರಿಗೂ ಅವಕಾಶ ಇರುತ್ತದೆ. ಆಗಾಗಿ ರಾಜ್ಯಾದ್ಯಂತ ಇರುವ ಜಿಲ್ಲಾ, ತಾಲ್ಲೂಕು ಹೋಬಳಿ , ಗ್ರಾಮಂತರ ಪ್ರದೇಶಗಳಿಂದ ವಿಶ್ವಕರ್ಮ ಸಮುದಾಯ ಬಂಧುಗಳು ತಮ್ಮ ಮಕ್ಕಳ ಭವಿಷ್ಯ ದೃಷ್ಟಿಯಿಂದ ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿ ಗೊಳಿಸಿಕೊಡಬೇಕು ಎಂದು ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಉಪಾಧ್ಯಕ್ಷ ನಾಗೇಂದ್ರ ಆಚಾರ್, ಹರದನಹಳ್ಳಿಯ ಹೋಬಳಿ ಅಧ್ಯಕ್ಷ ಸುಬ್ರಹ್ಮಣ್ಯ ಚಾರ್, ಉಪಾಧ್ಯಕ್ಷ ಚನ್ನಚಾರಿ, ಚಂದಕವಾಡಿ ಹೋಬಳಿ ಅಧ್ಯಕ್ಷ ಆರ್.ಕೆಂಪರಾಜು, ಹರವೆ ಹೋಬಳಿ ಅಧ್ಯಕ್ಷ ಟಿ.ಕೆ.ವಾಸು ಹಾಜರಿದ್ದರು.

# ಸಮಗ್ರ ವ್ಯಕ್ತಿತ್ವದ ವಿಕಸನಕ್ಕೆ ಬೇಸಿಗೆ ಶಿಬಿರವು ದಾರಿದೀಪ



ಕೆ.ಆರ್.ಪೇಟೆ ಪಟ್ಟಣದ ಬಿಜಿಎಸ್ ಶಾಲೆಯಲ್ಲಿ ಪಟ್ಟಣದ ವಿವಿಧ ಶಾಲೆಗಳ ಮಕ್ಕಳಿಗೆ ಆಯೋಜಿಸಿದ್ದ ಮಕ್ಕಳ ಬೇಸಿಗೆ ಶಿಬಿರದ ಸಮಾರಂಭದಲ್ಲಿ ,


ಕೇವಲ ನಾಲ್ಕು ಗೋಡೆಗಳ ಮಧ್ಯದಲ್ಲಿ ವರ್ಷವಿಡಿ ಶಾಲಾ ಚಟುವಟಿಕೆಗಳಲ್ಲಿ ಭಾಗವಹಿಸಿ ಕಲಿಕಾ ಕೆಲಸವನ್ನು ಮಾಡುತ್ತಿದ್ದ ಮಕ್ಕಳು ಇಂದು ಪ್ರಕೃತಿಯ ನಡುವೆ ವಿಶಾಲವಾದ ಬಯಲಿನಲ್ಲಿ ತಾವು ಇಷ್ಟಪಟ್ಟ ವಿಚಾರಗಳ ಬಗ್ಗೆ ವಿವರವಾಗಿ ಕಲಿತು ತಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಮಕ್ಕಳ ಬೇಸಿಗೆ ಶಿಬಿರವು ವರದಾನವಾಗಿದೆ. ಆಟವಾಡಿಕೊಂಡು, ಹಾಡಿ ಕುಣಿದು ಕುಪ್ಪಳಿಸಿ, ಮಕ್ಕಳು ಸಂತೋಷದಿಂದ ಕಲಿಯುವಿಕೆಯಲ್ಲಿ ತೊಡಗುವುದರಿಂದ ಮಕ್ಕಳ ವ್ಯಕ್ತಿತ್ವವು ಸಮಗ್ರವಾಗಿ ವಿಕಾಸವಾಗುವುದಲ್ಲದೆ ಕ್ರಿಯಾಶೀಲತೆ ಹಾಗೂ ಲವಲವಿಕೆ ಮೂಡಿ ಜೀವನದಲ್ಲಿ ಏನನ್ನಾದರೂ ಸಾಧಿಸಬೇಕು ಎಂಬ ಆತ್ಮವಿಶ್ವಾಸ ಮೂಡುತ್ತದೆ ಎಂದು ಹರಿಚರಣತಿಲಕ್ ಹೇಳಿದರು.

ಕೆ ಆರ್ ಪೇಟೆ ಪುರಸಭೆ ಮಾಜಿ ಸದಸ್ಯ ಕೆ.ಆರ್. ನೀಲಕಂಠ ವಿವಿಧ ಆಟೋಟಗಳು ಹಾಗೂ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನಗಳನ್ನು ವಿತರಿಸಿ ಮಾತನಾಡಿ ಕಳೆದ 15 ದಿನಗಳಿಂದ ಮಕ್ಕಳು ವಿವಿಧ ವಿಷಯಗಳ ಬಗ್ಗೆ ವಿಷಯ ತಜ್ಞರಿಂದ ಆಸಕ್ತಿಯಿಂದ ಕಲಿತು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸಾಧನೆ ಮಾಡುವ ದಿಕ್ಕಿನತ್ತ ಮುನ್ನಡೆಯಲು ಸಂಕಲ್ಪ ಮಾಡಿರುವುದು ವಿದ್ಯಾರ್ಥಿಗಳ ಬದುಕಿನ ಬದಲಾವಣೆಗೆ ದಿಕ್ಸೂಚಿಯಾಗಲಿದೆ ಎಂದು ನೀಲಕಂಠ ಹೇಳಿದರು. ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತರಾದ ಅಗ್ರಹಾರ ಬಾಚಹಳ್ಳಿ ಆರ್.ಶ್ರೀನಿವಾಸ್, ಕಾಡುಮೆಣಸ ಚಂದ್ರು, ಬಿಜಿಎಸ್ ಕಾಲೇಜಿನ ಪ್ರಾಂಶುಪಾಲರಾದ ಮಹದೇವ, ಪ್ರಸಾದೇಗೌಡ, ಪ್ರೌಢಶಾಲಾ ಮುಖ್ಯ ಶಿಕ್ಷಕಿ ಶೃತಿ, ರಾಮಚಂದ್ರ ಸೇರಿದಂತೆ ಮಕ್ಕಳ ಪೋಷಕರು ಹಾಗೂ ಸಾರ್ವಜನಿಕರು ಭಾಗವಹಿಸಿ ಮಕ್ಕಳು ನೀಡಿದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಕರಾಟೆ ಪ್ರದರ್ಶನವನ್ನು ವೀಕ್ಷಿಸಿ ಸಂಭ್ರಮಿಸಿದರು.

## ಸಂಘದ ನಿರ್ದೇಶಕರ ಆಯ್ಕೆ

ಗುಂಡ್ಲುಪೇಟೆ: ಟೌನ್ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರ ಚುನಾವಣೆ ಸಾಲಗಾರರ ಕ್ಷೇತ್ರ ಮತ್ತು ಸಾಲಗಾರರಲ್ಲದ ಕ್ಷೇತ್ರದಿಂದ 12 ನಿರ್ದೇಶಕ ಸ್ಥಾನಗಳಿದ್ದು ಇದರಲ್ಲಿ ಈಗಾಗಲೇ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳಾಗಿದ್ದ ಮಡಹಳ್ಳಿ ಮಧು,ಚಿಕ್ಕಣ್ಣ, ರಾಧಮ್ಮ, ಭಾಗ್ಯಮ್ಮ ಅವಿರೋಧವಾಗಿ ಆಯ್ಕೆಯಾಗಿದ್ದರು.

ಸಾಲಗಾರರಲ್ಲದ ಕ್ಷೇತ್ರದಲ್ಲಿ ಕಾಂಗ್ರೆಸ್ ನಿಂದ ರಘು ಗೆಲುವು ಸಾಧಿಸಿದರೆ ಬಿಜೆಪಿಯಿಂದ ಸ್ಪರ್ಧಿಸಿದ್ದ ನಾಗೇಶ್ ಪರಾಜಿತಗೊಂಡ 'ರು,ಪುರಸಭೆಯಮಾಜಿ ಅಧ್ಯಕ್ಷ ಪಿ ಗಿರೀಶ್ ಬೆಂಬಲಿಗರು ಕಾಂಗ್ರೆಸ್ ನ ರಘು ಗೆ ಬಹಿರಂಗವಾಗಿ ಸಪೋರ್ಟ್ ಮಾಡಿದರು. ಉಳಿದಂತೆ ಸಾಲಗಾರ ಕ್ಷೇತ್ರದ ಏಳು ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಚಂದ್ರಶೇಖರ್, ಮಂಜುನಾಥ್, ರಮೇಶ್, ವೆಂಕಟೇಶ್, ಶಿವಣ್ಣ, ವಿ ಬಿ ಶಿವನಾಗಪ್ಪ, ಹೊನ್ನಪ್ಪ ಗೆಲುವು ಸಾಧಿಸಿದರು. ಈ ಸಂದರ್ಭದಲ್ಲಿ ಚಾಮುಲ್ ನ ನಿರ್ದೇಶಕ ಎಚ್ ಎಸ್ ನಂಜುಂಡಪ್ರಸಾದ್, ಹಾಗೂ ಮಾಜಿ ಕಾಡಾ ಅಧ್ಯಕ್ಷ ಎಚ್ ಎಸ್ ನಂಜಪ್ಪ ಅಭ್ಯರ್ಥಿಗಳ ಪರ ಪ್ರಚಾರ ನಡೆಸಿದರು ಶಾಸಕ ಎಚ್ ಎಂ ಗಣೇಶ್ ಪ್ರಸಾದ್ ಗೆಲುವು ಸಾಧಸಿದ ನೂತನ ನಿರ್ದೇಶಕರಿಗೆ ಅಭಿನಂದಿಸಿದರು.



# ನಿತ್ಯ ಧ್ಯಾನ ಮಾಡುವುದರಿಂದ ವಿಷಯಗಳ ಗ್ರಹಿಸುವ ರೀತಿಯಲ್ಲಿ ಸುಧಾರಣೆ

## ಬೇಲಿ ಮಠದ ಶಿವರುದ್ರ ಸ್ವಾಮೀಜಿ ಹೇಳಿಕೆ । ಸಸ್ಯಾಹಾರ ಜನ ಜಾಗೃತಿ ಜಾಥಾ



ರಾಮನಗರ: ದಿನನಿತ್ಯ ಧ್ಯಾನ ಮಾಡುವುದರಿಂದ ನಮ್ಮಲ್ಲಿ ವಿಷಯಗಳನ್ನು ಗ್ರಹಿಸುವ ರೀತಿ ಸುಧಾರಿಸುತ್ತದೆ. ಮನಸ್ಸಿನಲ್ಲಿ ಸ್ಪಷ್ಟತೆ ಉಂಟಾಗುತ್ತದೆ ಎಂದು ಬೇಲಿ ಮಠದ ಶಿವರುದ್ರ ಸ್ವಾಮೀಜಿ ತಿಳಿಸಿದರು.

ರಾಮನಗರ ಪಿರಮಿಡ್ ಧ್ಯಾನ ಮಂದಿರದ ವತಿಯಿಂದ ನಗರದ ಗುರುಭವನದಲ್ಲಿ ಆಯೋಜಿಸಿದ್ದ ಸಸ್ಯಾಹಾರ ಜನ ಜಾಗೃತಿ ಜಾಥಾ, ಸಂಗೀತ ನಾದ, ಧ್ಯಾನ ಹಾಗೂ ಪ್ರವಚನ ಸಮಾರಂಭದಲ್ಲಿ ಅವರು ಮಾತನಾಡಿದರು. ಧ್ಯಾನವು ಜನರೊಂದಿಗೆ ಏನು ಮಾತನಾಡಬೇಕು, ಬೇರೆ ಬೇರೆ ಸನ್ನಿವೇಶಗಳಲ್ಲಿ ಹೇಗೆ ಕ್ರಿಯಾತ್ಮಕವಾಗಿ ಇರಬೇಕು, ಹೇಗೆ ಪ್ರತಿಕ್ರಿಯೆ ವ್ಯಕ್ತಪಡಿಸಬೇಕು ಎಂಬ ಅರಿವನ್ನು ಮೂಡಿಸಿ ನಮ್ಮ ಸಂವಹನವನ್ನು ಉತ್ತಮಗೊಳಿಸುತ್ತದೆ ಎಂದರು.

ಧ್ಯಾನವು ದೇಹದ ಶಕ್ತಿಯ ಮಟ್ಟವನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ ಧ್ಯಾನದಿಂದ ಜೀವಶಕ್ತಿ ಹೆಚ್ಚುತ್ತದೆ, ಬುದ್ಧಿ ಹರಿತವಾಗುತ್ತದೆ ಹಾಗೂ ಇತರರೊಂದಿಗೆ ಸಂವಹನ ಆಹ್ಲಾದಕರವಾಗುತ್ತದೆ. ಮಾತಿನ ಮೇಲೆ ಹೆಚ್ಚಿನ ಹಿಡಿತ ದೊರೆಯುತ್ತದೆ. ಮನಸ್ಸಿನ ಸಂಕಲ್ಪ ಶಕ್ತಿ ಹೆಚ್ಚಾಗುತ್ತದೆ. ಧ್ಯಾನವು ನಮ್ಮ ಹಣೆಬರಹವನ್ನೇ ಬದಲಾಯಿಸುತ್ತದೆ ಎಂದರು. ಧ್ಯಾನ ಮಾಡುವ ನೀವು ಕರುಣೆ ಮತ್ತು ಸಹಾನುಭೂತಿಯನ್ನು ಹೊಂದುತ್ತೀರಿ ಎಂದರು.

ನೀವು ವಿಷಯಗಳನ್ನು ಗ್ರಹಿಸುವ ರೀತಿ ಸುಧಾರಿಸುತ್ತದೆ. ನಿಮ್ಮ ಮನಸ್ಸಿನಲ್ಲಿ ಸ್ಪಷ್ಟತೆ ಉಂಟಾಗುತ್ತದೆ. ತುಮಕೂರಿನ ತಪೋವನದ ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ ಕೆಲವರು ತುಂಬಾ ಕಷ್ಟಪಟ್ಟು ಕೆಲಸ ಮಾಡುತ್ತಾರೆ. ಆದರೂ ಅವರಿಗೆ ಯಶಸ್ಸು ದೊರೆಯುವುದಿಲ್ಲ. ನೀವು ಈ ಸಂಗತಿಯನ್ನು ನಿಮ್ಮ ಸುತ್ತಮುತ್ತ ಗಮನಿಸಿರುತ್ತೀರಿ. ಅಂತಹ ವ್ಯಕ್ತಿಗಳಲ್ಲಿ ಇರುವ ದುರ್ಬಲವಾದ ಹಾಗೂ ನಕಾರಾತ್ಮಕವಾದ ಮಾನಸಿಕ ಶಕ್ತಿಯೇ ಇದಕ್ಕೆ ಕಾರಣ. ಈ ನಕಾರಾತ್ಮಕ ಭಾವಗಳನ್ನು ನಿವಾರಿಸಿಕೊಳ್ಳಲು ಧ್ಯಾನ ಅತ್ಯಗತ್ಯ ಎಂದರು.

ಪ್ರತಿದಿನ ಕೆಲವು ನಿಮಿಷಗಳ ಕಾಲ ಧ್ಯಾನ ಮಾಡುವುದರಿಂದ ನಮ್ಮ ಮೇಲೆ ದೈವಿಕ ಪ್ರೀತಿಯ ಸಿಂಚನದ ಅನುಭವವನ್ನು ಪಡೆಯಬಹುದು ಎಂದು ಅವರು ಹೇಳಿದರು.

ನಗರಸಭೆ ಅದ್ಯಕ್ಷ ಕೆ. ಶೇಷಾದ್ರಿ, ಪಿರಮಿಡ್ ಮಾಸ್ಟರ್ ಮನೋರಮಾ, ಸಮಾಜ ಸೇವಕ ಡಿ. ಆನಂದಸ್ವಾಮಿ ಹಾಗೂ ಇತರರು ಇದ್ದರು. ರಾಮನಗರ ಪಿರಮಿಡ್ ಧ್ಯಾನ ಮಂದಿರದ ವತಿಯಿಂದ ನಗರದಲ್ಲಿ ಸಸ್ಯಾಹಾರ ಜನಜಾಗೃತಿ ಜಾಥಾ ನಡೆಯಿತು.


### ಸಸ್ಯಾಹಾರವನ್ನು ಅನುಸರಿಸಿ – ಎನ್.ಕೃಷ್ಣಪ್ಪ

ರಾಮನಗರ ಪಿರಮಿಡ್ ಧ್ಯಾನ ಮಂದಿರದ ಸಂಸ್ಥಾಪಕ ಎನ್. ಕೃಷ್ಣಪ್ಪ ಮಾತನಾಡಿ, ಆಹಾರಕ್ಕಾಗಿ ಪ್ರಾಣಿಗಳನ್ನು ಸಾಕುವುದು ಮತ್ತು ಕೊಲ್ಲುವುದು ಪರಿಸರದ ಮೇಲೆ ಋಣಾತ್ಮಕ ಪರಿಣಾಮ ಬೀರುತ್ತದೆ. ಇದು ಮಾಲಿನ್ಯವನ್ನು ಸೃಷ್ಟಿಸುತ್ತದೆ ಮತ್ತು ಹವಾಮಾನ ಬದಲಾವಣೆಗೆ ಕೊಡುಗೆ ನೀಡುತ್ತದೆ ಇದರಿಂದ ಜನರು ಪರಿಸರವನ್ನು ರಕ್ಷಿಸುವ ಮಾರ್ಗವಾಗಿ ಸಸ್ಯಾಹಾರವನ್ನು ಅನುಸರಿಸಬೇಕು. ಇತ್ತೀಚಿನ ದಿನಗಳಲ್ಲಿ ಮಾಂಸಾಹಾರಕ್ಕಿಂತ ಸಸ್ಯಾಹಾರ ಸೇವನೆ ಆರೋಗ್ಯಕ್ಕೆ ಮತ್ತು ಪರಿಸರಕ್ಕೆ ಒಳ್ಳೆಯದು ಎಂದು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ಜನರು ತಮ್ಮ ಆರೋಗ್ಯದ ದೃಷ್ಟಿಯಿಂದ ಸಸ್ಯಾಹಾರಿ ಆಹಾರವನ್ನು ಅಳವಡಿಸಿಕೊಳ್ಳುತ್ತಿದ್ದಾರೆ. ಫೈಬರ್, ಧಾನ್ಯಗಳು, ಕಾಳುಗಳು, ಬೀಜಗಳು ಇತ್ಯಾದಿ ಹೃದಯ ಮತ್ತು ದೇಹದ ಆರೋಗ್ಯಕ್ಕೆ ಉತ್ತಮವಾದ ಕಾರಣ ಸಸ್ಯ ಆಧಾರಿತ ಆಹಾರವು ಉತ್ತಮ ಹೃದಯದ ಆರೋಗ್ಯಕ್ಕೆ ಸಹಾಯ ಮಾಡುತ್ತದೆ ಎಂದು ಸಂಶೋಧನೆ ತೋರಿಸಿದೆ. ಇದು ಕಡಿಮೆ ರಕ್ತದೊತ್ತಡ, ಮೂಳೆಗಳನ್ನು ಸದೃಢಗೊಳಿಸುವುದು, ತೂಕ ನಿರ್ವಹಣೆ ಮತ್ತು ಮಧುಮೇಹವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ ಎಂದು ತಿಳಿಸಿದರು.

# ಎಂಸಿಎಸ್ ಪಬ್ಲಿಕ್ ಶಾಲೆಗೆ ಶೇ.100 ಫಲಿತಾಂಶ

ಚಾಮರಾಜನಗರ: 2025–26ನೇ ಸಾಲಿನ ಸಿಬಿಎಸ್ ಇ 10ನೇ ತರಗತಿಯಲ್ಲಿ ನಗರದ ಸೋಮವಾರಪೇಟೆಯ ಎಂ.ಸಿ.ಎಸ್. ಪಬ್ಲಿಕ್ ಶಾಲೆಯು ಶೇ 100 ರಷ್ಟು ಫಲಿತಾಂಶ ಪಡೆದಿದ್ದು, ಕಳೆದ 14 ವರ್ಷಗಳಿಂದಲೂ ಶೇ.100 ರಷ್ಟು ಫಲಿತಾಂಶವನ್ನು ಪಡೆಯುತ್ತಾ ಬಂದಿದೆ. ಈ ವರ್ಷವೂ ಶಾಲೆಯ 21 ಮಕ್ಕಳು ಪರೀಕ್ಷೆ ಬರೆದಿದ್ದು, 7 ವಿದ್ಯಾರ್ಥಿಗಳು ಅತ್ಯುನ್ನತ ದರ್ಜೆಯಲ್ಲಿ, 11 ಮಕ್ಕಳು ಅತ್ಯುನ್ನತ ದರ್ಜೆಯಲ್ಲಿ, 3 ಮಕ್ಕಳು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗುವ ಮೂಲಕ ಶಾಲೆ ಕೀರ್ತಿ ತಂದಿದ್ದಾರೆ. ವಿದ್ಯಾರ್ಥಿನಿ ಮಿಂಚಿತಾ ಕೆ.ಜೆ. ಶೇ.93 ರಷ್ಟು ಅಂಕ ಪಡೆದು ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ತೇರ್ಗಡೆ ಹೊಂದಿರುವ ಎಲ್ಲ ಮಕ್ಕಳಿಗೂ ಸಂಸ್ಥೆಯ ಪದಾಧಿಕಾರಿಗಳು, ಆಡಳಿತಾಧಿಕಾರಿಗಳು, ಪ್ರಾಂಶುಪಾಲರು, ಅಭಿನಂದನೆ ಸಲ್ಲಿಸಿದ್ದಾರೆ.




# ಗ್ರಾಪಂ ನೌಕರರ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ




ಮೈಸೂರು: ಗ್ರಾಮ ಪಂಚಾಯತಿ ನೌಕರರ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದಿಂದ ಜಿಲ್ಲಾ ಪಂಚಾಯತ್ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಗ್ರಾಮ ಪಂಚಾಯತಿ ನೌಕರರ ಬೇಡಿಕೆ ಈಡೇರಿಕೆಗೆ ನಿರಂತರವಾಗಿ ಹೋರಾಟ ನಡೆಯುತ್ತಲೇ ಇದೆ. ಆದರೆ, ಇದುವರೆಗೂ ನಮ್ಮ ಬೇಡಿಕೆ ಈಡೇರಿಲ್ಲ. ಕಳೆದ ಡಿ.22ರಂದು ಸಂಘಟನೆಯ ಮುಖಂಡರ ಸಭೆ ಕರೆದು ಬೇಡಿಕೆ ಈಡೇರಿಕೆಯ ಭರವಸೆ ನೀಡಲಾಗಿತ್ತು. ಆದರೆ, ಭರವಸೆ ನೀಡಿ 3 ತಿಂಗಳಾದರೂ ಯಾವುದೇ ಕ್ರಮ ಕೈಗೊಂಡಿಲ್ಲ. 19 ಬೇಡಿಕೆಗಳಲ್ಲಿ ಸರ್ಕಾರದ ಹಂತದಲ್ಲಿರುವ ಬೇಡಿಕೆಗಳನ್ನು ಹೊರತುಪಡಿಸಿ ಪ್ರಮುಖವಾಗಿರುವ 7 ಬೇಡಿಕೆಗಳನ್ನು ಈಡೇರಿಸಿ ಆದೇಶ ನೀಡುವುದಾಗಿ ನೀಡಿದ್ದ ಭರವಸೆ ಸಾಕಾರವಾಗಿಲ್ಲ. ಇಲ್ಲಿವರೆಗೆ ಒಂದೇ ಒಂದು ಬೇಡಿಕೆ ಈಡೇರಿಸದೇ ಇರುವುದು ವಿಷಾದನೀಯ ಎಂದು ಕಿಡಿ ಕಾರಿದರು.

ನಮ್ಮ ಮನವಿಗೆ ಸ್ಪಂದಿಸದಿದ್ದರೆ ಬೃಹತ್ ಪ್ರಮಾಣದಲ್ಲಿ ಬೆಂಗಳೂರು ಚಲೋ ಹಮ್ಮಿಕೊಳ್ಳಲಾಗುವುದು. ಈ ಹೋರಾಟದಲ್ಲಿ ಏನಾದರೂ ಅನಾಹುತಗಳಾದರೆ ಇದಕ್ಕೆ ನೇರವಾಗಿ ಆರ್‌ಡಿಪಿಆರ್ ಇಲಾಖೆಯೆ ಹೊಣೆ ಎಂದು ಎಚ್ಚರಿಕೆ ನೀಡಿದರು.

**ಬೇಡಿಕೆಗಳು:** ಎಲ್ಲ ನೌಕರರಿಗೆ 5000 ರೂ. ವೇತನ ಹೆಚ್ಚಳ ಮಾಡಿ ಇಲಾಖೆಯಿಂದ ಆದೇಶ ಹೊರಡಿಸಬೇಕು. ನೌಕರರು ನಿವೃತ್ತಿ, ನಿಧನ ಹೊಂದಿದರೆ ಅವರಿಗೆ 6 ಲಕ್ಷ ರೂ ಇಡುಗಂಟು ನೀಡಬೇಕು. ಸೇವಾ ಹಿರಿತನದ ಆಧಾರದಲ್ಲಿ ವೇತನ ನೀಡಬೇಕು. ಸ್ವಚ್ಛವಾಹಿನಿ ನೌಕರರ ಸಭೆ ಮಾಡಿ ಅವರ ಪ್ರಮುಖ ಬೇಡಿಕೆಗಳನ್ನು ಇತ್ಯರ್ಥಪಡಿಸಬೇಕು. ಪ್ರತಿಯೊಂದು ಪಂಚಾಯತಿಗೆ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳನ್ನು ತುಂಬಬೇಕು. ಕಳೆದ 18–20 ವರ್ಷಗಳಿಂದ ಡಾಟಾ ಎಂಟ್ರಿ ಆಪರೇಟರ್‌ಗಳಾಗಿ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಅನುಮೋದನೆ ನೀಡಬೇಕು. 2ನೇ ಡಾಟಾ ಎಂಟ್ರಿ ಆಪರೇಟರ್ ನೇಮಕಾತಿ ಆಗಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ಕೆ.ಬಸವರಾಜ್, ಕಾರ್ಯದರ್ಶಿ ಟಿ.ಎಸ್.ದಿನೇಶ್, ಖಜಾಂಚಿ ಲೋಕೇಶ್ ಕಿರಿಜಾಜಿ, ಮುಖಂಡರಾದ ಹೆಚ್.ಜೆ.ಜಗದೀಶ್, ಕರಿಗೌಡ, ಸೋಮೇಶ್, ನಂಜುಂಡ ಸ್ವಾಮಿ, ಕೇತುಪುರ ನಾಗರಾಜ್, ರಾಜಣ್ಣ ಹುಲ್ಲಳ್ಳಿ, ಪ್ರಕಾಶ್, ರೇಖಾ, ದಿವ್ಯ, ಗೀತಾ, ಮಹೇಶ್ವರಿ, ರಮೇಶ, ಕೃಷ್ಣ, ವರುಣಾ, ಕಿರಣ್ ಸೇರಿ ಅನೇಕರು ಭಾಗವಹಿಸಿದ್ದರು.

# ಹರಕೆ ತೀರಿಸಿದ ಡಾ.ನಾರಾಯಣ ಗೌಡ



ಕೆ.ಆರ್.ಪೇಟೆ: ತಾಲ್ಲೂಕಿನ ಕೈಗೋನಹಳ್ಳಿ ಗ್ರಾಮದೇವತೆ ಶ್ರೀ ವೀರಭದ್ರೇಶ್ವರ ಸ್ವಾಮಿಯ ರಂಗದ ಹಬ್ಬದ ಅಂಗವಾಗಿ ಹೇಮಾವತಿ ನದಿಯಿಂದ ಪುಣ್ಯ ಸ್ನಾನ ಮುಗಿಸಿಕೊಂಡು ಕೆ.ಆರ್.ಪೇಟೆಗೆ ಆಗಮಿಸಿದ ಕೈಗೋನಹಳ್ಳಿಯ ಗ್ರಾಮ ರಕ್ಷಕನಾದ ಶ್ರೀ ವೀರಭದ್ರೇಶ್ವರ ಸ್ವಾಮಿಯ ಉತ್ಸವ ಮೂರ್ತಿಯನ್ನು ಭಕ್ತಿ ಪೂರ್ವಕವಾಗಿ ಬರಮಾಡಿಕೊಂಡ ರಾಜ್ಯದ ಮಾಜಿ ಸಚಿವ ಡಾ.ನಾರಾಯಣ ಗೌಡ. ನೊಂದ ಜನರ ಬೇಡಿಕೆಗಳು ಹಾಗೂ ಕೋರಿಕೆಗಳನ್ನು ಈಡೇರಿಸಿ ಹರಸಿ ಆಶೀರ್ವದಿಸುತ್ತಿರುವ ತಮ್ಮ ಹುಟ್ಟೂರು ಕೈಗೂನಹಳ್ಳಿಯ ಶ್ರೀ ವೀರಭದ್ರೇಶ್ವರ ಸ್ವಾಮಿಯ ರಂಗದ ಹಬ್ಬದ ಅಂಗವಾಗಿ ಕೆ ಆರ್ ಪೇಟೆ ತಾಲ್ಲೂಕಿನ ಜೀವನದಿ ಹೇಮಾವತಿಯಲ್ಲಿ ಪುಣ್ಯ ಸ್ನಾನ ಮುಗಿಸಿಕೊಂಡು ಕೈಗೊನ ಹಳ್ಳಿಗೆ ಹೋಗುವ ಮಾರ್ಗ ಮಧ್ಯದಲ್ಲಿ ಕೆ.ಆರ್. ಪೇಟೆ ಪಟ್ಟಣದಲ್ಲಿರುವ ತಮ್ಮ ನಿವಾಸಕ್ಕೆ ಆಗಮಿಸಿದ ಶ್ರೀ ವೀರಭದ್ರೇಶ್ವರ ಸ್ವಾಮಿಯ ಉತ್ಸವ ಮೂರ್ತಿಯನ್ನು ರಾಜ್ಯದ ಮಾಜಿ ಸಚಿವರಾದ ನಾರಾಯಣಗೌಡ ಹಾಗೂ ಅವರ ಧರ್ಮಪತ್ನಿ ದೇವಕಿ ನಾರಾಯಣಗೌಡ ಅವರು ಭಕ್ತಿ ಪೂರ್ವಕವಾಗಿ ಬರಮಾಡಿಕೊಂಡು ತಮ್ಮ ಮನೆಯಲ್ಲಿ ತಾಲೂಕಿನ ಜನತೆಗೆ ಸುಖ ಶಾಂತಿ ಸಮೃದ್ಧಿ ನೆಲೆಸಲೆಂದು ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ತಾಲೂಕು ಬಿಜೆಪಿ ಅಧ್ಯಕ್ಷ ಸಾರಂಗಿ ನಾಗಣ್ಣ, ಉದ್ಯಮಿಗಳಾದ ದೇವನಹಳ್ಳಿ ಮುನಿರಾಜು, ಹಂಸ ರಮೇಶ್, ನಾಗರತ್ನಮ್ಮ ಸುಬ್ಬಣ್ಣ, ರಾಜ್ಯ ಕೈಗಾರಿಕಾ ಮಾರಾಟ ಮಹಾಮಂಡಲದ ಅಧ್ಯಕ್ಷ ಬಸ್ ಸಂತೋಷ್ ಕುಮಾರ್, ಪುರಸಭೆ ಸದಸ್ಯ ಹೆಚ್. ಆರ್. ಲೋಕೇಶ್, ಕೆ.ಆರ್. ನೀಲಕಂಠ, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಬೊಪ್ಪನಹಳ್ಳಿ ಸುನೀಲ್, ಮಾಕವಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಕರೋಟಿ ಅನಿಲ್, ಬಿಜೆಪಿ ಮುಖಂಡರಾದ ಅಗ್ರಹಾರ ಬಾಚಹಳ್ಳಿ ಜಗದೀಶ್, ಜಯರಾಮೇಗೌಡ, ಕೈಗೋನಹಳ್ಳಿ ಮುದ್ದೇಗೌಡ ಸೇರಿದಂತೆ ನೂರಾರು ಜನರು ಉಪಸ್ಥಿತರಿದ್ದರು

## ನಾರಿ ಶಕ್ತಿ ವಂದನಾ ಬಗ್ಗೆ ಡಾ.ಪುಣ್ಯವತಿ ಸಿ.ನಾಗರಾಜ್ ಅಭಿಮತ

# ಕಾಯ್ದೆ ಜಾರಿಯಿಂದ ಮಹಿಳೆಯರ ಅಭಿವೃದ್ಧಿ




ಚಾಮರಾಜನಗರ, ಪ್ರಧಾನಮಂತ್ರಿ ನರೇಂದ್ರಮೋದಿ ನೇತೃತ್ವದ ಕೇಂದ್ರ ಸರ್ಕಾರ ಜಾರಿ ಮಾಡಿರುವ ನಾರಿ ಶಕ್ತಿ ವಂದನಾ ಅಧಿನಿಯಮ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ. 33 ಸ್ಥಾನಗಳನ್ನು ಮೀಸಲಿಡುವ ಐತಿಹಾಸಿಕ ಕಾನೂನು ಆಗಿದ್ದು. ಮಹಿಳೆಯರ ಅಭಿವೃದ್ಧಿ ಹೊಂದಲಿದ್ದಾರೆ ಎಂದು ರಾಜ್ಯ ಬಿಜೆಪಿ ಮುಖಂಡರಾದ ಡಾ.ಪುಣ್ಯವತಿ ಸಿ.ನಾಗರಾಜ್ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಈ ಕಾಯ್ದೆಯು ರಾಜಕೀಯದಲ್ಲಿ ಮಹಿಳೆಯರ ಪ್ರಾತಿನಿಧ್ಯವನ್ನು ಹೆಚ್ಚು ಮಾಡಿದ್ದು, ಶಾಸನ ಸಭೆಗಳಲ್ಲಿ ಶೇ.33 ರಷ್ಟು ಮೀಸಲಾತಿ ಕಲ್ಪಿಸುವ ಈ ಕಾಯ್ದೆ ಜಾರಿಯಿಂದ ಮಹಿಳೆಯರ ಸಬಲೀಕರಣವಾಗಲಿದೆ. ಅಲ್ಲದೇ ಆಡಳಿತದಲ್ಲಿ ಮಹಿಳೆಯರ ಪ್ರಾತಿನಿಧ್ಯ ಹೆಚ್ಚಾಗಲಿದೆ ಎಂದರು. ಪ್ರಸ್ತುತ ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲೂ ತೊಡಗಿಸಿ ಕೊಂಡಿದ್ದಾರೆ. ಅಡುಗೆ ಮನೆಗೆ ಸೀಮಿತವಾಗದೇ ಅನೇಕ ಸಾಧನೆಗಳನ್ನು ಮಾಡಿದ್ದಾರೆ. ದೇಶದ ಆಡಳಿತ ಚುಕ್ಕಾಣಿ ಹಿಡಿಯಲು ಮಹಿಳೆಯರಿಗೆ ಅವಕಾಶ ಕಲ್ಪಿಸಲಾಗಿದೆ. ಪ್ರಸ್ತುತ ದಿನಗಳಲ್ಲಿ ಲೋಕಸಭೆ, ವಿಧಾನಸಭೆಗಳಲ್ಲಿ ಮಹಿಳೆಯರ ಪ್ರಾತಿನಿಧ್ಯ ಕಡಿಮೆ ಇದೆ. ಈ ಕಾಯ್ದೆ ಜಾರಿಯಿಂದ ಹೆಚ್ಚಿನ ಅವಕಾಶಗಳು ಲಭಿಸಲಿದ್ದು ಮಹಿಳೆಯರು ರಾಜಕೀಯವಾಗಿ ಬೆಳವಣಿಗೆ ಹೊಂದಲು ಸಹಕಾರಿಯಾಗಲಿದೆ ಎಂದರು.

ಕೇಂದ್ರ ಸರ್ಕಾರವು ಮಹಿಳೆಯರಿಗಾಗಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದು ಅದರಲ್ಲಿ ಮುದ್ರಾ ಯೋಜನೆ, ಉಜ್ವಲ ಯೋಜನೆ, ಪಿಎಂ ಆವಾಸ್ ಯೋಜನೆ, ಜಲಜೀವನ್ ಮಿಷನ್, ಸ್ವಚ್ಛ ಭಾರತ್ ಯೋಜನೆ ಸೇರಿದಂತೆ ಇತರೆ ಹಲವು ಯೋಜನೆಗಳಿಂದ ಮಹಿಳೆಯರಿಗೆ ಅನುಕೂಲವಾಗಿದೆ ಎಂದರು.

ಬಿಜೆಪಿ ಮಹಿಳಾ ಮೋರ್ಚಾದ ಜಿಲ್ಲಾಧ್ಯಕ್ಷ ಮಲೆಯೂರು ಕಮಲಮ್ಮ ಮಾತನಾಡಿ, ನಾರಿ ಶಕ್ತಿ ವಂದನ್ ಕಾಯ್ದೆ ಬೆಂಬಲಿಸಿ ಏ.21 ರಂದು ಜಿಲ್ಲಾ ಕೇಂದ್ರದಲ್ಲಿ ಬೈಕ್ ರ್ಯಾಲಿ, ಮ್ಯಾರಥಾನ್ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಮಹಿಳಾ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಎಂ.ಶೈಲಜಾ, ಮಮತ ಬಾಲಸುಬ್ರಹ್ಮಣ್ಯಂ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗಳಾದ ಮೂಡ್ನಾಕೂಡು ಪ್ರಕಾಶ್, ಹೊನ್ನೂರು ಮಹಾದೇವಸ್ವಾಮಿ, ಮಾಜಿ ಗ್ರಾಮಾಂತರ ಪ್ರಧಾನ ಕಾರ್ಯದರ್ಶಿ ಶೇಷಪ್ಪ ಪಾಸ್ವಾನ್ ಹಾಜರಿದ್ದರು.

# ಅನಧಿಕೃತ ಮದ್ಯ ಮಾರಾಟ ಮಾಡಿದ್ರೆ ಕ್ರಮ ಕೈಗೊಳ್ಳಿ: ಶಾಸಕ ಪಿ.ರವಿಕುಮಾರ್

## ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಉಂಟಾದರೆ ಸಹಿಸಲ್ಲ

**ಮಂಡ್ಯ:** ಜಿಲ್ಲೆಯಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುವ ಅಂಗಡಿಗಳು ಹೆಚ್ಚುತ್ತಿದ್ದು, ಸಾರ್ವಜನಿಕ ಹಿತದೃಷ್ಟಿಯಿಂದ ಇಂತಹ ಅಂಗಡಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ. ರವಿಕುಮಾರ್ ಹೇಳಿದರು.

ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಗುರುವಾರ ನಡೆದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ (ಕೆಡಿಪಿ) ಅಧ್ಯಕ್ಷತೆ ವಹಿಸಿ ಮಾತನಾಡಿ, ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು. ಬಸರಾಳು ಸರ್ಕಾರಿ ಆಸ್ಪತ್ರೆಯಲ್ಲಿ ರಾತ್ರಿ ವೇಳೆಯಲ್ಲೂ ವೈದ್ಯರ ಸೇವೆ ಲಭ್ಯವಾಗುವಂತೆ ನೇಮಕಾತಿ ಮಾಡಬೇಕು ಹಾಗೂ ಆಂಬುಲೆನ್ಸ್ ಸೇವೆಯನ್ನು ಇಪ್ಪತ್ತ್ನಾಲ್ಕು ಗಂಟೆಗಳಿಗೂ ಕಲ್ಪಿಸಬೇಕು ಎಂದು ಸೂಚಿಸಿದರು.

ಬೇಸಿಗೆ ಸಮಯದಲ್ಲಿ ಹೆಚ್ಚಿದ ಉಷ್ಣತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಶಿಬಿರಗಳನ್ನು ಆಯೋಜಿಸಿ, ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಬೇಕು. ಸರ್ಕಾರಿ ಶಾಲೆ–ಕಾಲೇಜುಗಳಲ್ಲಿ ದಾಖಲಾತಿ ಹೆಚ್ಚಿಸಲು ಕ್ರಮ ವಹಿಸಬೇಕು ಎಂದರು.

ವಿದ್ಯಾ ವಿಕಾಸ ಯೋಜನೆಯಡಿ 2025–26ನೇ ಸಾಲಿನ ವಿದ್ಯಾರ್ಥಿಗಳಿಗೆ ಸಮವಸ್ತ್ರಗಳನ್ನು ವಿತರಿಸುವಂತೆ ಸೂಚಿಸಿದರು. ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯ ಶಾಲೆಗಳ ದಾಖಲೆಗಳನ್ನು ಪರಿಶೀಲಿಸಿ, ಖಾತೆ ನಿರ್ವಹಣೆಯಲ್ಲಿ ಶಿಸ್ತು ತರಲು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಕೃಷಿ ಇಲಾಖೆಯು ರೈತರಿಗೆ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಕೊರತೆ ಉಂಟಾಗದಂತೆ ನೋಡಿಕೊಳ್ಳಬೇಕು. ರೈತರಿಗೆ ಸರ್ಕಾರದ ಯೋಜನೆಗಳ ಮಾಹಿತಿ ತಲುಪಿಸಲು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದರು.



ಪಶುಪಾಲನಾ ಇಲಾಖೆಯು ಜಾನುವಾರುಗಳ ಮರಣದ ನಂತರ ನೀಡುವ ಪರಿಹಾರಧನ ಕುರಿತು ಜನರಲ್ಲಿ ಅರಿವು ಮೂಡಿಸಬೇಕು. ಪೂರಕ ಪೌಷ್ಟಿಕ ಆಹಾರ ಯೋಜನೆಯಡಿ ಗರ್ಭಿಣಿಯರು, ಬಾಣಂತಿಯರು ಹಾಗೂ ಅಂಗನವಾಡಿ ಮಕ್ಕಳಿಗೆ ಗುಣಮಟ್ಟದ ಆಹಾರವನ್ನು ಒದಗಿಸುವಂತೆ ಸೂಚಿಸಿದರು.

ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಪ್ರಗತಿಯನ್ನು ಪ್ರತಿ ತಿಂಗಳು ಪರಿಶೀಲಿಸಿ, ನ್ಯೂನತೆಗಳನ್ನು ಸರಿಪಡಿಸಬೇಕು. ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಬೆಳಗ್ಗೆ ಮತ್ತು ಸಂಜೆ ಹೆಚ್ಚುವರಿ ಬಸ್‌ಗಳನ್ನು ಓಡಿಸುವಂತೆ ತಿಳಿಸಿದರು.

ಬೇಸಿಗೆ ವೇಳೆ ವಿದ್ಯುತ್ ವ್ಯತ್ಯಯ ಉಂಟಾಗದಂತೆ ಹಾಗೂ ರೈತರ ಜಮೀನುಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಕಲ್ಪಿಸುವಂತೆ ಸೂಚಿಸಿದರು. ಪ್ರತಿ ಗ್ರಾಮದಲ್ಲೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಪರಿಶೀಲಿಸಿ ಯಾವುದೇ ತೊಂದರೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು ಎಂದರು.

ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಗುಣಮಟ್ಟದ ಆಹಾರ ಹಾಗೂ ಸ್ವಚ್ಛತೆಯನ್ನು ಕಾಪಾಡುವಂತೆ ಸೂಚಿಸಿ, ಅಧಿಕಾರಿಗಳು ನಿಯಮಿತವಾಗಿ ಭೇಟಿ ನೀಡಿ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಶೀಲಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಿ.ಪಿ. ಪ್ರಕಾಶ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಡಾ.ಶಿವಲಿಂಗಯ್ಯ, ಲಕ್ಷ್ಮೀನಾರಾಯಣ ಪ್ರಸಾದ್, ತಹಸೀಲ್ದಾರ್ ವಿಶ್ವನಾಥ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಲೋಕೇಶ್ ಮೂರ್ತಿ, ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಸದಸ್ಯ ಹೆಚ್.ಕೆ. ರುದ್ರಪ್ಪ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಸುಗಮ ಸಂಗೀತ ಅಕಾಡೆಮಿಗೆ 25 ವರ್ಷಗಳ ಸಂಭ್ರಮ

## ಪ್ರತಿಭಾಂಜಲಿ ಗಾಯನಕ್ಕೆ ಮನಸೋತ ಪ್ರೇಕ್ಷಕರು

**ಮಂಡ್ಯ:** ನಗರದ ಗಾಂಧಿ ಭವನದಲ್ಲಿ ಪ್ರತಿಭಾಂಜಲಿ ಸುಗಮ ಸಂಗೀತ ಅಕಾಡೆಮಿ ವತಿಯಿಂದ ಸಾಂಸ್ಕೃತಿಕ ನಾಯಕ ಕೆ.ಎಸ್.ಸಚ್ಚಿದಾನಂದರ ಸವಿನೆನಪು ಹಾಗೂ ಪ್ರತಿಭಾಂಜಲಿ ಸುಗಮ ಸಂಗೀತ ಅಕಾಡೆಮಿಯ 25 ವರ್ಷಗಳ ಸಂಭ್ರಮ ಕಾರ್ಯಕ್ರಮ ನಡೆಯಿತು.

ಕಾವ್ಯಾಯನ ಉದ್ಘಾಟಿಸಿ ಮಾತನಾಡಿದ ಕೆ.ಎಸ್.ವಿಜಯ್ ಆನಂದ್ ಅವರು, ನಮ್ಮ ತಂದೆ ಅವರ ಹೆಸರಿನಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಿ ನೆನೆಸಿಕೊಳ್ಳುತ್ತಿರುವ ಹಾಗೂ ಪ್ರತಿಭಾಂಜಲಿ ಅಕಾಡೆಮಿಗೆ 25 ವರ್ಷ ತುಂಬಿರುವುದು ಸಂತಸ ತಂದಿದೆ, ಡೇವಿಡ್ ಅವರು ಸಾಮಾಜಿಕ ಕಾರ್ಯಕ್ರಮಗಳನ್ನು ಮಾಡಲಿ, ಅವರ ಜೊತೆ ಸದಾ ಇರುತ್ತೇವೆ ಎಂದು ಭರವಸೆ ನೀಡಿದರು.

ಬಳಿಕ ಮಾತನಾಡಿದ ಜಿಲ್ಲಾ ಕಾರಾಗೃಹ ಅಧೀಕ್ಷಕಿ ಎಂ.ಶಾಂತಶ್ರೀ, ಡೇವಿಡ್ ಅವರು ಅಕಾಡೆಮಿ ಹೆಸರಲ್ಲಿ ಸಾಮಾಜಿಕ ಕಾರ್ಯಕ್ರಮ ಮಾಡುತ್ತಿದ್ದಾರೆ, ಅದರಂತೆ ನಮ್ಮ ಕಾರಾಗೃಹದಲ್ಲಿಯೂ ಕೈದಿಗಳಿಗೆ ಹಾಡುಗಳನ್ನು ಹೇಳಿಕೊಡುತ್ತಿದ್ದಾರೆ ಅವರ ಜನಪರ ಕೆಲಸ ಹೀಗೆ ಸಾಗಲಿ ಎಂದು ಆಶೈಸಿದರು.

ಕವಿ ಕಾ.ವೆಂ. ಶ್ರೀನಿವಾಸಮೂರ್ತಿ ಅವರು ರಚಿಸಿರುವ ಹೊತ್ತಿಸು ಎದೆಯಲಿ ಕನ್ನಡಿಗ (ಡೇವಿಡ್ ಮತ್ತು ತಂಡ), ಮಳೆ ಸುರಿಯಲಿ ಹೊಳೆ ಹರಿಯಲಿ(ಹಂಸ ಮತ್ತು ತಂಡ), ಸಪ್ತ ಸ್ವರಗಳ ಕೋಗಿಲೆಯೇ (ಶಂಕರ್ ಮತ್ತು ಐಶ್ವರ್ಯಾ), ಬುದ್ಧ ಬಂದ ದಾರಿಯಲ್ಲಿ(ಡೇವಿಡ್ ಮತ್ತು ವೃಂದ), ಕಳೆದುಕೊಂಡ ಅಮ್ಮ(ಶಂಕರ್), ಪುಸ್ತಕವನ್ನು ಪ್ರೀತಿಸಿದವರು(ಕರಣ್‌ವೀರ್), ಕೆಸರಿನ ಕೊಳದಲ್ಲಿ(ಶಶಿಕಲಾ), ಓ ಬೆಟ್ಟ ಬಯಲುಗಳೇ(ವಂದನಾ ಹಾಗೂ ವೃಂದ). ಸಹಿಯು ಇರುವ ತನಕ(ಶಂಕರ್), ದೇವರಾಗಲು ಹೊರಟ(ಮೋಹನ್ ರಾಗಿಮುದ್ದನಹಳ್ಳಿ), ನಲ್ಲ ನೀನೊಂದು ಕವನ(ದಿಶಾ ಜೈನ್), ನಾವೆಲ್ಲರೂ ಹಿಂದೂ (ಎರ್ರಿಸ್ವಾಮಿ ಮತ್ತ ವೃಂದ), ನಿನ್ನ ಕೆನ್ನೆಗುಳಿ(ವಿಶ್ವಾಸ್), ಕೋಗಿಲೆಗೆ ಸವಿಗಾನವನು(ಶಂಕರ್ ಹಾಗೂ ಸುಮತಿ), ಹರಿದಿದೆ ನೋಡಿ ಕನ್ನಡ ರಥವು (ರಿಶಾಂಕ್ ಮತ್ತು ವೃಂದ), ಗನ್ನು ನಿಮ್ಮದು ಪೆನ್ನು ನಮ್ಮದು(ಧನಂಜಯ್ ಮತ್ತು ವೃಂದ) ಹಾಗೂ ಎತ್ತ ಸಾಗಿದೆ ಭಾರತವು ಎರ್ರಿ ಸ್ವಾಮಿ ವೃಂದವರು ಹಾಡಿದ ಭಾವಗೀತೆ, ಜನಪರಗೀತೆ, ಕನ್ನಡಪರ ಗೀತೆಗಳಿಗೆ ಪ್ರೇಕ್ಷಕ ಪ್ರಭು ತಲೆದೂಗಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಸುಗಮ ಸಂಗೀತ ಪರಿಷತ್ ಮೈಸೂರು ಜಿಲ್ಲಾ ಘಟಕದ ಅಧ್ಯಕ್ಷ ನಾಗರಾಜು ವಿ.ಭೈರಿ ಅಧ್ಯಕ್ಷತೆ ವಹಿಸಿದ್ದರು. ಪ್ರತಿಭಾಂಜಲಿ ಡೇವಿಡ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ನಂಜಮ್ಮ ಮೋಟೇಗೌಡ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಕೆ.ಟಿ.ಹನುಮಂತು, ನವೋದಯ ತರಬೇತಿ ಶಿಕ್ಷಕಿ ಎಚ್.ಆರ್.ಕನ್ನಿಕಾ, ಮುಖಂಡರಾದ ದರಸಗುಪ್ಪೆ ಧನಂಜಯ, ಬಿ.ಟಿ.ವಿಶ್ವನಾಥ್, ಎಂ.ಬಿ.ನಾಗಣ್ಣಗೌಡ, ಚಿತ್ರಕೂಟದ ಅರವಿಂದ ಭಾಗವಹಿಸಿದ್ದರು.




# ಅಂಬೇಡ್ಕರ್ ತತ್ವಾದರ್ಶ ಎಲ್ಲರೂ ಪಾಲಿಸಲಿ



**ಪಿರಿಯಾಪಟ್ಟಣ:** ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ತತ್ವ ಮತ್ತು ಆದರ್ಶಗಳು ಇಂದಿಗೂ ಮನುಕುಲಕ್ಕೆ ದಾರಿದೀಪವಾಗಿವೆ ಎಂದು ದಲಿತ ಮುಖಂಡ ಈ ರಾಜ್ ಹೇಳಿದರು.

ತಾಲೂಕಿನ ಕಂಪಲಾಪುರ ಗ್ರಾಮದಲ್ಲಿ ಜೈ ಭೀಮ್ ಯುವ ಸೇನೆ ವತಿಯಿಂದ ಆಯೋಜಿಸಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಮಾಜದಲ್ಲಿ ನಾವು ಸುಭಿಕ್ಷವಾಗಿ ಬದುಕುತ್ತಿರುವುದಕ್ಕೆ ಮೂಲ ಕಾರಣ ಅಂಬೇಡ್ಕರ್ ಅವರ ಸಂವಿಧಾನವೆಂದು ಹೇಳಿದರು. ಅಂಬೇಡ್ಕರ್ ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗದೆ ಎಲ್ಲಾ ವರ್ಗಗಳಿಗೂ ಅನ್ವಯವಾಗುವ ಸಂವಿಧಾನವನ್ನು ರಚಿಸಿದ್ದಾರೆ ಎಂದು ತಿಳಿಸಿದರು.

ದಲಿತ ಮುಖಂಡ ಕೋಮಲಾಪುರ ಶಿವರಾಜ್ ಮಾತನಾಡಿ, ಜೀವನದಲ್ಲಿ ಸಾಧನೆ ಮಾಡಲು ಛಲ ಮತ್ತು ಹೋರಾಟ ಮನೋಭಾವ ಅಗತ್ಯವಾಗಿದೆ ಎಂದರು. ಮಹಾನ್ ನಾಯಕರ ಜಯಂತಿಗಳು ಒಂದು ದಿನಕ್ಕೆ ಮಾತ್ರ ಸೀಮಿತವಾಗದೆ ಅವರ ತತ್ವಗಳನ್ನು ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಪಿರಿಯಾಪಟ್ಟಣ ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷ ಐಲಾಪುರ ರಾಮು ಮಾತನಾಡಿ, ಮಹಿಳೆಯರು ಸುರಕ್ಷಿತವಾಗಿ ಬದುಕಲು ಅಂಬೇಡ್ಕರ್ ರಚಿಸಿದ ಸಂವಿಧಾನವೇ ಕಾರಣವಾಗಿದೆ ಎಂದು ಹೇಳಿದರು. ಸಮಾಜದಲ್ಲಿದ್ದ ಅನಿಷ್ಟ ಪದ್ಧತಿಗಳನ್ನು ನಿರ್ಮೂಲನೆ ಮಾಡಿ ಹಿಂದುಳಿದವರನ್ನು ಮುಖ್ಯವಾಹಿನಿಗೆ ತಂದ ಮಹಾನ್ ನಾಯಕ ಅಂಬೇಡ್ಕರ್ ಎಂದರು.

ಕಾರ್ಯಕ್ರಮದಲ್ಲಿ ದಲಿತ ಮುಖಂಡ ತಮ್ಮಣ್ಣಯ್ಯ, ವಕೀಲ ಭಾಸ್ಕರ್ ಸೇರಿದಂತೆ ಹಲವರು ಮಾತನಾಡಿದರು.

ಈ ಸಂದರ್ಭದಲ್ಲಿ ಸಹಕಾರ ಸಂಘದ ನಿರ್ದೇಶಕ ಕೆ.ಎಂ. ಲಕ್ಷ್ಮಣ್, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷೆ ಜಾನಕಿ ವೆಂಕಟರಾಮು, ಮಹದೇವ್, ಶಿವನಂಜಯ್ಯ, ನಟರಾಜ್, ದೇವೇಂದ್ರ, ಆನಂದ್, ಶಿಕ್ಷಕಿ ಅಭಿಲಾಷ, ಭಾವನಾ, ಜೈ ಭೀಮ್ ಯುವ ಸೇನೆಯ ಗೌರವಾಧ್ಯಕ್ಷ ಗಣೇಶ್, ಅಧ್ಯಕ್ಷ ಕಾರ್ತಿಕ್ ಹಾಗೂ ಇತರರು ಉಪಸ್ಥಿತರಿದ್ದರು.

## ಡಾ.ಬಿ.ಆರ್.ಅಂಬೇಡ್ಕರ್ ತತ್ವ ಯುವ ಪೀಳಿಗೆಗೆ ದಾರಿದೀಪ: ರಾಜೇಶ್




**ನಾಗಮಂಗಲ:** ಮಹಾನ್ ಮಾನವತಾವಾದಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಆದರ್ಶ ಮೌಲ್ಯಗಳು ನಿತ್ಯ ನಿರಂತರವಾಗಿದೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎನ್.ಜೆ.ರಾಜೇಶ್ ನುಡಿದರು.

ಅವರು ಬುಧವಾರ ನಾಗಮಂಗಲ ತಾಲೂಕು ಬ್ಲಾಕ್ ಕಾಂಗ್ರೆಸ್ ಕಚೇರಿಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಅಂಗವಾಗಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದ ಆರಂಭದಲ್ಲಿ ಡಾ. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು. ಮಹತ್ವಪೂರ್ಣ ಚಿಂತನೆಗಳು ಮತ್ತು ಸಮಾಜ ಪರಿವರ್ತನೆಗೆ ನೀಡಿದಅಮೂಲ್ಯಕೊಡುಗೆಗಳನ್ನು ಸ್ಮರಿಸಲಾಯಿತು.

ಡಾ.ಬಿ.ಆರ್.ಅಂಬೇಡ್ಕರ್ ಅವರು ದೇಶಕ್ಕೆ ಸಮಾನ ಹಕ್ಕುಗಳು, ನ್ಯಾಯ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ನೀಡಿದ ಮಹಾನ್ ನಾಯಕರು ಎಂದು ಹೇಳಿದರು.

ಅವರ ತತ್ವಗಳು ಇಂದಿನ ಯುವ ಪೀಳಿಗೆಗೆ ದಾರಿದೀಪವಾಗಿದ್ದು, ಶಿಕ್ಷಣದ ಮೂಲಕ ವ್ಯಕ್ತಿ ಮತ್ತು ಸಮಾಜ ಎರಡೂ ಪ್ರಗತಿಯನ್ನು ಸಾಧಿಸಬಹುದು ಎಂಬ ಸಂದೇಶವನ್ನು ಅವರು ನೀಡಿದರು ಎಂದು ತಿಳಿಸಿದರು.

ಡಾ.ಅಂಬೇಡ್ಕರ್ ಅವರು ಹಿಂದುಳಿದ ವರ್ಗಗಳ ಏಳಿಗೆಗಾಗಿ ತಮ್ಮ ಜೀವನವನ್ನೇ ಅರ್ಪಿಸಿದ ಮಹನೀಯರಾಗಿದ್ದಾರೆ, ಭಾರತದಲ್ಲಿ ನಮ್ಮಂತ ಹಿಂದುಳಿದ ಜನರು ಶಿಕ್ಷಣ ಕಲಿತಿದ್ದೇವೆ ಅಂದರೆ ಅದಕ್ಕೆ ಅವರೇ ನೇರ ಕಾರಣ ಈ ಹಿನ್ನೆಲೆ ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳುವುದು ಅತ್ಯವಶ್ಯಕವಾಗಿದೆ ಎಂದು ಕೆಪಿಸಿಸಿ ಅಲ್ಪಸಂಖ್ಯಾತರ ವಿಭಾಗದ ಉಪಾಧ್ಯಕ್ಷರಾದ ತಿಬ್ಬನಹಳ್ಳಿ ರಮೇಶ್ ಮಾತನಾಡಿದರು.

ಇದೇ ಸಂದರ್ಭದಲ್ಲಿ ಮಾಜಿ ತಾಲೂಕು ಪಂಚಾಯಿತಿ ಸದಸ್ಯ ವಸಂತಮಣಿ.ಗೀತಾ ದಾಸೇಗೌಡ, ನಟರಾಜ್, ವಿಜಯ್ ಕುಮಾರ್ ಹಾಗೂ ಅನೇಕ ಮುಖಂಡರು ಹಾಜರಿದ್ದರು.

# 2027 ರ ಮನೆಗಣತಿ ಕಾರ್ಯಕ್ರಮಕ್ಕೆ ಅಧಿಕೃತವಾಗಿ ಹಸಿರು ನಿಶಾನೆ



**ಮಂಡ್ಯ:** ನಗರದ ಬಂದೀಗೌಡ ಬಡಾವಣೆಯಲ್ಲಿ ಮಾನ್ಯ ಶಾಸಕರಾದ ಪಿ. ರವಿಕುಮಾರ್ ರವರ ಮನೆಯಿಂದ ಜನಗಣತಿ 2027 ರ ಮನೆಗಣತಿ ಕಾರ್ಯಕ್ರಮಕ್ಕೆ ಅಧಿಕೃತವಾಗಿ ಹಸಿರು ನಿಶಾನೆ ತೋರಿಸಿ, 34 ಪ್ರಶ್ನೆಗಳಿಗೆ ಉತ್ತರಿಸಿ ಜನಗಣತಿ 2027 ರ ಕಾರ್ಯಕ್ಕೆ ಶುಭಕೋರಿದರು.


ಈ ಸಂದರ್ಭದಲ್ಲಿ ಮಂಡ್ಯ ಗ್ರಾಮಾಂತರ ಚಾರ್ಜ್ ಆಫಿಸರ್ ಆದ ತಹಶೀಲ್ದಾರ್ ವಿಶ್ವನಾಥ್ ಹಾಗೂ ಮಂಡ್ಯ ನಗರದ ಚಾರ್ಜ್ ಆಫಿಸರ್ ಶ್ರೀಮತಿ ಯು. ಪಿ ಪಂಪಶ್ರೀ, ಜನಗಣತಿ ರಾಜ್ಯ ಸಂಪನ್ಮೂಲ ವ್ಯಕ್ತಿ ಡಾ ಚಂದ್ರಶೇಖರ್ ಜಿ. ಆರ್, ಕಂದಾಯ ಅಧಿಕಾರಿ ರಾಜಶೇಖರ್, ಫೀಲ್ಡ್ ಟ್ರೈನರ್ ಕುಮಾರ್, ಸೂಪರ್ ವೈಸರ್ ಮಹೇಂದ್ರ, ಗಣತಿದಾರರಾದ ಸುಮಾ ಹಾಜರಿದ್ದರು..

# ಜನ ಜಾನುವಾರುಗಳಿಗೆ ಮೇವು ನೀರು ಒದಗಿಸುವಲ್ಲಿ ಆಡಳಿತ ವರ್ಗ ವಿಫಲ

**ಹನೂರು:** ಬೇಸಿಗೆಯಲ್ಲಿ ಬರ ಆವರಿಸಿದ್ದರು ನಾಗರಿಕರಿಗೆ ನೀರು ಹಾಗೂ ಜಾನುವಾರುಗಳಿಗೆ ನೀರು ಹಾಗೂ ಮೇವನ್ನು ಒದಗಿಸುವುದರಲ್ಲಿ ವಿಫಲವಾಗಿರುವ ಜಿಲ್ಲಾಡಳಿತದ ವಿರುದ್ಧ ಮಾರ್ಟಳ್ಳಿ ಗ್ರಾಮ ಪಂಚಾಯಿತಿ ಕಚೇರಿ ಮುಂದೆ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಕಾರ್ಯಾಧ್ಯಕ್ಷ ಶೈಲೇಂದ್ರ ಅವರು ತಿಳಿಸಿದರು.

ಹನೂರು ಪಟ್ಟಣದ ಪಶುಸಂಗೋಪನ ಇಲಾಖೆ ಸಭಾಂಗಣದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ ಅವರು ಜಿಲ್ಲೆಯಲ್ಲಿರುವ ಎಲ್ಲಾ ಇಲಾಖೆಗಳ ಕಾರ್ಯಕ್ರಮಗಳನ್ನು ಗಡಿಭಾಗದ ನಾಗರೀಕರಿಗೆ ತಿಳಿಸುವಂತೆ ಒತ್ತಾಯಿಸಿ ದಿನಾಂಕ: 17–04–2026 ಶುಕ್ರವಾರ ಬೆಳಿಗ್ಗೆ 10–00 ಗಂಟೆಗೆ ಪ್ರತಿಭಟನೆ ನಡೆಸಲಾಗುವುದು.

ಕಳೆದ ಹಲವಾರು ವರ್ಷಗಳಿಂದ ಮಾರ್ಟಳ್ಳಿ ವ್ಯಾಪ್ತಿಯಲ್ಲಿ ಬರ ಆವರಿಸಿ ಕುಡಿಯುವ ನೀರಿಗೆ ಹಾಕಾರ ಉಂಟಾಗಿದೆ ಸರ್ಕಾರ ಬೇಸಿಗೆಯಲ್ಲಿ ಜನರಿಗೆ ಹಾಗೂ ಜಾನುವಾರುಗಳಿಗೆ ಮೇವು ಹಾಗೂ ನೀರಿನ ಸಮಸ್ಯೆ ಉಂಟಾಗದಂತ ಕಟ್ಟುನಿಟ್ಟಿನ ಸೂಚನೆ ನೀಡಿದ್ದರೂ ಜಿಲ್ಲಾಡಳಿತ ನೀರಿನ ಸಮಸ್ಯೆ ಹಾಗೂ ಜಾನುವಾರುಗಳಿಗೆ ನೀರು ಮತ್ತು ಮೇವಿನ ಸಮಸ್ಯೆ




ಬಗೆಹರಿಸುವುದರಲ್ಲಿ ವಿಫಲವಾಗಿದೆ. ಪಂಚಾಯಿತಿ ವ್ಯಾಪ್ತಿಯಲ್ಲಿ ಈ–ಸ್ವತ್ತು ಸಮಸ್ಯೆ ಬಗೆಹರಿಸುವುದರಲ್ಲಿ ಪಂ. ಅಧಿಕಾರಿಗಳು ಬೇಜವಾಬ್ದಾರಿತನ ತೋರುತ್ತಿದ್ದಾರೆ. ಮಾರ್ಟಳ್ಳಿ ಗ್ರಾಮ ಪಂ. ಜಿಲ್ಲೆಯ ಗಡಿ ಭಾಗವಾಗಿದ್ದು ಜಿಲ್ಲಾಡಳಿತದ ವ್ಯಾಪ್ತಿಯಲ್ಲಿ ಸುಮಾರು 45ಕ್ಕೂ ಹೆಚ್ಚು, ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ. ಎಲ್ಲ ಇಲಾಖೆಗಳು ತಮ್ಮ ಇಲಾಖೆಗಳಿಂದ ನಾಗರಿಕರಿಗೆ ಸಿಗುವ ಸೌಲಭ್ಯಗಳ ಬಗ್ಗೆ ಚಳುವಳಿಯ ದಿವಸ ಮಾಹಿತಿ ನೀಡಬೇಕು. ಹನೂರು ತಾಲ್ಲೂಕನ್ನು ಬರಪೀಡಿತ ಪ್ರದೇಶ ಎಂದು ಘೋಷಣೆ ಮಾಡಬೇಕು, ಗೋಶಾಲೆಗಳನ್ನು ತೆರೆಯಬೇಕು ಹಾಗೂ ಸೀಮೆ ಹಸುಗಳಿಗೆ ಮೇವನ್ನು ಆಯಾ ರೈತರಿಗೆ ನೀಡಿ ಮೇವಿನ ಸಮಸ್ಯೆ ಬಗೆಹರಿಸಬೇಕು ಪೊ?ಡಿ ಸಮಸ್ಯೆ ಬಗೆಹರಿಸಬೇಕು, ಈ–ಸ್ವತ್ತು ಸಮಸ್ಯೆಗಳನ್ನು ಬಗೆಹರಿಸಬೇಕು, ಈ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸುವಂತೆ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದ್ದು ಸಂಬಂಧಪಟ್ಟ ಅಧಿಕಾರಿಗಳು ಚಳುವಳಿ ಸ್ಥಳಕ್ಕೆ ಆಗಮಿಸಿ, ಸಮಸ್ಯೆಯನ್ನು ಬಗೆಹರಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಎಂ.ಇ ಬಸವರಾಜು, ಮಾರ್ಟಳ್ಳಿ ಘಟಕ ರೈತ ಸಂಘದ ಅಧ್ಯಕ್ಷ ಅರ್ಪುದರಾಜ್, ವಸಂತ ಕುಮಾರ್, ಪುಟ್ಟಸ್ವಾಮಿ, ಡೇವಿಡ್, ಸಗಾಯರಾಜ್, ಲಾರೆನ್ಸ್, ರಾಜ, ಲೂರ್ದುಸ್ವಾಮಿ, ವಲ್ಲಭದಾಸ್, ಸಂದನಮೇರಿ, ಜೆಸ್ಸಿಂತ ಹಾಗೂ ಇನ್ನಿತರರು ಇದ್ದರು.

# ಮೋದಿ ಅವರು ನಾರಿ ಶಕ್ತಿ ವಂದನ ಕಾಯ್ದೆ ಜಾರಿಗೆ ತರಲು ಮುಂದಾಗಿರುವುದು ಸಂತಸ ತಂದಿದೆ: ಲಕ್ಷ್ಮಿ ಅಶ್ವನ್‌ಗೌಡ

**ಮಂಡ್ಯ:** ಮಹಿಳೆಯರಿಗೆ ರಾಜಕೀಯ ಸ್ವಾತಂತ್ರ್ಯ ತಂದುಕೊಡುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ನಾರಿ ಶಕ್ತಿ ವಂದನ ಕಾಯ್ದೆ ಜಾರಿಗೆ ತರಲು ಮುಂದಾಗಿರುವುದು ಸಂತಸ ತಂದಿದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ ಲಕ್ಷ್ಮಿ ಅಶ್ವನ್‌ಗೌಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2023ರಲ್ಲಿ ನೂತನ ಸಂಸತ್ ಭವನ ಉದ್ಘಾಟನೆ ವೇಳೆ ನರೇಂದ್ರ ಮೋದಿಯವರು ನಾರಿ ಶಕ್ತಿ ವಂದನ ಕಾಯ್ದೆಯ ಘೋಷಣೆ ಮಾಡಿದ್ದರು. ಮಹಿಳೆಯರಿಗೆ ವಿಧಾನಸಭೆ, ಲೋಕಸಭೆಗಳಲ್ಲಿ ಶೇ.33 ರಷ್ಟು ಮೀಸಲಾತಿ ನೀಡುವ ಉದ್ದೇಶದಿಂದ ಈ ಕಾಯ್ದೆಯ ಜಾರಿಗೆ ಮುಂದಾಗಿದ್ದಾರೆ ಎಂದು ಹೇಳಿದರು.

ದೇಶದ ಶೇ.50 ರಷ್ಟು ಇರುವ ಮಹಿಳೆಯರು ರಾಜಕೀಯ ನೇತೃತ್ವ ವಹಿಸಿ ಅಧಿಕಾರದ ಮುಖ್ಯವಾಹಿನಿಗೆ ತರಲು 106ನೇ ಸಂವಿಧಾನಾತ್ಮಕ ತಿದ್ದುಪಡಿ ಅಧಿನಿಯಮದಂತೆ ಲೋಕಸಭೆ, ವಿಧಾನಸಭೆಯಲ್ಲಿ ಶೇ.33ರಷ್ಟು ಮೀಸಲಾತಿ ಜಾರಿಗೆ ತರಬೇಕು. ಈ ಸಂಬಂಧ ಜನಗಣತಿ ಅಗತ್ಯವಾಗಿದ್ದು, ಅದು ಈಗ ಕಾರ್ಯರೂಪ ಪಡೆದಿದೆ. ಈ ಅಮೂಲಾಗ್ರ ಬದಲಾವಣೆಗೆ ಎಲ್ಲ ಪಕ್ಷಗಳು ಸಹಕಾರ ನೀಡುವಂತೆ ಕೇಂದ್ರ





ಸರಕಾರದಿಂದ ಮನವಿ ಮಾಡಿಕೊಳ್ಳಲಾಗಿದೆ ಎಂದರು.

ಭಾರತದ ಶೇ.50ರಷ್ಟು ಮಂದಿಗೆ ಆಯುಷ್ಮಾನ್ ಭಾರತ್ ಯೋಜನೆಯಡಿ ವಾರ್ಷಿಕ 5 ಲಕ್ಷ ರೂ.ನಷ್ಟು ಆರೋಗ್ಯ ವಿಮೆ ನೀಡಲಾಗಿದೆ. ಅದರಲ್ಲಿ ಮಹಿಳಾ ಫಲಾನುಭವಿಗಳೇ ಹೆಚ್ಚಿದ್ದಾರೆ. ಪಿಎಂ ಉಜ್ವಲ ಯೋಜನೆ, ಸುಕನ್ಯ ಸಂಮೃದ್ಧಿ ಯೋಜನೆ, ಮಾತೃವಂದನ ಯೋಜನೆ, ಆವಾಸ್ ಯೋಜನೆ, ಬೇಟಿ ಬಜಾವೋ–ಬೇಟಿ ಪಡಾವೋ ಯೋಜನೆ ಮೂಲಕ ಶೈಕ್ಷಣಿಕ, ಆರ್ಥಿಕ ಹಾಗೂ ಸಮಾಜಿಕ ಸಬಲೀಕರಣಕ್ಕೆ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದರು.

ಗ್ರಾ.ಪಂನಿಂದ ಲೋಕಸಭೆಯವರೆಗೆ ಮಹಿಳಾ ಮೀಸಲಾತಿ ತಂದು ಮಹಿಳೆಯರಲ್ಲಿನ ಅದಮ್ಯ ಚೈತನ್ಯ ಹೊರಸೂಸುವ ಮೂಲಕ ವಿಕಸಿತ ಭಾರತಕ್ಕೆ ಅಡಿಪಾಯವಾಗಿ ಬಳಸಿಕೊಳ್ಳಲು ಮೋದಿ ಉದ್ದೇಶಿಸಿದ್ದಾರೆ. 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಿ ಮಾಡಲು ಮಹಿಳೆಯರ ಕೊಡುಗೆ ಒಗ್ಗೂಡಿಸಲು ನಾರಿಶಕ್ತಿ ವಂದನ ಕಾಯ್ದೆ ಸಹಕಾರಿಯಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಗೋಷ್ಠಿಯಲ್ಲಿ ಬಿಜೆಪಿ ಮಹಿಳಾ ಜಿಲ್ಲಾಧ್ಯಕ್ಷ ಮಂಗಳ ನವೀನ್, ಸುಜಾತ ಕೃಷ್ಣ, ಶಿಲ್ಪ, ಮಂಜುಳ, ಶೃತಿ, ಸೌಮ್ಯ ಇದ್ದರು.

## ದಿಶಿತಾ ಉನ್ನತ ಶ್ರೇಣಿಯಲ್ಲಿ ತೇರ್ಗಡೆ



**ಮೈಸೂರು:** ಮೈಸೂರಿನ ಜಯಲಕ್ಷ್ಮಿಪುರಂ ಬಡಾವಣೆಯಲ್ಲಿರುವ ಸೆಂಟ್ ಜೋಸೆಫ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ಕೆ.ಎಂ. ದಿಶಿತ ಅವರು ದ್ವಿತೀಯ ಪಿಯುಸಿ ವಾಣಿಜ್ಯ ವಿಭಾಗದ ಪರೀಕ್ಷೆಯಲ್ಲಿ ಶೇ.93 ಅಂಕ ಗಳಿಸಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ.

ಕನ್ನಡ 95, ಇಂಗ್ಲಿಷ್ 86, ಬ್ಯುಸಿನೆಸ್ ಸ್ಟಡೀಸ್ 99, ಅಕೌಂಟೆನ್ಸಿ 87, ಸ್ಟಾಟಿಟಿಕ್ಸ್ 97 ಹಾಗೂ ಕಂಪ್ಯೂಟರ್ ಸೈನ್ಸ್ ನಲ್ಲಿ 90 ಅಂಕ ಗಳಿಸಿದ್ದಾರೆ.

ದಿಶಿತ ಅವರು ಕೊಡಗಿನ ರೈತಸಂಘದ ಜಿಲ್ಲಾಧ್ಯಕ್ಷ ಕಾಡ್ಯಮಾಡ ಮನು ಸೋಮಯ್ಯ ಹಾಗೂ ಕಲ್ಪ ಉತ್ತಪ್ಪ ಅವರ ಪುತ್ರಿ.

## ಇಂದು 'ಮೈಸಿರಿ ಸಂಭ್ರಮ' ಕಾರ್ಯಕ್ರಮ

**ಮಂಡ್ಯ:** ಮೈಸೂರು ಕಾಲೇಜ್ ಆಫ್ ಇಂಜಿನಿಯರಿಂಗ್ ಆಂಡ್ ಮ್ಯಾನೇಜ್‌ಮೆಂಟ್ ವತಿಯಿಂದ 'ಮೈಸಿರಿ ಸಂಭ್ರಮ' ಕಾರ್ಯಕ್ರಮವನ್ನು ಏ.17 ಮತ್ತು 18ರಂದು ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕಾಲೇಜಿನ ಮುಖ್ಯಗ್ರಂಥಪಾಲಕ ವಿದ್ಯಾಸಾಗರ್ ತಿಳಿಸಿದರು.


ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಲೇಜಿನ ಹೊರಾಂಗಣ ಸಭಾಂಗಣದಲ್ಲಿ ಏ.17ರಂದು ಬೆಳಗ್ಗೆ 11 ಗಂಟೆಗೆ ಕಾರ್ಯಕ್ರಮ ಉದ್ಘಾಟನೆಯಾಗಲಿದ್ದು, ಜೆಎಸ್‌ಎಸ್ ವಿಶ್ವವಿದ್ಯಾಲಯದ ಉಪಕುಲಪತಿ ಡಾ.ಎಚ್.ಬಸವನಗೌಡ ಉದ್ಘಾಟನೆ ನೆರವೇರಿಸುವರು ಎಂದರು.

ವೇದಿಕೆ ಕಾರ್ಯಕ್ರಮದ ನಂತರ ಸಾಂಸ್ಕೃತಿಕ ಹಾಗೂ ನಾಲ್ಕು ತಾಂತ್ರಿಕ ವಿಭಾಗಗಳಿಂದ ತಂತ್ರಜ್ಞಾನ ಪ್ರದರ್ಶನ ಕಾರ್ಯಕ್ರಮಗಳು ನಡೆಯಲಿವೆ. ಏ.18ರಂದು ಈ ಕಾರ್ಯಕ್ರಮಗಳು ಮುಂದುವರೆಯಲಿದ್ದು, ಸಂಜೆ 5ಕ್ಕೆ ಪ್ರಮುಖ ವೇದಿಕೆ ಕಾರ್ಯಕ್ರಮಕ್ಕೆ ಚಲನಚಿತ್ರ ನಟಿ ರಾಗಿಣಿ ದ್ವಿವೇದಿ ಮುಖ್ಯ ಅತಿಥಿಯಾಗಿ ಭಾಗವಹಿಸುವರು ಎಂದು ಹೇಳಿದರು.

ಮೈಸೂರು ವಿಭಾಗ ವ್ಯಾಪ್ತಿಯ 40ರಿಂದ 50 ಕಾಲೇಜುಗಳ 2000ಕ್ಕೂ ಹೆಚ್ಚು ಮಂದಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಡ್ಯಾನ್ಸ್ ಮತ್ತು ಫ್ಯಾಷನ್ ಶೋ ಸ್ಪರ್ಧೆಯಲ್ಲಿ ಪಾಲ್ಗೊಳ್ಳುವರು. ಡ್ಯಾನ್ಸ್ ವಿಜೇತರಿಗೆ 7000 ರೂ ಪ್ರಥಮ ಬಹುಮಾನ, 5000 ರೂ ದ್ವಿತೀಯ ಬಹುಮಾನ, ಫ್ಯಾಷನ್ ಶೋ ಸ್ಪರ್ಧೆಗೆ 5000 ರೂ ಪ್ರಥಮ ಬಹುಮಾನ, 3000 ರೂ ದ್ವಿತೀಯ ಬಹುಮಾನ ನೀಡಲಾಗುವುದು ಎಂದು ಮಾಹಿತಿ ನೀಡಿದರು.

ಗೋಷ್ಠಿಯಲ್ಲಿ ಸಹಾಯಕ ಪ್ರಾಧ್ಯಾಪಕ ಎಂ.ಜಶ್ವಂತ್, ಉಪಗ್ರಂಥಪಾಲಕ ಜಿ.ಎನ್. ಮಹದೇವಸ್ವಾಮಿ, ಪಿ.ನಿತೀಶ್ ಇದ್ದರು.







## ಲವ್ ಮಾಕ್ಟೇಲ್3ಗೆ 25 ದಿನ ಪೂರೈಸಿದ ಸಂಭ್ರಮ!

# 2026 ರ ಮೊದಲ ಸೂಪರ್ ಹಿಟ್ ಚಿತ್ರ !

ಡಾರ್ಲಿಂಗ್ ಕೃಷ್ಣ ನಿರ್ದೇಶನ ಮಾಡಿ, ನಾಯಕನಾಗಿ ನಟಿಸಿರುವ ಲವ್ ಮಾಕ್ಟೇಲ್3 ಚಿತ್ರ ಯಶಸ್ವಿಯಾಗಿ 25 ದಿನ ಪೂರೈಸಿಕೊಂಡಿದೆ. ಬಿಡುಗಡೆಯಾದ ಮೊದಲ ದಿನದಿಂದಲೇ ಉತ್ತಮ ಪ್ರತಿಕ್ರಿಯೆ ಪಡೆದುಕೊಂಡಿದ್ದ ಈ ಚಿತ್ರ ದಿನದಿಂದ ದಿನಕ್ಕೆ ಉತ್ತಮ ಪ್ರದರ್ಶನ ಕಂಡಿತ್ತು. ಇದೀಗ ಇಪ್ಪತ್ತೈದು ದಿನಗಳನ್ನು ಯಶಸ್ವಿಯಾಗಿ ದಾಟಿಕೊಳ್ಳುವ ಮೂಲಕ 2026ರ ಮೊದಲ ಸೂಪರ್ ಹಿಟ್ ಚಿತ್ರವಾಗಿ ದಾಖಲಾಗಿದೆ.

ಟಾಕ್ಸಿಕ್ ಚಿತ್ರ ಮುಂದಕ್ಕೆ ಹೋಗುತ್ತಲೇ ಮಾರ್ಚ್ 19ರಂದು ಲವ್ ಮಾಕ್ಟೇಲ್3 ಚಿತ್ರ ಬಿಡುಗಡೆಗೊಂಡಿತ್ತು. ಕೆವಿಎನ್ ಸಂಸ್ಥೆ ವಿತರಣೆಯ ಜವಾಬ್ದಾರಿಯನ್ನು ಹೊತ್ತುಕೊಂಡಿತ್ತು. ಎಲ್ಲ ದಿಕ್ಕಿನಿಂದಲೂ ಸಕಾರಾತ್ಮಕ ವಾತಾವರಣದಲ್ಲಿ ಬಿಡುಗಡೆಗೊಂಡಿದ್ದ ಲವ್ ಮಾಕ್ಟೇಲ್3 ಅದೇ ಆವೇಗದೊಂದಿಗೆ ಇಪ್ಪತ್ತೈದರ ನಿರ್ಣಾಯಕ ಘಟ್ಟವನ್ನು ದಾಟಿಕೊಂಡಿದೆ. ಇಂಥಾ ಗೆಲುವಿಗೆ ಕಾರಣರಾದ ಪ್ರೇಕ್ಷಕರಿಗೆ ಧನ್ಯವಾದ ಸಲ್ಲಿಸುತ್ತಲೇ, ಡಾರ್ಲಿಂಗ್ ಕೃಷ್ಣ ಲವ್ ಮಾಕ್ಟೇಲ್ ಸರಣಿಯ ಹ್ಯಾಟ್ರಿಕ್ ಗೆಲುವನ್ನು ಸಂಭ್ರಮಿಸಿದ್ದಾರೆ.

ಕ್ರಿಸ್‌ಮಿ ಬ್ಯಾನರಿನಡಿಯಲ್ಲಿ ಡಾರ್ಲಿಂಗ್ ಕೃಷ್ಣ ಮತ್ತು ಮಿಲನಾ ನಾಗರಾಜ್ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಡಾರ್ಲಿಂಗ್ ಕೃಷ್ಣ, ಮಿಲನಾ ನಾಗರಾಜ್, ಸಂವೃತ, ಅಮೃತಾ ಅಯ್ಯಂಗಾರ್, ದಿಲೀಪ್ ರಾಜ್, ಶ್ವೇತಾ ಪ್ರಸಾದ್, ರಚೆಲ್ ಡೇವಿಡ್, ನಯೇರಾ, ಜಗದೀಶ್, ಅಭಿಲಾಶ್, ಗಿರಿರಾಜ್, ದಳಪತಿ ಮುಂತಾದವರ ತಾರಾಗಣ ಈ ಚಿತ್ರಕ್ಕಿದೆ. ಶ್ರೀ ಕ್ರೇಜಿ ಮೈಂಡ್ಸ್ ಛಾಯಾಗ್ರಹಣ ಮತ್ತು ಸಂಕಲನ, ನಕುಲ್ ಅಭಯಂಕರ್ ಸಂಗೀತ, ಅಮರ್ ಮತ್ತು ಜೋನಾ ಕಲಾ ನಿರ್ದೇಶನ ಈ ಚಿತ್ರಕ್ಕಿದೆ.



## ಐದು ಶಾಟ್‌ಗಳಲ್ಲಿ ಚಿತ್ರೀಕರಣವಾದ ವಿಶ್ವದ ಮೊದಲ ಚಿತ್ರ

ಮಹಿಳಾ ಪ್ರಧಾನ ಕಥೆಯನ್ನು ಹೊಂದಿರುವ ಅದಿತಿ ಚಿತ್ರಕ್ಕೆ ಮಿಲೆನಿಯಮ್ ಆಡ್ ಮೀಡಿಯಾ ಬ್ಯಾನರ್ ಅಡಿಯಲ್ಲಿ ವ್ಯಾಲೆರಿನಾ ಮರಿಯ ರೋಜರ್ಸ್ ಮತ್ತು ನೆಲ್ಸನ್ ರೋಜರ್ಸ್. ಡಬ್ಲ್ಯು ಬಂಡವಾಳ ಹೂಡಿದ್ದಾರೆ. ಲಿಬರ್ಟಿ ಎಂಬ ಅಡಿಬರಹ ಇರಲಿದೆ. ನೆಲ್ಸನ್ ರೋಜರ್ಸ್. ಡಬ್ಲ್ಯು ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಇವರೊಂದಿಗೆ ಸೋಲೋಮನ್. ಕೆ.ಜಾರ್ಜ್ ನಿರ್ದೇಶನದಲ್ಲಿ ಕೈ ಜೋಡಿಸಿದ್ದಾರೆ. ಪ್ರಚಾರದ ಮೊದಲ ಹಂತವಾಗಿ ಹಾಡುಗಳು, ಟೀಸರ್ ಬಿಡುಗಡೆ ಮತ್ತು ವೈ2ಕೆ ಮ್ಯೂಸಿಕ್ ಆಡಿಯೋ ಕಂಪೆನಿ ಲೋಗೋ ಅನಾವರಣ ಸಮಾರಂಭವು ಪಂಚತಾರಾ ಹೋಟೆಲ್‌ದಲ್ಲಿ ಅದ್ದೂರಿಯಾಗಿ ನಡೆಯಿತು. ?ಆ ದಿನಗಳು ಖ್ಯಾತಿಯ ಚೇತನ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ತಂಡಕ್ಕೆ ಶುಭ ಹಾರೈಸಿದರು.

ಮುಖ್ಯ ಪಾತ್ರದಲ್ಲಿ ಇಶಾನಾ ಸಣ್ಣಪ್ಪನವರ. ಇವರೊಂದಿಗೆ ಹರ್ಷಿತಾ ಕಲ್ಲಿಂಗಲ್, ಆರತಿ, ನಿಸರ್ಗ ಮಂಜುನಾಥ್, ಯಶಾ, ಡ್ಯಾನಿ ಕುಟ್ಟಪ್ಪ, ಸುನಿಲ್, ಅಜಿತ್‌ಕುಮಾರ್, ಗೋಪಿ ಮುಂತಾದವರು ನಟಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕರು ?ಅದಿತಿ ಸಿನಿಮಾವು ಸೈಕಲಾಜಿಕಲ್ ಥ್ರಿಲ್ಲರ್ ಅಂಶಗಳನ್ನು ಒಳಗೊಂಡಿದೆ. ಶೀರ್ಷಿಕೆ ಹೆಸರಿನ ಹುಡುಗಿ ಯಾರು ಯಾಕೆ ಬಂದಳು ಏನು ಮಾಡಿದಳು ಅದಕ್ಕೆ ಕಾರಣವೇನು ಇವೆಲ್ಲವೂ ಕುತೂಹಲದೊಂದಿಗೆ ಸಾಗುತ್ತದೆ. ಇಷ್ಟನ್ನು ಮಾತ್ರ ಹೇಳಬಹುದು. ವಿಶ್ವದಲ್ಲೇ ಮೊದಲು ಎನ್ನಬಹುದಾದ ?ಅದಿತಿ ಸಿನಿಮಾವನ್ನು ಕೇವಲ ಐದು ಶಾಟ್‌ಗಳಲ್ಲಿ ಚಿತ್ರೀಕರಣ ಮಾಡಲಾಗಿದೆ. ಪ್ರತಿಯೊಂದು ದೃಶ್ಯಗಳು 20-25 ನಿಮಿಷ ಇರುತ್ತದೆ.

ಇದಕ್ಕಾಗಿ ತಿಂಗಳುಗಟ್ಟಲೆ ಕಲಾವಿದರಿಗೆ ತರಭೇತಿ ನಡೆಸಿ ಕ್ಯಾಮಾರ ಮುಂದೆ ಕೆಲಸ ತೆಗೆದುಕೊಂಡಿದ್ದೇವೆ. ಹಿರಿಯ ಛಾಯಾಗ್ರಾಹಕ ಪಿ.ಕೆ.ಹೆಚ್.ದಾಸ್ ಅವರ ಸಲಹೆ, ಸಹಕಾರ ನೀಡುವುದಲ್ಲದೆ ಅದ್ಬುತ ಶಾಟ್ಸ್‌ಗಳನ್ನು ಸೆರೆ ಹಿಡಿದುಕೊಟ್ಟಿದ್ದಾರೆ. ಕನ್ನಡ ಸೇರಿದಂತೆ ಹಿಂದಿ, ತಮಿಳು, ತೆಲುಗು, ಮಲೆಯಾಳಂ ಹಾಗೂ ಕೊಂಕಣಿ ಭಾಷೆಗಳಲ್ಲಿ ಸಿನಿಮಾವು ಏಕಕಾಲಕ್ಕೆ ಬರಲಿದೆ. ಎಲ್ಲಾ ಭಾಷೆಯ ಚಿತ್ರಗಳಿಗೆ ಮಹಿಳೆಯರೇ ಸಂಭಾಷಣೆ ಬರೆದಿರುವುದು ವಿಶೇಷ. ಕನ್ನಡದಲ್ಲಿ ಕುಮುದಹಳ್ಳಿ ಅರುಣ್‌ಮೂರ್ತಿ ಪಂಚಿಂಗ್ ಡೈಲಾಗ್ ಬರೆದಿದ್ದಾರೆ. ಮನರಂಜನೆ ಇರಬೇಕು ಎನ್ನುವ ಸಲುವಾಗಿ ಎರಡು ಗ್ಲಾಮರಸ್ ಹಾಡುಗಳಿಗೆ ಪ್ರಿಯಾ ಮಾಲಿ, ಚೇತನ ನಾಯಕ್ ಧ್ವನಿಯಾಗಿದ್ದಾರೆ. ಇಂತಹ ಸಿನಿಮಾಕ್ಕೆ ಮಾಧ್ಯಮದ ಪ್ರೋತ್ಸಾಹ ಬೇಕೆಂದು ನೆಲ್ಸನ್ ರೋಜರ್ಸ್.ಡಬ್ಲ್ಯು ಕೋರಿದರು.

ಸಂಗೀತ ರಮೇಶ್ ಕೃಷ್ಣ-ಕೃಷ್ಣ ಪ್ರಿಯದರ್ಶನ್, ಕೊನೆ ಹಂತದ ಛಾಯಾಗ್ರಹಣ ವೆಂಕಟೇಶ್.ಆರ್, ಸಂಕಲನ ಸೋಲೋಮನ್.ಕೆ.ಜಾರ್ಜ್, ಹಿನ್ನಲೆಶಬ್ದ ರಾಜ್ ಭಾಸ್ಕರ್ ಅವರದಾಗಿದೆ. ಬೆಂಗಳೂರು, ಕನಕಪುರ ತಾಣಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ. ಸದ್ಯದಲ್ಲೆ ಚಿತ್ರವು ಸೆನ್ಸಾರ್ ಅಂಗಳಕ್ಕೆ ಹೋಗಲಿದ್ದು, ಜೂನ್ ತಿಂಗಳಲ್ಲಿ ಜನರಿಗೆ ತೋರಿಸಲು ನಿರ್ಮಾಪಕರು ಯೋಜನೆ ರೂಪಿಸಿಕೊಂಡಿದ್ದಾರೆ.

## ಲವ್ ಸೀಸನ್ ಟೀಸರ್ ಬಂತು..!

ಲವ್ ಸೀಸನ್ಸ್ ಚಿತ್ರೀಕರಣ ಮುಗಿದಿದೆ.. ಟೀಸರ್ ಹೊರಬಂದಿದೆ.. ರಾಜೇಶ್ ನಟರಂಗ ಈ ಚಿತ್ರದ ಬಹುಮುಖ್ಯ ಪಾತ್ರವೊಂದಕ್ಕೆ ಜೀವ ತುಂಬಿದ್ದಾರೆ.

ಈ ಬಗ್ಗೆ ಮಾತಾಡಿರುವ ರಾಜೇಶ್ ಅವರು, ನಿರ್ದೇಶಕರ ಕಸುಬುದಾರಿಕೆಯನ್ನು ಮೆಚ್ಚಿಕೊಳ್ಳುತ್ತಲೇ, ತಾನಿಲ್ಲಿ ಜವಾಬ್ದಾರಿಯುತ ತಂದೆಯ ಪಾತ್ರದಲ್ಲಿ ನಟಿಸಿರುವ ಸುಳಿವನ್ನು ಬಿಟ್ಟು ಕೊಟ್ಟರು. ಪ್ರೀತಿಯೆಂಬುದು ಯಾವ ಕಾಲಕ್ಕೂ ಹಳತಾಗದ ವಿಚಾರ. ಈ ಭೂಮಿಕೆಯಲ್ಲಿಯೇ ರೂಪುಗೊಂಡಿರುವ ಈ ಚಿತ್ರ ಎಂದರು.

ಎನ್.ಆರ್ ಮಂಜುನಾಥ ಚಿತ್ರದ ನಿರ್ಮಾಪಕ..

ಕೃತ್ವಿಕ್ ಈ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗಿದ್ದಾರೆ. ಈ ಚಿತ್ರದ ನಾಯಕ, ರಂಗಭೂಮಿ ಕಲಾವಿದ ಮುಕುಂದ ರಾಮಸ್ವಾಮಿ ಹಾಗೂ ನಾಯಕಿಯರಾದ ದಿಯಾ ಕೀರ್ತಿ ಮತ್ತು ಚಂದನಾ ಗೌಡ ಸಹ ಪಾತ್ರಗಳ ಬಗ್ಗೆ ಒಂದಷ್ಟು ವಿಚಾರಗಳನ್ನು ಹಂಚಿಕೊಂಡರು. ಸಂಗೀತ ನಿರ್ದೇಶಕ ವೀರ್ ಸಮರ್ಥ್ ಈ ಸಿನಿಮಾ ಹಾಡುಗಳು ಭಿನ್ನ ಅಂದರು.

ಚಿತ್ರ ಜೂನ್ ತಿಂಗಳಲ್ಲಿ ಬಿಡುಗಡೆಗೊಳ್ಳಲಿದೆ. ಇದೀಗ ಟೀಸರ್ ಬಿಡುಗಡೆಗೊಂಡಿದೆ. ಮುಂದಿನ ದಿನಗಳಲ್ಲಿ ಹಾಡುಗಳು ಮತ್ತು ಟ್ರೈಲರ್ ಬಿಡುಗಡೆಗೊಳ್ಳಲಿದೆ. ಬೆಂಗಳೂರಿನಲ್ಲಿಯೇ ಚಿತ್ರೀಕರಣ ನಡೆದಿದೆ.

ಮುಕುಂದ ರಾಮಸ್ವಾಮಿ ನಾಯಕನಾಗಿ, ದಿಯಾ ಕೀರ್ತಿ, ಚಂದನಾ ಗೌಡ ಮತ್ತು ಶ್ವೇತಾ ಕೊಗ್ಲೂರು ನಾಯಕಿಯರಾಗಿ ಜೊತೆಯಾಗಿದ್ದಾರೆ. ಮಂಡ್ಯ ರಮೇಶ್, ರಾಜೇಶ್ ನಟರಂಗ, ಸಂಗೀತಾ ಅನಿಲ್, ಜಯತೀರ್ಥ, ಚೇತನ್ ದುರ್ಗ, ಕಾಮಿಡಿ ಕಿಲಾಡಿ ಸದಾನಂದ, ಹುಲಿ ಕಾರ್ತಿಕ್, ಬೇಬಿ ರಿತು ಸಿಂಗ್ ಮುಂತಾದವರ ತಾರಾಗಣವಿದೆ.





## ಎರೆಯ ಚಿತ್ರಕ್ಕೆ ಸಿದ್ಧತೆ

ಚಕ್ರವರ್ತಿ ಇಮ್ಮಡಿ ಪುಲಕೇಶಿಯ ಜೀವನ ಮತ್ತು ಪರಂಪರೆಯನ್ನು ಆಧರಿಸಿದ ಮಹಾಕಾವ್ಯ ಚಲನಚಿತ್ರವಾದ "ಎರೆಯ"ದ ನಿರ್ಮಾಣವನ್ನು ಮಾಡುವುದರ ಮೂಲಕ ವಿಂಗ್‌ಸ್ಪ್ಯಾನ್ ಮೋಷನ್ ಪಿಕ್ಚರ್ಸ್ ಐಐಕ ಒಂದು ಅಭೂತಪೂರ್ವ ಸಿನಿಮಾ ಸಾಹಸಗಾಥೆಗೆ ಮುನ್ನುಡಿ ಬರೆಯಲಿದೆ.

ಸುನೀತ್ ಜಾವಡೇಕರ್ ಮತ್ತು ನಿವೇದಿತಾ ಕೊಠಾರೆ ನಿರ್ಮಿಸಲಿರುವ "ಎರೆಯ" ಚಿತ್ರದಲ್ಲಿ ಚಕ್ರವರ್ತಿ ಇಮ್ಮಡಿ ಪುಲಕೇಶಿಯ ಸಾಹಸ, ಚಾತುರ್ಯ ಮತ್ತು ಅದ್ವಿತೀಯ ಆಡಳಿತಸೂತ್ರಗಳ ಮೂಲಕ ವಿಶಾಲ ಸಾಮ್ರಾಜ್ಯವನ್ನು ಆಳಿದ ಅವರ ಆಳ್ವಿಕೆಯನ್ನು ಚಿತ್ರಿಸುತ್ತದೆ. ಇಮ್ಮಡಿ ಪುಲಕೇಶಿಯ ಕಾಲವನ್ನು ಇತಿಹಾಸದಲ್ಲಿ ಒಂದು ಸುವರ್ಣಯುಗ ಎಂದೇ ಹೇಳಲಾಗುತ್ತದೆ. ಡಾ. ಭೂಷನ್ ಶಾನಭಾಗ್ ಅವರ ಆಳವಾದ ಸಂಶೋಧನೆಯನ್ನು ಆಧರಿಸಿ ಚಿತ್ರಕಥೆಯನ್ನು ಹೆಣೆಯಲಾಗಿದೆ.

ಕನ್ನಡಕ್ಕೆ ಒಂದು ಮೈಲಿಗಲ್ಲಾಗಲಿರುವ ಈ ಮಹತ್ವಾಕಾಂಕ್ಷೆಯ ಯೋಜನೆಯನ್ನು ನಿರ್ದೇಶಿಸುತ್ತಿರುವುದು ಫಿಲ್ಮ್‌ಫೇರ್ ಪ್ರಶಸ್ತಿ ವಿಜೇತ ಕನ್ನಡ ಚಲನಚಿತ್ರ ನಿರ್ದೇಶಕರಾದ ಕೆ.ಎಂ. ಚೈತನ್ಯ ಅವರು. ಸೂಕ್ಷ್ಮತೆಯ ಕಥೆಗಾರಿಕೆ ಮತ್ತು ವಿಭಿನ್ನ ದೃಶ್ಯ ಶೈಲಿಗೆ ಹೆಸರುವಾಸಿಯಾಗಿರುವ. ಚೈತನ್ಯ ಕನ್ನಡದಲ್ಲಿ 8 ಯಶಸ್ವಿ ಚಲನಚಿತ್ರಗಳನ್ನು ನಿರ್ದೇಶಿಸಿದ್ದಾರೆ. "ಎರೆಯ" ದೊಂದಿಗೆ, ಇತಿಹಾಸದ ಪುಟಗಳಲ್ಲಿ ಕಂಡ ಭಾರತದ ಭವ್ಯತೆಯನ್ನು ಬಿಂಬಿಸಲು ಅವರು ತಯಾರಿ ಮಾಡಿಕೊಳ್ಳುತ್ತಿದಾರೆ.

## `ರುದ್ರಕಾಲ' ಚಿತ್ರಕ್ಕೆ ದಿಗಂತ್ ನಾಯಕ

ನಟ ದಿಗಂತ್ ಅಭಿನಯದ ನೂತನ ಚಿತ್ರ "ರುದ್ರ ಕಾಲ". ಇತ್ತೀಚೆಗೆ ಈ ಚಿತ್ರದ ಶೀರ್ಷಿಕೆಯನ್ನು ಸ್ಟಾರ್ ಹಿರೋಯಿನ್ ಸಮಂತ ಬಿಡುಗಡೆ ಮಾಡಿ, ಚಿತ್ರ ಯಶಸ್ವಿಯಾಗಲೆಂದು ಹಾರೈಸಿದ್ದಾರೆ. ರಮೇಶ್ ನಾಯ್ಕ್ ನಿರ್ಮಾಣ ಮಾಡುತ್ತಿರುವ ಈ ಚಿತ್ರವನ್ನು ಗೋಪಿ ಅವರು ನಿರ್ದೇಶಿಸುತ್ತಿದ್ದಾರೆ. ಶೀರ್ಷಿಕೆಯಲ್ಲೇ ಕುತೂಹಲ ಮೂಡಿಸಿರುವ ಈ ಚಿತ್ರದ ಮುಹೂರ್ತ ಸಮಾರಂಭ ಇದೇ ತಿಂಗಳ 22 ರಂದು ನೆರವೇರಲಿದೆ.

ನಮ್ಮ ಡೈರೆಕ್ಟರ್ ಗೋಪಿ ಅವರು ಕಥೆ ಹೇಳುತ್ತಿದ್ದಾಗಲೇ ಈ ಚಿತ್ರದಲ್ಲಿ ನಟಿಸಬೇಕೆಂದು ನಿರ್ಧಾರ ಮಾಡಿದೆ. ಹಾಗೆಯೇ ನಮ್ಮ "ರುದ್ರ ಕಾಲ" ಚಿತ್ರದ ಟೈಟಲ್ ಸಮಂತ ಅವರ ಕೈಯಿಂದ ರಿಲೀಸ್ ಆಗಿರುವುದು ತುಂಬಾ ಸಂತೋಷವಾಗಿದೆ. ಚಿತ್ರ ಎಲ್ಲರಿಗೂ ಮೆಚ್ಚುಗೆಯಾಗುವ ಭರವಸೆ ಇದೆ ಎಂದು ತಿಳಿಸಿರುವ ನಾಯಕ ದಿಗಂತ್, ನಿರ್ದೇಶಕ ಗೋಪಿ, ನಿರ್ಮಾಪಕ ರಮೇಶ್ ನಾಯ್ಕ್ ಮತ್ತು ಇಡೀ ಚಿತ್ರತಂಡಕ್ಕೆ ಒಳ್ಳೆಯದಾಗಲಿ ಎಂದು ಹಾರೈಸಿದ್ದಾರೆ.

ನಮ್ಮ ಚಿತ್ರದ ಶೀರ್ಷಿಕೆ ಅನಾವರಣ ಮಾಡಿಕೊಟ್ಟ ಸಮಂತ ಅವರಿಗೆ ಧನ್ಯವಾದ. ಇದು ನಮ್ಮ ಚಿತ್ರದ ಶುಭಾರಂಭ ಎಂದು ಭಾವಿಸುತ್ತೇನೆ. "ರುದ್ರ ಕಾಲ" ಚಿತ್ರದ ಚಿತ್ರೀಕರಣ ಕನ್ನಡ ಹಾಗೂ ತೆಲುಗು ಎರಡು ಭಾಷೆಗಳಲ್ಲಿ ಏಕಕಾಲಕ್ಕೆ ನಡೆಯಲಿದೆ. ಒಂದೇ ಹಂತದ ಚಿತ್ರೀಕರಣ ನಡೆಸಿ ಅದಷ್ಟು ಬೇಗ ತೆರೆಗೆ ತರುವ ಯೋಚನೆ ಇದೆ. ಇದು ನನ್ನ ನಿರ್ದೇಶನದ ನಾಲ್ಕನೇ ಚಿತ್ರ. ಕಥೆ ಕೇಳಿ ಮೆಚ್ಚಿಕೊಂಡು ನಾಯಕನಾಗಿ ನಟಿಸುತ್ತಿರುವ ದಿಗಂತ್ ಹಾಗೂ ನಿರ್ಮಾಣ ಮಾಡುತ್ತಿರುವ ರಮೇಶ್ ನಾಯ್ಕ್ ಅವರಿಗೆ ನನ್ನ ಧನ್ಯವಾದ ಎನ್ನುತ್ತಾರೆ ನಿರ್ದೇಶಕ ಗೋಪಿ.

ನಿರ್ಮಾಪಕ ರಮೇಶ್ ನಾಯ್ಕ್ ಚಿತ್ರದ ಬಗ್ಗೆ ಮಾತನಾಡುತ್ತಾ, ಡೈರೆಕ್ಟರ್ ಗೋಪಿ ಹೇಳಿದ ಸ್ಕ್ರಿಪ್ಟ್ ನನಗೆ ಫ್ರೆಶ್ ಆಗಿ ಅನಿಸಿತು. ನಮ್ಮ ಪ್ರೊಡಕ್ಷನ್‌ನಲ್ಲಿ ಇಂಥ ಚಿತ್ರ ಬರುತ್ತಿರುವುದು ನನಗೆ ತುಂಬಾ ಸಂತೋಷವಾಗಿದೆ. ಟೈಟಲ್ ರಿಲೀಸ್ ಮಾಡಿದ ನಟಿ ಸಮಂತ ಹಾಗೂ ನಾಯಕ ದಿಗಂತ್ ಅವರಿಗೆ ಧನ್ಯವಾದ ಎಂದರು.

ರಮೇಶ್ ಅವರು ಕಥೆ ಬರೆದಿರುವ ಈ ಚಿತ್ರಕ್ಕೆ ಕ್ರಿಸ್ಟೋಫರ್ ಜೋಸೆಫ್ ಛಾಯಾಗ್ರಹಣ ಮಾಡುತ್ತಿದ್ದಾರೆ. ಲೈನ್ ಪ್ರೊಡ್ಯೂಸರ್ ಆಗಿ ನವೀನ್ ಹಾಗೂ ಎಕ್ಸಿಕ್ಯೂಟಿವ್ ಪ್ರೊಡ್ಯೂಸರ್ ಆಗಿ ಶಿವರಾಜ್ ಕಾರ್ಯ ನಿರ್ವಹಿಸುತ್ತಿದ್ದಾರೆ..




## `ಫಾದರ್'ಗೆ ಮಾತಿನ ಜೋಡಣೆ

ಆರ್.ಸಿ.ಸ್ಟುಡಿಯೋಸ್ ನಿರ್ಮಾಣದ ಹಾಗೂ ಪ್ರಕಾಶ್ ರಾಜ್ ಮತ್ತು ಡಾರ್ಲಿಂಗ್ ಕೃಷ್ಣ ಪ್ರಮುಖಪಾತ್ರದಲ್ಲಿ ನಟಿಸಿರುವ "ಫಾದರ್" ಚಿತ್ರದ ಮಾತಿನ ಜೋಡಣೆ ಮುಕ್ತಾಯವಾಗಿದೆ.

ನಟ ಪ್ರಕಾಶ್ ರಾಜ್ ಅವರು ಶ್ರೀರಂಗಪಟ್ಟಣದಲ್ಲಿರುವ ತಮ್ಮ ಸ್ಟುಡಿಯೋದಲ್ಲೇ "ಫಾದರ್" ಚಿತ್ರದ ತಮ್ಮ ಪಾತ್ರಕ್ಕೆ ಡಬ್ಬಿಂಗ್ ಮಾಡಿದ್ದಾರೆ.

ಡಾರ್ಲಿಂಗ್ ಕೃಷ್ಣ ಅಭಿನಯದ "ಲವ್ ಮಾಕ್ಟೇಲ್ 3" ಚಿತ್ರ ಭರ್ಜರಿ ಯಶಸ್ಸು ಕಂಡಿದೆ. ಡಾರ್ಲಿಂಗ್ ಕೃಷ್ಣ ಅಭಿನಯದ "ಫಾದರ್" ಚಿತ್ರದ ಪ್ರಚಾರ ಕಾರ್ಯಕ್ಕೂ ಈಗ ಚಾಲನೆ ದೊರಕಿದೆ.

ಚಿತ್ರವನ್ನು ಆದಷ್ಟು ಬೇಗ ತೆರೆಗೆ ತರುವ ಸಿದ್ದತೆ ನಡೆಯುತ್ತಿದೆ. ಈಗಾಗಲೇ ಈ ಚಿತ್ರದ ಫಸ್ಟ್ ಲುಕ್ ಹಾಗೂ ಸುದೀಪ್ ಅವರು ಅನಾವರಣಗೊಳಿಸಿದ ಟೀಸರ್ ಎಲ್ಲರ ಮನ ಗೆದ್ದಿದೆ.

ಆರ್.ಸಿ. ಸ್ಟುಡಿಯೋಸ್ ಮೂಲಕ ಹೊರಬರುತ್ತಿರುವ ಈ "ಫಾದರ್" ಚಿತ್ರವು ನೋಡುಗರನ್ನು ಭಾವುಕ ಪಯಣಕ್ಕೆ ಕರೆದೊಯ್ಯುವ ಹೃದಯ ಸ್ಪರ್ಶಿ ಚಿತ್ರವಾಗಲಿದೆ.

"ಫಾದರ್" ಅಂದರೆ ಒಂದು ಶಕ್ತಿ. ತಮ್ಮ ನಟನೆ ಮೂಲಕ ಎಲ್ಲರ ಗಮನ ಸೆಳೆಯುವ ಪ್ರಕಾಶ್ ರಾಜ್ ಇಲ್ಲಿ "ಫಾದರ್". ಇನ್ನು, ಡಾರ್ಲಿಂಗ್ ಕೃಷ್ಣ ಕೂಡ ಪ್ರಮುಖ ಆಕರ್ಷಣೆ. ಇವರಿಬ್ಬರ ನಟನೆಯ "ಫಾದರ್" ಈಗಾಗಲೇ ಸಾಕಷ್ಟು ನಿರೀಕ್ಷೆ ಹುಟ್ಟಿಸಿದೆ. ಅದಕ್ಕೆ ಕಾರಣ, "ಲವ್ ಮಾಕ್ಟೇಲ್" ಜೋಡಿ ಇಲ್ಲೂ ಒಂದಾಗಿದೆ. ಡಾರ್ಲಿಂಗ್ ಕೃಷ್ಣ ಅವರ ಜೊತೆ ಅಮೃತಾ ಅಯ್ಯಂಗಾರ್ ಇದ್ದಾರೆ ಎನ್ನುವುದು ಮತ್ತೊಂದು ವಿಶೇಷ. ಇವರೊಂದಿಗೆ ಅನೇಕ ನುರಿತ ಕಲಾವಿದರು ಚಿತ್ರದ ತಾರಾಬಳಗದಲ್ಲಿದ್ದಾರೆ. ಅಲ್ಲಿಗೆ "ಫಾದರ್" ಸಿನಿಮಾದ ಕುತೂಹಲ ಮತ್ತಷ್ಟು ಹೆಚ್ಚಿದೆ.

ಚಂದ್ರು ಅವರ ನಿರ್ಮಾಣದ ಚಿತ್ರಗಳಿಗೆ ಅವರದೆ ಆದ ಅಭಿಮಾನಿ ಬಳಗ ಇದೆ. "ಫಾದರ್" ಕೂಡ ಅವರ ನಿರೀಕ್ಷೆಯನ್ನು ಹೆಚ್ಚಿಸಿದೆ. ತಂದೆ - ಮಗನ ಬಾಂಧವ್ಯದ "ಫಾದರ್" ಚಿತ್ರ ಈ ವರ್ಷದ ಹಿಟ್ ಲಿಸ್ಟ್ ಸಿನಿಮಾಗಳ ಸಾಲಿಗೆ ಸೇರುವ ಎಲ್ಲಾ ಲಕ್ಷಣಗಳೂ ಇವೆ. ಅಭಿಮಾನಿಗಳು ಸಹ ಈ ಚಿತ್ರದ ಬಿಡುಗಡೆಗೆ ಕಾತುರದಿಂದ ಕಾಯುತ್ತಿದ್ದಾರೆ. ಉದ್ಯಮಿ ಆನಂದ್ ಪಂಡಿತ್ ಅರ್ಪಿಸುವ, ಆರ್.ಸಿ.ಸ್ಟುಡಿಯೋಸ್ ಈ ಸಿನಿಮಾ ನಿರ್ಮಿಸಿದರೆ, ರಾಜ್ ಮೋಹನ್ ನಿರ್ದೇಶನ ಮಾಡಿದ್ದಾರೆ. ಸುಜ್ಞಾನ್ ಛಾಯಾಗ್ರಹಣವಿದೆ. ನಕುಲ್ ಅಭಯಂಕರ್ ಸಂಗೀತ ಸಂಯೋಜನೆ "ಫಾದರ್" ಚಿತ್ರಕ್ಕಿದೆ.



# ಜೆರಾಕ್ಸ್ ಟ್ರೈಲರ್ ಬಿಡುಗಡೆ



ಜೀ5ನ ಬಹುನಿರೀಕ್ಷಿತ ವೆಬ್ ಸರಣಿ ಜೆರಾಕ್ಸ್ ನ ಟ್ರೈಲರ್ ಬಿಡುಗಡೆಯಾಗಿದೆ. 6 ಸಂಚಿಕೆಗಳುಳ್ಳ ಈ ಹಾಸ್ಯ ವೆಬ್ ಸರಣಿ ಇಂದು ತನ್ನ ಟ್ರೈಲರ್ ತುಣುಕಿನ ಮೂಲಕ ಎಲ್ಲರ ಮನೆ ಮಾತಾಗಿದೆ.

ಡಾಲಿ ಧನಂಜಯ ಅವರ ಡಾಲಿ ಪಿಕ್ಚರ್ಸ್ ಲಾಂಛನದಲ್ಲಿ ಹಾಗೂ ಬ್ಲಿಂಕ್ ಖ್ಯಾತಿಯ ನಿರ್ದೇಶಕ ಶ್ರೀನಿಧಿ ಬೆಂಗಳೂರು ನಿರ್ದೇಶನದಲ್ಲಿ ಮೂಡಿ ಬರುತ್ತಿರುವ ?ಜೆರಾಕ್ಸ್ ನಲ್ಲಿ ನಾಗಭೂಷಣ್, ಪಾಯಲ್ ಚೆಂಗಪ್ಪ ಮುಖ್ಯ ಭೂಮಿಕೆಯಲ್ಲಿ ನಟಿಸಿದ್ದು, ಮಂಜು ಪಾವಗಡ, ಓಂ ಪ್ರಕಾಶ್ ರಾವ್, ಶ್ರೀವತ್ಸ, ಯಶ್ವಂತ್ ಶೆಟ್ಟಿ, ವಿಜಯ್ ಪ್ರಸಾದ್, ತುಕಾಲಿ ಸಂತು, ಜಗ್ಗಪ್ಪ, ಸಿದ್ದು ಮಂಡ್ಯ, ಸುಧಾಕರ್ ಗೌಡ ಮುಂತಾದವರು ನಟಿಸಿರುತ್ತಾರೆ.

ಮಳವಳ್ಳಿಯ ರಾಯದುರ್ಗದ ಪ್ರಕಾಶ (ನಾಗಭೂಷಣ) ಒಬ್ಬ ಸಾಮಾನ್ಯ ಜೆರಾಕ್ಸ್ ಅಂಗಡಿ ಕೆಲಸಗಾರನಾಗಿರುತ್ತಾನೆ. ಅವನ ಜೆರಾಕ್ಸ್ ಯಂತ್ರಕ್ಕೆ ಒಂದು ತಾಯಿತ ಸೇರಿದಾಗ ಅವನ ಜೀವನ ಬದಲಾಗುತ್ತದೆ. ಅವನು ತೆಗೆಯುವ ಜೆರಾಕ್ಸ್ ಕಾಪಿಗಳಿಗೆ ಜೀವ ಬಂದು ಅವನ ಜೀವನ ಉಲ್ಟಾಪಲ್ಟಾವಾಗುತ್ತದೆ. ಇದರಿಂದ ಆಗುವ ಅಚಾನಕ್ ಬದಲಾವಣೆಗಳು, ಊರಿನಲ್ಲಾಗುವ ಆಶ್ಚರ್ಯಕರ ಘಟನೆಗಳು, ಕುತೂಹಲಕಾರಿ ಸನ್ನಿವೇಶಗಳನ್ನು ಕಥೆ ಎಳೆ ಎಳೆಯಾಗಿ ಬಿಚ್ಚಿಡುತ್ತದೆ. ಜೀ5ನಲ್ಲಿ ಇದೇ ಏಪ್ರಿಲ್ 24ರಿಂದ ಈ ವೆಬ್ ಸರಣಿಯು ಪ್ರೇಕ್ಷಕರಿಗೆ ನಗೆ ಊಟ ಉಣಬಡಿಸಲಿದೆ.

ನಟ, ನಿರ್ಮಾಪಕ ಡಾಲಿ ಧನಂಜಯ ಮಾತನಾಡಿ, "ನನಗೆ ಈ ಕಥೆ ಇಷ್ಟವಾಗಲು ಕಾರಣ ಅದು ಹೇಳುವ ತತ್ವ, ಪ್ರತಿಯೊಂದು ಹಾಸ್ಯ ಸನ್ನಿವೇಶದ ಹಿಂದೆ ಅಡಗಿರುವ ತತ್ವ, ನನ್ನನ್ನು ತನ್ನತ್ತ ಸೆಳೆಯಿತು ಎಂದರು.

ನಿರ್ದೇಶಕ ಶ್ರೀನಿಧಿ ಬೆಂಗಳೂರು ಮಾತನಾಡಿ, "ನಮ್ಮ ಕಾಪಿ ನಾವು ನೋಡಲು ಬಯಸದ ನಮ್ಮ ಒಂದು ವ್ಯಕ್ತಿವವನ್ನು ಬಿಂಬಿಸಿದರೆ ಹೇಗೆ ಇರುತ್ತದೆ ಮಳವಳ್ಳಿಯಲ್ಲಿ ನಡೆಯುವ ಘಟನೆಯೊಂದನ್ನು ತೋರಿಸುವ ಪ್ರಯತ್ನ ?ಜೆರಾಕ್ಸ್ ಆಗಿದೆ." ಎಂದು ತಿಳಿಸಿದರು.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,